ಸಂಪುಟ: 13 Volume | ಸಂಚಿಕೆ: 300 Issue | ಪುಟಗಳು 08 Pages | ಶನಿವಾರ 17 ಜನವರಿ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಒಂದು ಗ್ರಂಥಾಲಯದ ಎಲ್ಲಾ ತಿಳುವಳಿಕೆಗಳನ್ನು ತಲೆಯಲ್ಲಿರಿಸಿ ಅಹಂಕರಿಸಿ ನಡೆಯುವ ಒಬ್ಬ ವ್ಯಕ್ತಿಗಿಂತ ಒಳ್ಳೆಯ ಸ್ವಭಾವ ಮತ್ತು ನಡವಳಿಕೆಯಿರುವ ಒಬ್ಬ ಸಾಧಾರಣ ವ್ಯಕ್ತಿ ಮೇಲು.

–ಸ್ವಾಮಿ ವಿವೇಕಾನಂದ

ಗಲಭೆಗಳು ತಡೆಗೆ ಬಿಜೆಪಿ ಮಹಿಳಾ ಮೋರ್ಚಾ 4
ವಸ್ತು ಪ್ರದರ್ಶನಕ್ಕೆ ಗೌಸಿಯಾ ಬೇಗಂ ಅವರಿಂದ ಚಾಲನೆ 6
ಶಬರಿಮಲೆ ಸಂಪ್ರದಾಯದಂತೆ ಪಡಿಪೂಜೆ 7



ಪೀಣ್ಯ,ದಾಸರಹಳ್ಳಿ: ರಾಜಗೋಪಾಲನಗರ ವಾರ್ಡ್ ನ ಕೆಂಪೇಗೌಡ ಬಡಾವಣೆಯಲ್ಲಿ ಮಣಿಕಂಠ ಭಕ್ತ ಮಂಡಳಿ ವತಿಯಿಂದ ಹಮ್ಮಿಕೊಂಡಿದ್ದ ಪಡಿಪೂಜೆಯಲ್ಲಿ ಗುರುಸ್ವಾಮಿಗಳಾದ ನಾಗರಾಜ್ ಗುಂಡು ಸ್ವಾಮಿ ಅಮರೇಶ್ ಸ್ವಾಮಿ ಅನೇಕ ಅಯ್ಯಪ್ಪ ಭಕ್ತರು ಹಾಗೂ ಸ್ಥಳೀಯ ಮುಖಂಡರುಗಳು ಪಡಿ ಪೂಜೆಯಲ್ಲಿ ಭಾಗವಹಿಸಿದರು ರಾಜಗೋಪಾಲನಗರ ವಾರ್ಡ್ ನ ಕಾಂಗ್ರೆಸ್ ಅಧ್ಯಕ್ಷರಾದ ಬಿ ಜಗದೀಶ್ ಕುಮಾರ್ ರವರು ಭಾಗವಹಿಸಿ ಅಯ್ಯಪ್ಪನ ಆಶೀರ್ವಾದ ಪಡೆದರು. ಪಡಿ ಪೂಜೆಯ ಪ್ರಯುಕ್ತ ಮಣಿಕಂಠ ಭಕ್ತ ಮಂಡಳಿ ವತಿಯಿಂದ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಹಾಗೂ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.

## ತಹಶೀಲ್ದಾರ್ ವಿರುದ್ಧ ಆರೋಪ: ವೈರಲ್

**ಕಲಬುರಗಿ:** ಜೇವರ್ಗಿ ತಹಶೀಲ್ದಾರ್ ಮಲ್ಲಣ್ಣ ಯಲಗೋಡ ವಿರುದ್ಧ ಸಭೆಯಲ್ಲಿಯೇ ಸಿಬ್ಬಂದಿಯಿಂದ ಲಂಚಕ್ಕೆ ಬೇಡಿಕೆ ಇಟ್ಟಿರುವ ವಿಚಿತ್ರ ಆರೋಪ ಚರ್ಚೆಗೆ ಗ್ರಾಸವಾಗಿದೆ. ಮಲ್ಲಣ್ಣ ಯಲಗೋಡ ಹಾಗೂ ಸಿಬ್ಬಂದಿ ನಡುವಿನ ಸಂಭಾಷಣೆಯ ಆಡಿಯೋ ವೈರಲ್ ಆಗಿದೆ. ತಹಶಿಲ್ದಾರ್ ಕಾಟಕ್ಕೆ ಬೇಸತ್ತ ಸಿಬ್ಬಂದಿ ಮೇಲಧಿಕಾರಿಗಳಿಗೆ ದೂರು ನೀಡಿದ್ದಾರೆ. ವೈರಲ್ ಆಗಿರುವ ಆಡಿಯೋದಲ್ಲಿ ತಹಶಿಲ್ದಾರ್ ಮಲ್ಲಣ್ಣ, ನನ್ನ ಹೆಸರಲ್ಲಿ ನೀವು ಹಣ ಮಾಡುತ್ತೀರಿ. ಹಾಗಾಗಿ ನನಗೂ ಹಣ ನೀಡಿ ಎಂದು ಸಿಬ್ಬಂದಿಗಳಿಗೆ ಧಮ್ಕಿ ಹಾಕಿದ್ದಾರೆ. ಆಡಿಯೋ ವೈರಲ್ ಆಗುತ್ತಿದ್ದಂತೆ ತಹಶಿಲ್ದಾರ್ ಮಲ್ಲಣ್ಣ, ಆರು ತಿಂಗಳ ಹಿಂದೆ ಕನ್ನಡ ಭವನದಲ್ಲಿ ನಡೆದಿದ್ದ ಕಾರ್ಯಕ್ರಮದ ವಿಚಾರವಾಗಿ ನಾನು ಸಿಬ್ಬಂದಿಗಳ ಸಭೆ ನಡೆಸಿ ಚರ್ಚಿಸಿದ್ದೆ ಹೊರತು ನಾನು ಯಾರ ಬಳಿಯೂ ಹಣ ಕೇಳಿಲ್ಲ. ನನ್ನ ವಿರುದ್ಧದ ಆರೋಪ ಸುಳ್ಳು ಎಂದಿದ್ದಾರೆ.

## ಬೈಕ್ ಸವಾರ ಸಾವು: ಸಚಿವ ಸಾಂತ್ವನ



**ಬೀದರ್:** ಮಕರ ಸಂಕ್ರಾಂತಿ ಹಬ್ಬದ ಅಂಗವಾಗಿ ಗಾಳಿಪಟ ಹಾರಿಸುವ ಸಂದರ್ಭದಲ್ಲಿ ನಿಷೇಧಿತ ಚೀನಾ ತಯಾರಿಕೆಯ ಮಾಂಜಾ ದಾರ ಬಳಕೆಯಿಂದ, ರಾಷ್ಟ್ರೀಯ ಹೆದ್ದಾರಿ 65ರ ನಿರ್ಣಾ ಕ್ರಾಸ್ ಸಮೀಪ ದ್ವಿಚಕ್ರ ವಾಹನ ಸವಾರರಾದ ಸಂಜುಕುಮಾರ್ ಗುಂಡಪ್ಪ ಹೊಸಮನಿ (ನಿವಾಸಿ : ಬಂಬುಳಗಿ ಗ್ರಾಮ, ಬೀದರ್ ತಾಲ್ಲೂಕು) ಅವರು ಮಾಂಜಾ ದಾರಿಗೆ ಸಿಲುಕಿ ದಾರುಣವಾಗಿ ಸಾವನ್ನಪ್ಪಿರುವ ಘಟನೆಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಇಂದು ಸಚಿವರು ಮೃತರ ನಿವಾಸಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ವೈಯಕ್ತಿಕವಾಗಿ ಧನ ಸಹಾಯ ನೀಡಿದ್ದು, ಸರ್ಕಾರದ ಕಡೆಯಿಂದಲೂ ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರ ಒದಗಿಸುವ ಭರವಸೆ ನೀಡಿದ್ದಾರೆ. ನಿಷೇಧಿತ ಚೀನಾ ಮಾಂಜಾ ದಾರ ಮಾನವ ಜೀವಕ್ಕೆ ಅತ್ಯಂತ ಅಪಾಯಕಾರಿ ಆಗಿದ್ದು, ಇಂತಹ ದುರ್ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ತಿಳಿಸಿದ್ದಾರೆ.

## ಬಿಜೆಪಿಯ ಮಹಾ ಜಯ, ವಿಜಯೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಮಹಾರಾಷ್ಟ್ರದ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ ಮತ್ತು ಅದರ ಮಿತ್ರಪಕ್ಷಗಳ ಭರ್ಜರಿ ಗೆಲುವಿನ ನಂತರ, ಬೆಂಗಳೂರಿನ ಬಿಜೆಪಿ ಕಚೇರಿಯ ಬಳಿ ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಲಾಯಿತು.

ಮಹಾರಾಷ್ಟ್ರದ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬಿಜೆಪಿ ಗೆಲುವಿನ ನಂತರ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಪ್ರಧಾನಿ ನರೇಂದ್ರ ಮೋದಿ ಹಾಗೂ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರನ್ನು ಅಭಿನಂದಿಸಿದ್ದಾರೆ.

## ಖಂಡ್ರೆ ಆರೋಗ್ಯದಲ್ಲಿ ಏರುಪೇರು

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಮಾಜಿ ಸಚಿವ, ಶತಾಯುಷಿ ಡಾ.ಭೀಮಣ್ಣ ಖಂಡ್ರೆ(102) ಆರೋಗ್ಯದಲ್ಲಿ ಶುಕ್ರವಾರ ಮತ್ತೆ ಏರುಪೇರು ಕಂಡು ಬರುತ್ತಿದೆ. ಕಳೆದ ನಾಲ್ಕೈದು ದಿನಗಳಿಂದ ಆರೋಗ್ಯದಲ್ಲಿ ಸ್ವಲ್ಪಮಟ್ಟಿನ ಚೇತರಿಕೆ ಕಂಡ ಬಂದಿತು.

ಆದರೆ ಶುಕ್ರವಾರ ಮಧ್ಯಾಹ್ನ 2 ಗಂಟೆಯಿಂದ ಉಸಿರಾಟದಲ್ಲಿ ತೀವ್ರ ತೊಂದರೆ ಕಂಡು ಬಂದ ಹಿನ್ನೆಲೆಯಲ್ಲಿ ಆರೋಗ್ಯದಲ್ಲಿ ಏರುಪೇರು ಆಗುತ್ತಿದೆ. ಕಳೆದ ನಾಲ್ಕೈದು ದಿನಗಳಿಂದ ಸಾವರ್ಜನಿಕರು, ಕಾರ್ಯಕರ್ತರು, ಅಭಿಮಾನಿಗಳ ಭೇಟಿಗೆ ಅವಕಾಶ ನೀಡಲಾಗಿತ್ತು. ಆದರೆ ಡಾ.ಭೀಮಣ್ಣ ಖಂಡ್ರೆ ಅವರ ಆರೋಗ್ಯ ಕ್ಷೀಣಿಸುತ್ತಿರುವುದರಿಂದ ಶುಕ್ರವಾರ ಬೆಳಿಗ್ಗೆಯಿಂದಲೇ ಯಾರಿಗೂ ಭೇಟಿ ಅವಕಾಶ ನೀಡುತ್ತಿಲ್ಲ.

ವೈದ್ಯರ ತಂಡ ನಿಗಾ ವಹಿಸಿದ್ದು ಚಿಕಿತ್ಸೆ ಮುಂದುವರೆಸಿದೆ. ನಾಡೋಜ ಡಾ.ಬಸವಲಿಂಗಪಟ್ಟದ್ದೇವರು, ಹುಬ್ಬಳ್ಳಿ ಮೂರು ಸಾವಿರ ಮಠದ ಶ್ರೀಗಳು, ಸುಲಫಲ ಶ್ರೀಗಳು, ಗುರುಬಸವ ಪಟ್ಟದ್ದೇವರು, ಸೋನ್ನದ ಶ್ರೀಗಳು ಸೇರಿ ಮುಂತಾದವರು ಭೇಟಿ ಡಾ.ಭೀಮಣ್ಣ ಖಂಡ್ರೆ ಅವರ ಆರೋಗ್ಯ ವಿಚಾರಿಸಿದ್ದಾರೆ.

# ಕೈಯಲ್ಲಿ ಶೀತಲ ಸಮರ

### ಕೊನೆಗೂ ನಿಲ್ಲದ ಕುರ್ಚಿಯ ಕಾದಾಟ | ಜಾರ್ಜ್ ಮೂಲಕ ಸಿಎಂ ಸೋನಿಯಾ ಭೇಟಿಯ ಯತ್ನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕುರ್ಚಿಯ ಕಾದಾಟ ಕೊನೆಗೂ ನಿಲ್ಲುವ ಲಕ್ಷಣ ಕಾಣುತ್ತಿಲ್ಲ. ಸಿಎಂ ಹಾಗೂ ಡಿಸಿಎಂ ನಡುವಿನ ಶೀತಲ ಸಮರ ದಿನಕ್ಕೊಂದು ತಿರುವು ಪಡೆಯತೊಡಗಿದೆ. ಇದು ಕಾಂಗ್ರೆಸ್ ಪಾಳಯದಲ್ಲಿ ನಡೆಯುತ್ತಿರುವ ಶೀತಲ ಸಮರ ಗಂಭೀರ ಸ್ವರೂಪವನ್ನು ಅನಾವರಣ ಮಾಡುತ್ತಿದೆ.

**ಜಾರ್ಜ್ ಮೂಲಕ ಯತ್ನ:** ಏತನ್ಮಧ್ಯೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ಲೋಕಸಭೆಯ ಪ್ರತಿ ಪಕ್ಷದ ನಾಯಕ ರಾಹುಲ್‌ಗಾಂಧಿಯನ್ನು ಭೇಟಿ ಮಾಡುವ ಮೊದಲೇ, ಬೆಂಗಳೂರಿನಲ್ಲಿ ಸಿಎಂ ಸಿದ್ದರಾಮಯ್ಯ ಸಚಿವ ಕೆ.ಜೆ.ಚಾರ್ಜ್ ಮೂಲಕ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಅವರನ್ನು ಸಂಪರ್ಕಿಸುವ ಯತ್ನ ನಡೆಸಿರುವುದು ಗಮನಸೆಳೆದಿದೆ.

**ಹೇಳಿಕೆಗಳ ಗೊಂದಲ:** ದೆಹಲಿ ಮತ್ತು ಬೆಂಗಳೂರಿನಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಕದನ ಕುತೂಹಲ ಹೆಚ್ಚಿಸಿವೆ. ಅಧಿಕಾರ ಹಂಚಿಕೆ ಸಂಬಂಧಪಟ್ಟಂತೆ ಯಾವುದೇ ಗೊಂದಲಗಳಿಲ್ಲ ಎಂದು ಮುಖ್ಯಮಂತ್ರಿಯವರು ಒಮ್ಮೆ ಹೇಳಿದರೆ, ಮತ್ತೊಮ್ಮೆ ಹೈಕಮಾಂಡ್ ಹೇಳಿದಂತೆ ಕೇಳುತ್ತೇವೆ ಎಂದು ಹೇಳುವ ಮೂಲಕ ಗೊಂದಲ ಮೂಡಿಸುತ್ತಿದ್ದಾರೆ.

**ಸಿಎಂ ಕಟ್ಟಾ ಬೆಂಬಲಿಗ ಜಾರ್ಜ್**

ಡಿ.ಕೆ.ಶಿವಕುಮಾರ್ ಅವರು ನಾಯಕತ್ವ ಬದಲಾವಣೆಯ ವಿಚಾರವಾಗಿ ಕಾರ್ಯಾಚರಣೆ ಆರಂಭಿಸುವ ಮೊದಲು ಇದೇ ಕೆ.ಜೆ.ಜಾರ್ಜ್ ಅವರನ್ನು ಭೇಟಿ ಮಾಡಿ ಬೆಂಬಲ ಯಾಚಿಸಿದ್ದರು. 2013ರಿಂದ 2018ರ ನಡುವೆ ಸಿದ್ದರಾಮಯ್ಯ ಸರ್ಕಾರದಲ್ಲಿ ಕೆ.ಜೆ.ಚಾರ್ಜ್ ಬೆಂಗಳೂರು ನಗರ ಅಭಿವೃದ್ಧಿ ಸಚಿವರಾಗಿದ್ದರು. ಅಂದಿನಿಂದಲೂ ಸಿದ್ದರಾಮಯ್ಯ ಬಣದಲ್ಲಿ ಕಟ್ಟಾ ಬೆಂಬಲಿಗರಾಗಿ ಗುರುತಿಸಿಕೊಂಡಿದ್ದಾರೆ.



**ಸೋನಿಯಾಗಾಂಧಿ ಭೇಟಿ ಯಾಕೆ..?**

ರಾಹುಲ್ ಒಂದು ವೇಳೆ ಡಿ.ಕೆ.ಶಿವಕುಮಾರ್ ಅವರಿಗೆ ಭರವಸೆ ಕೊಟ್ಟುಬಿಟ್ಟರೆ ಮುಂದಿನ ಬೆಳವಣಿಗೆಗಳು ಕೈತಪ್ಪಿ ಹೋಗಲಿವೆ ಎಂಬ ಆತಂಕ ಸಿಎಂ ಅವರನ್ನು ಕಾಡುತ್ತಿದೆ. ಅತ್ತ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ರಾಹುಲ್ ಗಾಂಧಿಯನ್ನು ಭೇಟಿ ಮಾಡುವ ಮುನ್ನ ಸಿಎಂ ಅವರು ಸೋನಿಯಾ ಜೊತೆ ಮಾತುಕತೆ ನಡೆಸುವ ಪ್ರಯತ್ನ ನಡೆಸಿದ್ದಾರೆ ಎಂದು ಮೂಲಗಳು ಖಚಿತ ಪಡಿಸಿವೆ.

**ನನ್ನ–ಸಿಎಂ, ವರಿಷ್ಠರ ಚರ್ಚೆ: ಡಿಕೆಶಿ**

ದೆಹಲಿ ಕರ್ನಾಟಕ ಸೇರಿ ಎಲ್ಲೆಡೆ ಕುರ್ಚಿ ಕಿತ್ತಾಟ ಚಟುವಟಿಕೆಗಳು ರಾಜ್ಯ ಕಾಂಗ್ರೆಸ್ಸಿನ ಭಿನ್ನಮತಕ್ಕೆ ಸಾಕ್ಷಿಯಾಗಿವೆ. ಈ ಬಗ್ಗೆ ದೆಹಲಿಯಲ್ಲಿ ಮಾತನಾಡಿದ ಡಿಸಿಎಂ ಡಿಕೆಶಿವಕುಮಾರ್ ಅವರು, ಸಿಎಂ ಸ್ಥಾನದ ವಿಚಾರ ನನ್ನ, ಸಿಎಂ ಹಾಗೂ ಹೈಕಮಾಂಡ್ ನಡುವಣ ವಿಚಾರ. ಇದು ಬಹಿರಂಗ ಚರ್ಚೆ ವಿಷಯ ಅಲ್ಲ. ನಾನು ನಾಯಕರನ್ನು ಭೇಟಿ ಮಾಡಲೆಂದೇ ದಿಲ್ಲಿಗೆ ಬಂದಿರುವೆ ಎಂದಿದ್ದಾರೆ.

**ಆ ಚರ್ಚೆ ಬಿಡಿ, ಪ್ರಗತಿ ನೋಡಿ**

ದಿನ ಬೆಳಗಾದರೆ ನಾಯಕತ್ವ ಬದಲಾವಣೆಯ ಬಗ್ಗೆ ಚರ್ಚಿಸುವುದನ್ನು ಬಿಟ್ಟು ನಾಡಿನ ಅಭಿವೃದ್ಧಿಯ ಕಡೆ ಗಮನ ಹರಿಸುವುದು ಎಲ್ಲರ ಕರ್ತವ್ಯ. ನಾಯಕತ್ವದ ವಿಚಾರವನ್ನು ಕಾಂಗ್ರೆಸ್ ಹೈಕಮಾಂಡ್ ನೋಡಿಕೊಳ್ಳುತ್ತದೆ. ಹೀಗಾಗಿ ನಾಯಕತ್ವದ ಬದಲಾವಣೆ ಎಂಬುದು ಸಾರ್ವಜನಿಕ ಚರ್ಚೆಯ ವಿಷಯವಾಗಬಾರದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.



## ಸಚಿವ ಪ್ರಿಯಾಂಕ್ ಸರ್ಟಿಫಿಕೇಟ್ ಬೇಡ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಜೆಡಿಎಸ್ ಬಗ್ಗೆ ಚರ್ಚೆ ಮಾಡಲು ಸಚಿವ ಪ್ರಿಯಾಂಕ್ ಖರ್ಗೆ ಅವರ ಸರ್ಟಿಫಿಕೇಟ್ ನಮಗೆ ಬೇಕಿಲ್ಲ. ಕಾಂಗ್ರೆಸ್ ಪಕ್ಷದಲ್ಲಿ ಇರತಕ್ಕಂತ ಮಂತ್ರಿಗಳು ಎಷ್ಟು ಜನ ಜೆಡಿಎಸ್ನಿಂದ ಲೀಸ್ ಮೇಲೆ ಹೋಗಿದ್ದಾರೆ ಅನ್ನೋದನ್ನ ಮೊದಲು ಅವರಪ್ಪನನ್ನು ಕೇಳಿ ತಿಳಿದುಕೊಳ್ಳಲಿ. ಮುಖ್ಯಮಂತ್ರಿಗಳಿಂದ ಹಿಡಿದು ಎಷ್ಟು ಜನ ಮಂತ್ರಿಗಳು ಜೆಡಿಎಸ್ ಮೂಲದವರು? ಗೊತ್ತಿದೆಯಾ ಎಂದು ಎಚ್ಡಿ ಕುಮಾರಸ್ವಾಮಿ ಅವರು ಕಿಡಿಕಾರಿದ ಜೆಡಿಎಸ್ ಪಕ್ಷದ ಅಸ್ತಿತ್ವದ ಬಗ್ಗೆ ಮಾತನಾಡಿದ್ದ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಕಿಡಿಕಾರಿದರು. ಕಾಂಗ್ರೆಸ್ ಪಕ್ಷದ ಸದ್ಯದ ಸ್ಥಿತಿಯನ್ನು 'ಲೀಸ್' ರಾಜಕಾರಣಕ್ಕೆ ಹೋಲಿಸಿ ಟೀಕಿಸಿದ್ದಾರೆ.

ಅಭಿವೃದ್ಧಿ ಬಗ್ಗೆ ಮಾತನಾಡುವ ಪ್ರಿಯಾಂಕ್ ಖರ್ಗೆ ಅವರೇ, ಮೈಸೂರು, ಕನಕಪುರ ಮತ್ತು ರಾಮನಗರದಲ್ಲಿ ಆಗಿರುವ ಅಭಿವೃದ್ಧಿ ನಿಮ್ಮ ಕ್ಷೇತ್ರದಲ್ಲಿ ಆಗಿದೆಯೇ? ಎಂದು ಕೇಳಿದ್ದಾರೆ.

## ನರೇಗಾ ಚರ್ಚೆಗೆ ಅಧಿವೇಶನ ಸಲ್ಲ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಕೇಂದ್ರ ಸರಕಾರ ನರೇಗಾ ಯೋಜನೆಯಲ್ಲಿ ಪಾರದರ್ಶಕತೆ ತರುವ ನಿಟ್ಟಿನಲ್ಲಿ ಮಾಡಿರುವ ಬದಲಾವಣೆ ವಿರೋಧಿಸಲು ರಾಜ್ಯದ ಕಾಂಗ್ರೆಸ್ ಸರಕಾರ ವಿಧಾನಮಂಡಲದ ವಿಶೇಷ ಅಧಿವೇಶನ ನಡೆಸಲು ಮುಂದಾಗಿರುವುದು ಸರಿಯಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ನಗರದಲ್ಲಿ ಶುಕ್ರವಾರ ಸಂಜೆ ಸುದ್ದಿಗಾರರೊಂದಿಗೆ ಮಾತನಾಡಿದ, ವಿಶೇಷ ಅಧಿವೇಶನ ಕರೆಯುವ ಅವಶ್ಯಕತೆಯೇ ಇರಲಿಲ್ಲ. ಕೇಂದ್ರ ಸರಕಾರದ ವಿರುದ್ಧ ದ್ವೇಷ ಸಾಧಿಸಲು ಹೊರಟಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಶಾಸನಸಭೆಯ ಪಾವಿತ್ರ್ಯತೆಯನ್ನು ಹಾಳು ಮಾಡುವಂತಹ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಕೇಂದ್ರದ ವಿರುದ್ಧ ಜನರನ್ನು ಎತ್ತಿಕಟ್ಟುವ ಕೆಲಸ ಮಾಡಿ ಸಿದ್ದರಾಮಯ್ಯ ಅವರು ತಮ್ಮ ಮುಖ್ಯಮಂತ್ರಿ ಕುರ್ಚಿ ಉಳಿಸಿಕೊಳ್ಳಲು ಏಕಾಏಕಿ ವಿಶೇಷ ಅಧಿವೇಶನ ಕರೆದಿರುವುದು ಖಂಡಿತ ಇದು ಪ್ರಜಾಪ್ರಭುತ್ವ ವಿರೋಧಿ ನಡೆಯಾಗಿದೆ ಎಂದಿದ್ದಾರೆ.

## ಸಮಾಜದ ಎಲ್ಲ ಅಂಗದಲ್ಲೂ ಬದಲಾವಣೆ




• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಾಯಕತ್ವದ ವಿಚಾರವನ್ನು ಕಾಂಗ್ರೆಸ್ ಹೈಕಮಾಂಡ್ ನೋಡಿಕೊಳ್ಳುತ್ತದೆ. ಹೀಗಾಗಿ ನಾಯಕತ್ವದ ಬದಲಾವಣೆ ಎಂಬುದು ಸಾರ್ವಜನಿಕ ಚರ್ಚೆಯ ವಿಷಯವಾಗಬಾರದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ಕರ್ನಾಟಕ ರಾಜ್ಯ ಲಾನ್ ಟೆನ್ನಿಸ್ ಸಂಸ್ಥೆಯಲ್ಲಿ ನಡೆದ ಬೆಂಗಳೂರು ವರದಿಗಾರರ ಕೂಟದ ಸುವರ್ಣ ಮಹೋತ್ಸವ ಡೈರೆಕ್ಟರಿ ಬಿಡುಗಡೆ ಮಾಡಿ ಮಾತನಾಡಿದ ಅವರು,

ವ್ಯವಸ್ಥೆಯಲ್ಲಿ ಈಗ ಯಾವುದೂ ಹಿಂದಿನಂತಿಲ್ಲ. ಸಾಕಷ್ಟು ಬದಲಾವಣೆಗಳಾಗಿವೆ. ಅದು ರಾಜಕೀಯ ರಂಗ ಅಂತಲ್ಲ, ಮಾಧ್ಯಮ ರಂಗವೂ ಸೇರಿದಂತೆ ಸಮಾಜದ ಎಲ್ಲ ಅಂಗಗಳಲ್ಲೂ ಬದಲಾವಣೆಯಾಗಿದೆ ಎಂದಿದ್ದಾರೆ.

ವ್ಯವಸ್ಥೆ ಸುಗಮವಾಗಿ ಸಾಗಲು ಇಂತಹ ಅಂಗ ಹೀಗೆ ಕೆಲಸ ಮಾಡಬೇಕಿತ್ತು ಎಂದು ನಾವು ಅಂದುಕೊಳ್ಳುತ್ತೇವೆ. ಆದರೆ ಅಂದುಕೊಳ್ಳುವುದೇ ಬೇರೆ. ಪರಿಸ್ಥಿತಿಯೇ ಬೇರೆ ಎಂದು ವಿಷಾದಿಸಿದರು. ಹಿರಿಯ ಪತ್ರಕರ್ತರಾದ ಹುಣಸವಾಡಿ ರಾಜನ್, ಮಾಧ್ಯಮ ಅಕಾಡೆಮಿಯ ಮಾಜಿ ಅಧ್ಯಕ್ಷರಾದ ಎಂ.ಸಿದ್ಧರಾಜು, ಹಿರಿಯ ಪತ್ರಕರ್ತರಾದ ಬಿ.ಪಿ.ಮಲ್ಲಪ್ಪ, ಮೈ.ಸಿ.ಪಾಟೀಲ್, ಬೆಲಗೂರು ಸಮೀವುಲ್ಲಾ, ಶಾಂತಲಾ ಧರ್ಮರಾಜ್; ಅವರು ಮಾತನಾಡಿದರು. ಮಾಜಿ ಸಚಿವರಾದ ಕೆ.ಗೋಪಾಲಯ್ಯ ಮತ್ತಿತರರಿದ್ದರು.

## ಟ್ಯಾಂಕರ್ ಪಲ್ಟಿ: ಎಣ್ಣೆಗೆ ಮುಗಿಬಿದ್ದ ಜನತೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಪಾಮ್ ಆಯಿಲ್ ಸಾಗಿಸುತ್ತಿದ್ದ ಟ್ಯಾಂಕರ್ ಲಾರಿಯೊಂದು ರಸ್ತೆ ತಿರುವಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ಇದರಿಂದ ಲಾರಿಯಲ್ಲಿದ್ದ ಎಣ್ಣೆ ರಸ್ತೆ ಮೇಲೆಲ್ಲಾ ಸೋರಿಕೆಯಾಗಿದೆ. ಈ ಘಟನೆ ಬಳ್ಳಾರಿಯ ಜಿಲ್ಲೆಯ ಕಂಪ್ಲಿ ತಾಲೂಕಿನ ದೇವಲಾಪುರ ಕಣಿವೆ ಮಾರೆಮ್ಮ ದೇವಸ್ಥಾನದ ಬಳಿ ನಡೆದಿದೆ. ಘಟನೆಯ ವೇಳೆ ಲಾರಿಯಲ್ಲಿ ಚಾಲಕ ಹಾಗೂ ಕ್ಲೀನರ್ ಇದ್ದರೂ, ಅದೃಷ್ಟವಶಾತ್ ಪ್ರಾಣಾಪಾಯವಾಗದೆ ಪಾರಾಗಿದ್ದಾರೆ.

ಲಾರಿಯಿಂದ ಎಣ್ಣೆ ಸೋರಿಕೆಯಾದ ಸುದ್ದಿ ಸುತ್ತಮುತ್ತಲಿನ ಗ್ರಾಮಗಳಿಗೆ ಹರಡುತ್ತಿದ್ದಂತೆ, ಪುರುಷರು, ಮಹಿಳೆಯರು, ಮಕ್ಕಳು ಬಕೆಟ್, ಪ್ಲಾಸ್ಟಿಕ್ ಬಿಂದಿಗೆ, ಡಬ್ಬ ವಿವಿಧ ಪಾತ್ರೆಗಳನ್ನು ಹಿಡಿದು ಸ್ಥಳಕ್ಕೆ ಧಾವಿಸಿದರು. ರಸ್ತೆ ಮೇಲೆ ಹರಿದಿದ್ದ ಪಾಮ್ ಆಯಿಲ್ ನ್ನು ಸಂಗ್ರಹಿಸಿಕೊಳ್ಳಲು ಜನರು ಮುಗಿಬಿದ್ದಿದ್ದರು. ಸ್ಥಳಕ್ಕೆ ಆಗಮಿಸಿದ ಪೊಲೀಸರು ಜನರನ್ನು ನಿಯಂತ್ರಿಸಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದಾರೆ.



## ಸಂಚಾರ ಪಿರಿಪಿರಿ, ಜನರಿಗೆ ಕಿರಿಕಿರಿ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಪಟ್ಟಣದ ಬಸವರಾಜ ವೃತ್ತದ ಮುಖ್ಯ ರಸ್ತೆಯಿಂದ ಗಾಂಧಿ ವೃತ್ತ, ಬಸವಣ್ಣ ದೇವಸ್ಥಾನದ ವರೆಗೆ ತುಂಬಾ ದಟ್ಟ ಸಂಚಾರ ವ್ಯವಸ್ಥೆಯಾಗಿದೆ. ಇದರಿಂದ ಸಾರ್ವಜನಿಕರ ದ್ವಿಚಕ್ರ ವಾಹನ ಓಡಾಟಕ್ಕೆ ತೀವ್ರ ತೊಂದರೆ ಆಗುತ್ತಿದೆ. ಅಂಗಡಿ ಮಾಲೀಕರು ಕೂಡ ವಾಹನಗಳ ಸುಗಮ ಸಂಚಾರಕ್ಕೆ ಆಸ್ಪದ ಕೂಡಬೇಕು ಅಂಗಡಿಗಳ ಎದುರು ಬದರು ಮನ ಬಂದಂತೆ ವಾಹನಗಳು ನಿಲುಸುತ್ತಿದ್ದಾರೆ. ಬೀದಿ ವ್ಯಾಪಾರಿಗಳ ತಳ್ಳು ಗಾಡಿಗಳು ಮನ ಬಂದಂತೆ ರಸ್ತೆಯ ಮಧ್ಯ ಭಾಗದಲ್ಲಿ ಬಂಡಿಗಳು ನಿಲ್ಲಿಸುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನಗಳ ಸವಾರರಿಗೆ ತೊಂದರೆಯಾಗುತ್ತಿದೆ. ಈ ಕಡೆ ಪೊಲೀಸ್ ಅಧಿಕಾರಿಗಳು ಹಾಗೂ ಪುರಸಭೆಯವರು ಈ ಕಡೆ ಗಮನ ಹರಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಸಾರ್ವಜನಿಕರು ಆಗ್ರಹಿಸಿದ್ದಾರೆ.



ಪುರಸಭೆ ವತಿಯಿಂದ ಸಂಚಾರ ನಿಯಮಗಳ ಪಾಲನೆ ಮಾಡುವ ಬಗ್ಗೆ ವ್ಯಾಪಾರಸ್ಥರಿಗೆ ಸಭೆ ಕರೆದು ಜಾಗೃತಿ ಮಾಡಲಾಗುವುದು. ಪಟ್ಟಣದ ವರ್ತಕರು ರಸ್ತೆ ಸಂಚಾರಕ್ಕೆ ಅಡ್ಡಿ ಪಡಿಸದೆ ಸುಗಮ ಸಂಚಾರಕ್ಕೆ ಸಹಕಾರ ನೀಡಬೇಕು.

–ಸತೀಶ್ ಗುಡ್ಡೆ, ಪುರಸಭೆ ಮುಖ್ಯಾಧಿಕಾರಿ, ಚಿಟಗುಪ್ಪ

**ಮಹಾರಾಷ್ಟ್ರದಲ್ಲಿ ಬಿಜೆಪಿಯ ಗೆಲುವು ಚಾರಿತ್ರಿಕ ವಿಜಯವಾಗಿದೆ. ಇದು ಪ್ರಧಾನಿ ನಾಯಕತ್ವಕ್ಕೆ ಸಿಕ್ಕ ಜಯ: ಸಂಸದ ಬೊಮ್ಮಾಯಿ**

# ಪಡಿತರ ವಿತರಣೆ ಸಮಸ್ಯೆ ಸರಿಪಡಿಸಲು ಅಧಿಕಾರಿಗಳಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:

ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಪಡಿತರ ವಿತರಣೆಯಲ್ಲಿ ತೊಂದರೆಗಳು ಎದುರಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ತಕ್ಷಣ ಸಮಸ್ಯೆಗಳನ್ನು ಸರಿಪಡಿಸಬೇಕೆಂದು ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಮಲನಗರ ತಾಲೂಕಿನ ಠಾಣಾ ಕುಶನೂರ ಹೋಬಳಿ ವ್ಯಾಪ್ತಿಯಲ್ಲಿನ ಲಿಂಗದಳ್ಳಿ(ಯು), ಮುಧೋಳ(ಬಿ), ತೋರ್ಣಾ ವಾಡಿ, ತೋರ್ಣಾ, ಹೊಳಸಮುದ್ರ, ಸಾವಳಿ, ಬಸನಾಳ, ಕೋರಿಯಾಳ, ಮುಧೋಳ(ಕೆ)ನಲ್ಲಿ ಗ್ರಾಮ ಸಂಚಾರ ನಡೆಸಿ ಅವರು ಮಾತನಾಡಿದರು.



ಕೆಲವು ಪಡಿತರ ಅಂಗಡಿಗಳಲ್ಲಿ ಸರಿಯಾದ ಸಮಯಕ್ಕೆ ಅಕ್ಕಿ, ಗೋಧಿ ಸೇರಿದಂತೆ ಅಗತ್ಯ ವಸ್ತುಗಳು ವಿತರಣೆ ಆಗುತ್ತಿಲ್ಲ, ಫಲಾನುಭವಿಗಳ ಹೆಸರುಗಳು ಪಟ್ಟಿಯಿಂದ ಕೈ ತಪ್ಪಿರುವುದು, ತಾಂತ್ರಿಕ ಸಮಸ್ಯೆಗಳ ಹೆಸರಿನಲ್ಲಿ ಸಾರ್ವಜನಿಕರನ್ನು ಅಲಕ್ಷ್ಯ ಮಾಡುವಂತಹ ಪ್ರಕರಣಗಳು ಕೇಳಿ ಬರುತ್ತಿವೆ. ಇಂತಹ ಸಮಸ್ಯೆಗಳಿಗೆ ನಿರ್ಲಕ್ಷ್ಯ ವಹಿಸಬಾರದೆಂದು ಹೇಳಿದರು.

ಲಿಂಗದಳ್ಳಿ(ಯು) ಗ್ರಾಮಸ್ಥರು ಪ್ರತಿ ತಿಂಗಳು ಪಡಿತರಕ್ಕಾಗಿ ಎಲ್ಲ ಕೆಲಸ ಕಾರ್ಯಗಳನ್ನು ಬಿಟ್ಟು ಪಕ್ಕದ ಊರಿಗೆ ಹೋಗಬೇಕು. ಇದರಿಂದ ವಯಸ್ಸಾದವರು, ಆರೋಗ್ಯ ಸಮಸ್ಯೆ ಇರುವವರು ಒಳಗೊಂಡು ಎಲ್ಲರಿಗೂ ಸಮಸ್ಯೆಯಾಗುತ್ತಿದೆ. ದಯವಿಟ್ಟು ನಮ್ಮ ಗ್ರಾಮದಲ್ಲೇ ಪಡಿತರ ವಿತರಿಸಲು ವ್ಯವಸ್ಥೆ ಮಾಡಬೇಕೆಂದು ಗ್ರಾಮಸ್ಥರು ಶಾಸಕರಿಗೆ ಮನವಿ ಮಾಡಿದರು.

ಇದಕ್ಕೆ ಸ್ಪಂದಿಸಿದ ಶಾಸಕರು ಗ್ರಾಮಸ್ಥರ ಹಿತದೃಷ್ಟಿಯಿಂದ ಮುಂದಿನ ತಿಂಗಳಿನಿಂದ ಗ್ರಾಮದಲ್ಲಿಯೇ ಪಡಿತರ ಸಿಗುವಂತೆ ವ್ಯವಸ್ಥೆ ಮಾಡಬೇಕೆಂದು ತಿಳಿಸಿದರು.

ಅರ್ಹ ಫಲಾನುಭವಿಗಳಿಗೆ ಪಡಿತರ ವಿತರಣೆ ಯಾವುದೇ ಅಡೆತಡೆ ಇಲ್ಲದೆ ನಡೆಯಬೇಕು. ಅಧಿಕಾರಿಗಳು ಸ್ಥಳೀಯ ಮಟ್ಟದಲ್ಲಿ ಪರಿಶೀಲನೆ ನಡೆಸಿ, ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು. ಪಡಿತರ ವಿತರಣೆಯಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುವುದೆಂದು ಶಾಸಕರು ಹೇಳಿದರು. ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿ ಅಗತ್ಯ ಪರಿಹಾರ ಕಲ್ಪಿಸಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳ ಲಾಭ ನೇರವಾಗಿ ಬಡ ಮತ್ತು ಶ್ರಮಿಕ ವರ್ಗದವರಿಗೆ ತಲುಪಬೇಕು ಎಂಬ ಉದ್ದೇಶದಿಂದ ಗ್ರಾಮ ಸಂಚಾರ ನಡೆಸುತ್ತಿದ್ದು, ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದ್ದು, ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಸಾರ್ವಜನಿಕರಿಗೆ ಯಾವುದೇ ರೀತಿಯ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಹೇಳಿದರು.

ಇದೇ ವೇಳೆ ಗ್ರಾಮಸ್ಥರಿಂದ ವಿದ್ಯುತ್, ಬಸ್ ವ್ಯವಸ್ಥೆ, ಹೊಲಗಳಿಗೆ ದಾರಿ, ಪಿಂಚಣಿ, ವಿಧವಾ ವೇತನ ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಅಮಿತ ಕುಲಕರ್ಣಿ, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ, ಲೋಕೋಪಯೋಗಿ ಉಲಾಖೆ ಎಇಇ ಪ್ರೇಮಸಾಗರ, ಪಂಚಾಯತ ರಾಜ್ ಎಂಜಿನಿಯರಿಂಗ್ ಇಲಾಖೆ ಎಇಇ ಸುನೀಲ ಚಿಲ್ಲರ್ಗೆ, ಜೆಸ್ಕಾಂ ಎಇಇ ರವಿ ಕಾರಬಾರಿ, ಸಹಾಯಕ ಕೃಷಿ ನಿರ್ದೇಶಕ ಧೂಳಪ್ಪ ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಸುರೇಶ ಬೋಸ್ಲೆ, ಅರಹಂತ ಸಾವಳೆ, ಶಿವರಾಜ ಅಲ್ಮಾಜೆ, ಗಿರೀಶ ವಡೆಯರ್, ಬಾಬುರಾವ ತೋರ್ಣಾವಾಡಿ, ರಾಹುಲ ಪಾಟೀಲ, ವಿಷ್ಣು, ಭರತ ಕದಂ, ಅಶೋಕ ಮೇತ್ರೆ, ಉದಯ ಸೋಲಾಪೂರೆ, ಗಜಾನಂದ ವಟಗೆ, ಪ್ರವೀಣ ಸಿಗ್ರೆ, ಶಾಂತಕುಮಾರ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬಸವೇಶ್ವರ ವೃತ್ತದ ಅಭಿವೃದ್ಧಿ ಬದ್ಧ : ಡಾ.ಶರಣಪ್ರಕಾಶ ಪಾಟೀಲ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಬಹು ದಿನಗಳ ಬೇಡಿಕೆ ಹಾಗೂ ನಗರ ಸೌಂದರ್ಯ-ಕ್ಕೆ ಪುಷ್ಟಿ ನೀಡುವಂತಹ ಬಸವೇಶ್ವರ ವೃತ್ತದ ಅಭಿವೃದ್ಧಿಗೆ ಬದ್ಧವಾಗಿದ್ದೇನೆ. ಬೇಕಾದ ಕ್ರಮಗಳನ್ನು ಅನುಸರಿಸಿ ದುರಸ್ತಿ ಕೈಗೊಂಡು ಬಸವೇಶ್ವರ ವೃತ್ತವನ್ನು ಅಭಿವೃದ್ಧಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು. ಇಲ್ಲಿನ ಬಸವೇಶ್ವರ ವೃತ್ತಕ್ಕೆ ಬೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ವಾಸ್ತು ತಜ್ಞ ಬಸರಾಜಪ್ಪ ಖಂಡೇರಾವ್ ಅವರೊಂದಿಗೆ ಚರ್ಚಿಸಿ ಮಾತನಾಡಿದ ಅವರು, ಸೇಡಂ ಪಟ್ಟಣದ ಹೃದಯ ಭಾಗದಲ್ಲಿ ಸ್ಥಾಪಿತವಾಗಿರುವ ಅಣ್ಣ ಬಸವಣ್ಣ ಅವರ ಅಶ್ವಾರೂಢ ಮೂರ್ತಿ ಹಾಗೂ ಅದರ ಸುತ್ತಲಿನ ಸ್ಥಳದ ಸೌಂದರ್ಯ ಹೆಚ್ಚಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು. ತಜ್ಞ ಖಂಡೇರಾವ್ ಅವರೊಟ್ಟಿಗೆ ಚರ್ಚಿಸಿದಂತೆ ಫ್ಲೋರಿಂಗ್, ಹಿಂಭಾಗ ಗೋಡೆ ಹಾಗೂ ಬಸವೇಶ್ವರ ಮೂರ್ತಿ ಸ್ಥಳದ ಸುತ್ತಲಿನ ಗ್ರಾನೇಟ್ ದುರಸ್ತಿ ಕೈಗೊಳ್ಳಬೇಕಾಗಿದೆ ಎಂದರು. ಬಸವೇಶ್ವರ ವೃತ್ತದ ರಸ್ತೆ ನಡುವೆ ಇರುವ ಬಾಣಂತಿ ಕಂಬದ ಸುತ್ತಲೂ ವಾಹನಗಳು ಅಂತರ ಕಾಯ್ದು ಸಂಚರಿಸಲು ಒಂದೂವರೆ ಅಡಿ ವೃತ್ತಾಕಾರದ ಗಾರ್ಡನ್ ಸ್ಥಳವನ್ನು ನಿರ್ಮಿಸುವ ಕುರಿತು ಸೂಚಿಸಿಲಾಗಿದೆ. ಈಗಿರುವ ಪಾರ್ಕಿಂಗ್ ಟೈಲ್ಸ್ ತೆ-ಗೆದು ಸಿಸಿ ರಸ್ತೆ ಕಾಮಗಾರಿ ಕುರಿತು ಯೋಜಿಸಲಾಗಿದೆ ಎಂದು ಹೇಳಿದರು. ಈ ವೇಳೆ ಮುಖಂಡರಾದ ಬಸವರಾಜ ಪಾಟೀಲ ಊಡಗಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಶರಣರೆಡ್ಡಿ ಪಾಟೀಲ, ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ವಿಶ್ವನಾಥ ಪಾಟೀಲ ಬೊಮ್ಮನಹಳ್ಳಿ, ಕೃಷಿ ಸಮಾಜದ ಅಧ್ಯಕ್ಷ ಬಸವರಾಜ ರೇವಗೊಂಡ, ಪುರಸಭೆ ಮಾಜಿ ಅಧ್ಯಕ್ಷ ವೀರೇಂದ್ರ ರುದ್ನೂರು, ಶಿವರುದ್ರ ಕೊಳಕುರು, ಸತೀಶ್ ಪೂಜಾರಿ, ಸಂತೋಷ ತಳವಾರ ಸೇರಿದಂತೆ ಅನೇಕರಿದ್ದರು.

> **ನಗರಸೌಂದರ್ಯಕ್ಕೆಬೇಕಾದಅಭಿವೃದ್ಧಿಕೆಲಸಗಳನ್ನು ಮುಂದುವರೆಸಿಕೊಂಡು ಹೋಗಲಾಗುತ್ತದೆ. ಬಸವೇಶ್ವರ ವೃತ್ತ ಸೇರಿದಂತೆ ಅಂಬಿಗ ಚೌಡಯ್ಯ, ಸಂಗೊಳ್ಳಿ ರಾಯಣ್ಣ ಮೂರ್ತಿ ಸ್ಥಳದ ಅಭಿವೃದ್ಧಿಯನ್ನು ಕೈಗೊಳ್ಳಯವ ಕುರಿತು ವಾಸ್ತು ತಜ್ಞರೊಟ್ಟಿಗೆ ಚರ್ಚಿಸಿದ್ದೇನೆ. ಬರುವ ದಿನಗಳಲ್ಲಿ ಬೇಕಾದ ಅನುದಾನ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಂಡು ಈ ಮೂರು ಸ್ಥಳಗಳ ಅಭಿವೃದ್ಧಿ ಪಡಿಸುತ್ತೇನೆ.**
>
> ▼ **ಡಾ.ಶರಣಪ್ರಕಾಶ ಪಾಟೀಲ,**
>
> **ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ.**

# ಶ್ರೀಗಳ ಅಗಲಿಕೆ ಸಮಾಜಕ್ಕೆ ತುಂಬಲಾರದ ನಷ್ಟ: ಬಿ.ಪಾಟೀಲ್.

• ಮಲ್ಲಮ್ಮನುಡಿವಾರ್ತೆಯಾದಗಿರಿ

ಹಾಲುಮತ ಸಮಾಜದ ಇತಿಹಾಸ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿ ಮೂಡಿಸಿದ ಕೀರ್ತಿ ಕನಕ ಗುರು ಪೀಠದ ತಿಂಥಿಣಿ ಬ್ರಿಜ್ ನ್ ಪರಮಪೂಜ್ಯ ಶ್ರೀ ಸಿದ್ದರಾಮಾನಂದ ಪುರಿ ಮಹಾಸ್ವಾಮಿಗಳಿಗೆ ಸಲ್ಲುತ್ತದೆ ಎಂದು ಕನಕ ನೌಕರರ ಸಂಘದ ಕಲಬುರ್ಗಿ ವಿಭಾಗೀಯ ಅಧ್ಯಕ್ಷ ಬಸವರಾಜ್ ಪಾಟೀಲ್ ಕೊಂಕಲ ಹೇಳಿದರು.ಗುರುವಾರದಂದು ನಗರದ ಕನಕ ವೃತ್ತದಲ್ಲಿ ಜಿಲ್ಲಾ ಕುರುಬ ಸಮಾಜದ ವತಿಯಿಂದ ಹಮ್ಮಿಕೊಂಡಿದ್ದ ಭಾವಪೂರ್ಣ ಶ್ರದ್ಧಾಂಜಲಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಹಾಲುಮತ ಸಮಾಜದ ಏಳಿಗೆಗೆ ಹಗಲಿರಲು ಎನ್ನದೆ ಶ್ರಮಿಸಿದ್ದಾರೆ.ಅವರು ಕೇವಲ ಒಂದು ಸಮಾಜಕ್ಕೆ ಸೀಮಿತರಾಗದೆ ಎಲ್ಲಾ ವರ್ಗದವರನ್ನು ಅತ್ಯಂತ ಪ್ರೀತಿಯಿಂದ ಕಾಣುತ್ತಿದ್ದರು ಅವರ ಅಗಲಿಕೆಯಿಂದ ಹಾಲುಮತ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಕಂಬನಿ ಮಿಡಿದರು. ಶ್ರೀಗಳು ಶಿಕ್ಷಣ-ಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದರು ಜೊತೆಗೆ ಕಲೆ ಸಾಹಿತ್ಯ ಸಾಮಾಜಿಕ ಧಾರ್ಮಿಕ ಸಾಂಸ್ಕೃತಿಕ ಜಾನಪದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ದುಶ್ಚಟಗಳ ವಿರುದ್ಧ ಗ್ರಾಮೀಣ ಭಾಗದ ಯುವಕರಲ್ಲಿ ಜಾಗೃತಿ ಮೂಡಿಸಿದ್ದನ್ನು ಇಲ್ಲಿ ಸ್ಮರಿಸಬಹುದು ಯಾವಾಗಲೂ ಸಮಾಜದ ಬಂಧುಗಳಿಗೆ ಒಂದು ಕಿವಿ ಮಾತು ಹೇಳುತ್ತಿದ್ದರು ಅದೇನೆಂದರೆ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಸಂಸ್ಕೃತಿ ನೀಡುವಂತೆ ಸಲಹೆ ನೀಡುತ್ತಿದ್ದರು.ಸಮಾಜಕ್ಕೆ ಶ್ರೀಗಳ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಕುರುಬ ಸಮಾಜದ 'ಾಜಿ ಜಿಲ್ಲಾ ಕೋಶಾಧ್ಯಕ್ಷ ಮಲ್ಲಿಕಾರ್ಜುನ್ ಕರಿಕಳ್ಳಿ, ಸಾಯಿಬಣ್ಣ ಕೆಂಗೂರಿ, ಮಹಾದೇವಪ್ಪ ಕಣೆಕಲ್, ಚಂದ್ರಶೇಖರ್ ಅಲಿಪುರ್, ಹೊನ್ನಪ್ಪ ಮುಷ್ಟೂರ, ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಶಂಕ್ರಪ್ಪ ಗೊಂದೆನೂರು, ಶ್ರೀನಿವಾಸ್ ಮಾಸ್ಟರ್, ಮನೋಹರ್ ಕಟ್ಟಿಮನಿ, ವಿಜಯ್ ಕುಮಾರ್ ನಂದೇಪಲ್ಲಿ, ಮೌನೇಶ್, ಭೀಮರಾಯ ಭಂಡಾರಿ, ಮಲ್ಲಯ್ಯ ಕಸಬಿ, ವೆಂಕುಬ್, ಭೀಮಶಂಕರ್ ಹತ್ತಿಕುಣಿ, ಶರಣಪ್ಪ ಶಟಗೇರಾ, ಹೊನ್ನೇಶ್ ದೊಡ್ಡಮನಿ, ರೆಡ್ಡಿ ಮುನಗಲ್, ಬೀರಲಿಂಗ ಸೇರಿದಂತೆ ಇನ್ನಿತರರು ಇದ್ದರು.



## ಹೈಯ್ಯಾಳಲಿಂಗೇಶ್ವರ ಹೇಳಿಕೆ ಮುಂಗಾರಿ ಮುತ್ತಾಯಿತು ಹಿಂಗಾರಿ ಅವಳಾಯಿತು

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ವಡಗೇರಾ ತಾಲೂಕಿನ ಹೈಯ್ಯಾಳ (ಬಿ)ಗ್ರಾಮದಲ್ಲಿ ಮಕರ ಸಂಕ್ರಮಣದ ನಿಮಿತ್ಯ ಸಗರನಾಡಿನ ಆರಾಧ್ಯದೈವ ಶ್ರೀ ಹೈಯ್ಯಾಳಲಿಂಗೇಶ್ವರ ಜಾತ್ರಾ ಮಹೋತ್ಸವವೂ ಗುರುವಾರದಂದು ಅತ್ಯಂತ ವಿಜ್ರಂಭಣೆಯಿಂದ ಜರಗಿತು. ಬುದುವಾರ ಸಂಜೆ ಕೃಷ್ಣಾ ನದಿಯಲ್ಲಿ ಗಂಗಾ ಸ್ನಾನದ ನಂತರ ರಾತ್ರಿ ಇಡಿ ಡೊಳ್ಳಿನ ಪದ ಡೊಳ್ಳಿನ ಕುಣಿತ ಹಾಗೂ ಭಜಾನಾ ಕಾರ್ಯಕ್ರಮ ನಡೆಯಿತು. ಗುರುವಾರ ನಸುಕಿನ ಜಾವ ಗ್ರಾಮದ ಆಳ ಮೇಲ್ ಹತ್ತಿರ ದೇವಸ್ಥಾನದ ಪರಮ ಪೂಜ್ಯ ಶ್ರೀ ಸಕ್ರೆಪ್ಪ ಪೂಜಾರಿಯಿಂದ ದೇವರ ಹೆಳಿಕಿ ಜರುಗಿತು. ಹಯ್ಯಾಳಿ ಮಾನಭಿಮಾನ ನಿನ್ನದು ತುರ್ತು ಮುಂಗಾರಿ ಮಿಂಚಿತು ಮುಂಗಾರಿ ಮುತ್ತಾಯ್ತು ಹಿಂಗಾರಿ ಅವಳಾಯಿತು ಸಪ್ಪನ್ನಾರ್ ದೇಶಕ್ಕೆ ಸರವು ಮಳೆ ಇಡು ಏಳು ಕೋಟಿಗಿ ಏಳು ಕೋಟಿಗೆ. ಈ ವರ್ಷದ ಹೇಳಿಕೆಯೂ ಇದಾಗಿ-ತು. ಶ್ರೀ ಹೈಯ್ಯಾಳಲಿಂಗೇಶ್ವರ ಪಲ್ಲಕ್ಕಿಯು ಮೆರವಣಿಗೆಯು



ದೇವಸ್ಥಾನದ ಮುಖ್ಯಬೀದಿಯ ಮೂಲಕ ಸಾವಿರಾರು ಭಕ್ತರೊಂದಿಗೆ ಭಾಜಾ ಭಜಂತ್ರಿಗಳೊಂದಿಗೆ ದೇವರ ಆಳು ಮಕ್ಕಳ ಕುಣಿತದೊಂದಿಗೆ ದೇವಸ್ಥಾನ ತಲುಪಿ ಗುಡಿಯ ಸುತ್ತಲು ಪಲ್ಲಕ್ಕಿಯನ್ನು ಹೊತ್ತು ಆಳ ಮಕ್ಕಳು ದೇವರ ಸೇವೆ ಮಾಡಿದರು.ತದನಂತರ ದೇವರನ್ನು ಗದ್ದುಗೆಗೆ ಕೋರಿಸಲಾಯಿತು.ಈ ಜಾತ್ರೆಯಲ್ಲಿ ಭಕ್ತರು ಕೃಷ್ಣಾ ನದಿಯಲ್ಲಿ ಪುಣ್ಯ ಸ್ನಾನ ಗೈದು ದೇವರ ದರ್ಶನ ಪಡೆದುಕೊಂಡು ಭಜಿ ಜಿಲೇಬಿ ಸವಿದುಲಡ್ಡು ,ಬೆಂಡು, ಬತಾಸು,ಖಾರ,ಮಂಡಳಾ, ವಿಭೂತಿ , ಕುಂಕುಮ,ಭಂಡಾರ ಮಕ್ಕಳ ಆಟೀಕೆಸಾಮಾನುಗಳು ಖರೀದಿ ಬಲು ಜೋರಾಗಿತ್ತು.ಈ ಜಾತ್ರಾ ಮಹೋತ್ಸವದಲ್ಲಿ ಜಿಲ್ಲೆ ಹಾಗೂ ನೆರೆಯ ಜಿಲ್ಲೆಯಿಂದ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು. ಗ್ರಾಮೀಣ ಕ್ರೀಡೆಗಳಾದ ಭಾರ ಎತ್ತುವುದು ಮತ್ತು ಕೈಕುಸ್ತಿ ಆಯೋಜಿಸಲಾಯಿತು. ಭಕ್ತಾದಿಗಳಿಗೆ ದೇವಸ್ಥಾನದ ವತಿಯಿಂದ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

## ಎಟಿಎಂ ದರೋಡೆ-ಕೊಲೆ ಪ್ರಕರಣ

### ಮೃತರ ಕುಟುಂಬಕ್ಕೆ ಪರಿಹಾರ ಉದ್ಯೋಗಕ್ಕೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಬೀದರ ಜ 16:- ಬೀದರ್ ನಗರದ ಶಿವಾಜಿ ವೃತ್ತದ ಸಮೀಪದ ಎಸ್.ಬಿ.ಐ. ಎಟಿಎಂ ಬಳಿ ಕಳೆದ ವರ್ಷ (ಜನವರಿ 16, 2025) ನಡೆದ ದರೋಡೆ ಹಾಗೂ ಕೊಲೆ ಪ್ರಕರಣದಲ್ಲಿ ಮೃತಪಟ್ಟ ಎಟಿಎಂ ಹಣ ತುಂಬಿಸುವ ಸಿಬ್ಬಂದಿ ಗಿರಿ ವೆಂಕಟೇಶ (ತಂದೆ ಮಲ್ಲಪ್ಪ ಮುಸ್ಲಿ), ಚಿದ್ರಿ ನಿವಾಸಿ ಅವರ ಕುಟುಂಬಕ್ಕೆ ಪರಿಹಾರ ಹಾಗೂ ಸರ್ಕಾರಿ ಸೌಲಭ್ಯಗಳನ್ನು ಒದಗಿಸಬೇಕೆಂದು ಬಹುಜನ ಸಮಾಜ ಪಕ್ಷದ ಮುಖಂಡರು ಇಂದು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದಾರೆ,ದರೋಡೆಕೋರರು ಎಟಿಎಂ ಸಿಬ್ಬಂದಿಗಳ ಮೇಲೆ ಗುಂಡಿನ ದಾಳಿ ನಡೆಸಿ ಗಿರಿ ವೆಂಕಟೇಶ ಅವರನ್ನು ಹತ್ಯೆ ಮಾಡಿದ್ದರು. ಮೃತರು ತಮ್ಮ ಕುಟುಂಬದ ಏಳು ಮಂದಿ ಸದಸ್ಯರ ಜೀವನಾಧಾರವಾಗಿದ್ದು,ಅವರ ನಿಧನದ ನಂತರ ಕುಟುಂಬದ ನಿರ್ವಹಣೆ ತೀವ್ರ ಸಂಕಷ್ಟಕ್ಕೆ ಒಳಗಾಗಿದೆ ಎಂದು ತಿಳಿಸಿದ್ದಾರೆ.ಘಟನೆ ನಡೆದು ಒಂದು ವರ್ಷ ಕಳೆದರೂ ದರೋಡೆಕೋರರು ಪತ್ತೆಯಾಗಿಲ್ಲ. ಅಲ್ಲದೆ, ಘಟನೆಯ ನಂತರ ಜಿಲ್ಲಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜನಪ್ರತಿನಿಧಿಗಳು ಮೃತರ ಕುಟುಂಬಕ್ಕೆ ಭೇಟಿ ನೀಡಿ, ಕುಟುಂಬದ ಒಬ್ಬ ಸದಸ್ಯರಿಗೆ ಹೊರಗುತ್ತಿಗೆ ಆಧಾರದಲ್ಲಿ ಉದ್ಯೋಗ ನೀಡುವ ಭರವಸೆ ನೀಡಿದ್ದರು. ಆದರೆ ಇದುವರೆಗೆ ಯಾವುದೇ ಉದ್ಯೋಗ ಒದಗಿಸಲಾಗಿಲ್ಲ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.

ಆದ್ದರಿಂದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ದರೋಡೆಕೋರರನ್ನು ತಕ್ಷಣ ಬಂಧಿಸಬೇಕು. ಜೊತೆಗೆ ಮೃತ ಗಿರಿ ವೆಂಕಟೇಶ ಅವರ ಕುಟುಂಬದ ಒಬ್ಬ ಸದಸ್ಯರಿಗೆ ಹೊರಗುತ್ತಿಗೆ ಆಧಾರದ ಉದ್ಯೋಗ ನೀಡಿ ಕುಟುಂಬದ ನಿರ್ವಹಣೆಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾಧ್ಯಕ್ಷರಾದ ಕಪೀಲ ಗೋಡಬೊಲೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಕ್ತಿಕಾಂತ ಭಾವಿದೊಡ್ಡಿ, ಜಿಲ್ಲಾ ಸಂಯೋಜಕ ರಾಜಕುಮಾರ ಮೂಲಭಾರತಿ, ಕಪಿಲ, ಅಂಬಾದಾಸ ಚಕ್ರವರ್ತಿ, ಮಹೇಶ್ ಭೋಲಾ, ಸುರೇಶ್ ಜೋಜನಾಕರ್, ಸಚಿನ್ ಗಿರಿ ಹಾಗೂ ಜಾಫರ್ ಖುರೇಷಿ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಬೀದರ್‌ನಲ್ಲಿ ಸಂಸ್ಕೃತ ಶ್ಲೋಕಗಳ ಸ್ಪರ್ಧಾ ತರಬೇತಿ ಆರಂಭ: ಶ್ಲೋಕರತ್ನ ತೃಪ್ತಿ ಬಜಾಜ್

ಮಲ್ಲಮ್ಮ ನುಡಿ ವಾರ್ತೆ

ಬೀದರ್ ಜ 16: ಮಕ್ಕಳಲ್ಲಿ ಸಂಸ್ಕೃತಿಯಿಂದ ಸಂಸ್ಕಾರ, ಸಂಸ್ಕಾರದಿಂದ ಸಂಸ್ಕೃತಿ ಎಂಬ ದೆಹ್ಯವಾಕ್ಯದಡಿ ಬೀದರ್‌ನಲ್ಲಿ ದೈವವಾಣಿ ಸಂಸ್ಕೃತ ಶ್ಲೋಕಾ ಒಲಂಪ್ಯಾಡ್ ಸಂಸ್ಥೆ ಹಾಗೂ ಡಿ.ಎಲ್.ಟಿ.ಒ ಎಲ್.ಎಲ್.ಪಿ ಈ ಎರಡು ಸಂಸ್ಥೆಗಳ ಮೂಲಕ ಹಿಂದಿ, ಇಂಗ್ಲಿಷ, ಸಿಂಧಿ, ಪಾಳಿ, ಮರಾಠಿ, ಸ್ಪಾನಿಷ್, ಫ್ರೆಂಚ್ ಭಾಷೆಗಳಲ್ಲಿ ಅರ್ಥ ಸಹಿತ ಸಂಸ್ಕೃತ ಶ್ಲೋಕಗಳ ಸ್ಪರ್ಧಾ ತರಬೇತಿ ಆಯೋಜಿಸಲಾಗಿದೆ ಎಂದು ದೈವವಾಣಿ ಸಂಸ್ಕೃತ ಶ್ಲೋಕಾ ಒಲಂಪ್ಯಾಡ್ ಹಾಗೂ ಡಿ.ಎಲ್.ಟಿ.ಒ ಎಲ್.ಎಲ್.ಪಿ ಸಂಸ್ಥೆಗಳ ಹಿರಿಯ ವ್ಯವಸ್ಥಾಪಕಿ ಶ್ಲೋಕರತ್ನ ತೃಪ್ತಿ ಬಜಾಜ್ ತಿಳಿಸಿದರು.ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಪ್ರತಿ ಭಾಷೆಯಲ್ಲಿ 10 ರೀತಿಯ ಸುತ್ತು ಸ್ಪರ್ಧೆಗಳು ಇರಲಿದ್ದು, ಅದು ಪೂರ್ಣಗೊಂಡಾಗ ಅಂತಹ ಸ್ಪರ್ಧಾಳುಗಳಿಗೆ ಗೌರವಿಸಲಾಗುವುದು ಎಂದರು.

ಇಂದು ಪಾಲಕರು ತಮ್ಮ ಮಕ್ಕಳಿಗೆ ಪುಸ್ತಕದ ಹುಳುಗಳನ್ನಾಗಿ ಹಾಗೂ ಮೊಬೈಲ್‌ನ ಗೊಂಬೆಗಳಾಗಿ ಮಾಡದೇ ಅವರಿಗೆ ಸಂಸ್ಕೃತಿ ಹಾಗೂ ಸಂಸ್ಕಾರ ಕಲಿಸುವುದು ಅತ್ಯಂತ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಈ ಎರಡು ಸಂಸ್ಥೆಗಳಿಂದ ಪ್ರತಿ ಶನಿವಾರ ಹಾಗೂ ಭಾನಿವಾರ ಸಾಯಂಕಾಲ 4 ಗಂಟೆಯಿಂದ 5 ಗಂಟೆ ವರೆಗೆ ಅರ್ಥ ಸಹಿತ ಸಂಸ್ಕೃತ ಶ್ಲೋಕಗಳು ಕಲಿಸಿ ಕೊಡಲಾಗುವುದು. ಅದಕ್ಕೆ ಪ್ರತಿ ತಿಂಗಳು ಕೇವಲ



100 ರೂಪಾಯಿ ಶುಲ್ಕ ವಿಧಿಸಲಾಗುತ್ತದೆ ಎಂದವರು ತಿಳಿಸಿದರು.

ಸಂಸ್ಕೃತ ಶ್ಲೋಕ ಸ್ಪರ್ಧಾ ತರಬೇತಿಯಿಂದ ಮಕ್ಕಳಲ್ಲಿ ಸ್ಪರ್ಧಾ ಮನೋಭಾವ ಬೆಳೆಯುತ್ತದೆ, ಇದರಿಂದ ಭಯ ಹೋಗಲಾಡಿಸಬಹುದು, ಬುದ್ಧಿಮತ್ತೆ ಚುರುಕಾಗುತ್ತದೆ, ವ್ಯಕ್ತಿತ್ವ ವಿಕಸನಗೊಳ್ಳುತ್ತದೆ, ಆರೋಗ್ಯ ವೃದ್ಧಿ, ಮನಸ್ಸು ಶಾಂತಗೊಳ್ಳುತ್ತದೆ. ಈ ಎಲ್ಲ ಅನುಕುಲಗಳು ಇರುವ ಕಾರಣ ಬೀದರ್ ಜಿಲ್ಲೆಯ ಪಾಲಕರು ತಮ್ಮ ಮಕ್ಕಳಿಗೆ ನಂದಿ ಪೆಟ್ರೋಲ್ ಪಂಪ್ ಹಿಂದುಗಡೆ ಇರುವ ಬ್ರಹ್ಮಪುರ ಬಡಾವಣೆಯಲ್ಲಿನ ನಾಟ್ಯಶ್ರೀ ನೃತ್ಯಾಲಯದಲ್ಲಿರುವ ಈ ಸಂಸ್ಥೆಯನ್ನು ಸಂಪರ್ಕಿಸಿ ಇದರ ಲಾಭ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ 9481429086 ಈ ದೂರವಾಣಿಯನ್ನು ಸಂಪರ್ಕಿಸಬಹುದಾಗಿದೆ ಎಂದು ತೃಪ್ತಿ ಬಜಾಜ್ ಮನವಿ ಮಾಡಿದರು. ಸಂಸ್ಥೆಯ ಇನ್ನೋರ್ವ ವ್ಯವಸ್ಥಾಪಕಿ ಶ್ರಯಾ ಹೇಡಾ ಪತ್ರಿಕಾಗೋಷ್ಠಿಯಲ್ಲಿದ್ದರು.

## ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತ್ಯುತ್ಸವ ಆಚರಣೆ

ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ

ಇಲ್ಲಿನ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ತಾಲೂಕ ಆಡಳಿತದಿಂದ ಆಯೋಜಿಸಿದ್ದ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತ್ಯುತ್ಸವ ಕಾರ್ಯಕ್ರಮವನ್ನು ಗುಣತೀರ್ಥ ವಾಡಿಯ ಕಲ್ಯಾಣ ಮಹಾ ಮನೆಯ ಪೂಜ್ಯಶ್ರೀ ಬಸವಪ್ರಭು ಸ್ವಾಮೀಜಿ ಉದ್ಘಾಟಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಡಾ. ದತ್ತಾತ್ರೇಯ ಗಾದಾ. ತಾ. ಪಂ. ಇಒ ರಮೇಶ ಸುಲಿಪಿ. ನಗರ ಸಭೆಯ ಪೌರಾಯುಕ್ತರಾದ ರಾಜು ಡಿ. ಬಣಕಾರ್. ಸಿ.ಪಿ.ಐ. ಅಲಿಸಾಬ್. ಪಶು ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ರಾಜಕುಮಾರ ಬಿರಾದಾರ. ಶಿರಸ್ತೆದಾರ ಅನಿಲಕುಮಾರ ಬಾಂದೆ. ಸಮಾಜದ ಜಿಲ್ಲಾ ಅಧ್ಯಕ್ಷರಾದ ಹಣಮಂತ ಮಾಳಗಿಮನೆ. ತಾಲುಕ ಅಧ್ಯಕ್ಷರಾದ ಶಾಂತರಾಮ ರಾಜೋಳೆ. ನಾಗನಾಥ ಮೇತ್ರೆ. ಬಸವರಾಜ ಪವಾರ ಶಿವಕುಮಾರ ಜಡಗೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಇದಕ್ಕೂ ಮೊದಲು ನಗರದ ಕೋಟೆಯಿಂದ. ಗಾಂಧಿ ವೃತ್ತ. ಬಸವೇಶ್ವರ ವೃತ್ತ. ಡಾ. ಅಂಬೇಡ್ಕರ್ ವೃತ್ತದ ಮೂಲಕ ಮುಖ್ಯ ರಸ್ತೆಯ ಮುಖಾಂತರ ಬಿಕೆಡಿಬಿ ಕಲ್ಯಾಣ ಮಂಟಪದವರೆಗೆ ಶ್ರೀ ಸಿದ್ದರಾಮೇಶ್ವರ ಭಾವಚಿತ್ರದ ಭವ್ಯ ಮೆರವಣಿಗೆ ಜರುಗಿತು.



Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927 (RNINO:KARKAN/2011/48371)

# ಸಂಕ್ರಾಂತಿ ಸಂಭ್ರಮಕ್ಕೆ ಕಳೆ ತುಂಬಿದ ಕೇಶ್ವಾರ ರಂಗೋಲಿ ಸ್ಪರ್ಧೆ.



• **ಮಲ್ಲಮ್ಮ ನುಡಿ ವಾರ್ತೆ,ಗುರುಮಠಕಲ್/ ಕೇಶ್ವಾರ:**

ತಾಲೂಕಿನ ಗಡಿ ಭಾಗದಲ್ಲಿರುವ ಕೇಶ್ವರ ಗ್ರಾಮದಲ್ಲಿ ಜಿಲ್ಲೆಯ ಮೈಲಾಪುರ ಮೈಲಾರಲಿಂಗೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಬೃಹತ್ ರಂಗೋಲಿ ಸ್ಪರ್ಧೆ ಬುಧವಾರ ಜರುಗಿತು.

ರಂಗೋಲಿ ಸ್ಪರ್ಧೆಯ ಆಯೋಜಕರಾದ ಚಂದ್ರಶೇಖರರೆಡ್ಡಿ ನಡುಮನಿ ಮಾತನಾಡಿ ಕಳೆದ ಐದು ವರ್ಷಗಳಿಂದ ಸ್ಥಳೀಯವಾಗಿ ರಂಗೋಲಿ ಸ್ಪರ್ಧೆಯನ್ನು ಮೈಲಾರಲಿಂಗೇಶ್ವರ ಜಾತ್ರಾ ಅಂಗವಾಗಿ ಸಂಕ್ರಾಂತಿ ಹಬ್ಬದ ದಿನದಂದು ಪಲ್ಲಕಿ ಉತ್ಸವ ನೆರವೇರಿಸಿ ರಂಗೋಲಿ ಸ್ಪರ್ಧೆ ಆಯೋಜಿಸಲಾಗಿತ್ತು.

ಮನೆಯ ಮುಂದೆ ರಂಗೋಲಿ ಹಾಕುವುದು ಧನಾತ್ಮಕ ವಾತಾವರಣವನ್ನು ಸೃಷ್ಟಿಸಿ ಒತ್ತಡವನ್ನು ಕಡಿಮೆ ಮಾಡುತ್ತದೆ, ಆರೋಗ್ಯಕ್ಕೆ ಒಳ್ಳೆಯದು, ಮಹಿಳೆಯರ ಸೃಜನಶೀಲತೆಯನ್ನು ಪ್ರದರ್ಶಿಸಿ ಸಮುದಾಯ ಐಕ್ಯತೆಯನ್ನು ಬೆಳೆಸಿ ಸಾಂಸ್ಕೃತಿಕ ಉತ್ಸಾಹವನ್ನು ಹೆಚ್ಚಿಸುತ್ತದೆ, ಈ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಊರಿನ ಮಹಿಳೆಯರು ಭಾಗವಹಿಸಿರುವದು ಖುಷಿ ತಂದಿದೆ ಎಂದು ಅಭಿಪ್ರಾಯ ಪಟ್ಟರು.

ಸ್ಪರ್ಧೆಯಲ್ಲಿ ವಯಸ್ಸಿನ ಮಿತಿಯಿಲ್ಲದೆ 153 ಜನ ಮಹಿಳೆಯರು ರಂಗೋಲಿ ಸ್ಪರ್ಧೆಯಲ್ಲಿ ಪಾಲ್ಗೊಂಡರು, ನಿರ್ಣಯಕರು ಅಂತಿಮವಾಗಿ 3 ಜನರಿಗೆ ಮೊದಲ ಬಹುಮಾನ, 6 ಜನರಿಗೆ ಎರಡನೇ ಬಹುಮಾನ, 12 ಜನರಿಗೆ ತೃತೀಯ ಬಹುಮಾನ ವಿತರಿಸಿ, ಮುಂದಿನ ವರ್ಷ ಅನುಕ್ರಮವಾಗಿ 9,18,36 ಜನರಿಗೆ ಬಹುಮಾನ ವಿತರಿಸುವದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಬ್ರಹ್ಮಾನಂದ ರೆಡ್ಡಿ, ವೀರಣ್ಣ ನಿವೃತ್ತ ಪಿ.ಎಸ್.ಐ,ಗ್ರಾಮ ಪಂಚಾಯತಿ ಸದಸ್ಯರಾದ ಉಷಪ್ಪ ಭೀಮಮ್ಮ, ನಿವೃತ್ತ ಶಿಕ್ಷಕರುಗಳಾದ ನರಸರೆಡ್ಡಿ, ಭೀಮರೆಡ್ಡಿ, ಉಮಾರೆಡ್ಡಿ, ಬಸ್ಸಣ್ಣ, ಹಾಗೂ ಲಿಂಗಾ-ರೆಡ್ಡಿ, ನಾರಾಯಣ ಬಡಿಗೇರ, ಶ್ರೀನಿವಾಸ ಯಾದವ್, ವಿಶ್ವನಾಥರೆಡ್ಡಿ ಸೇರಿದಂತೆ ಊರಿನ ಗಣ್ಯರು

# ಜ.25 ರಂದು ಸವಿತಾ ಮಹರ್ಷಿ ಜಯಂತಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ಸವಿತಾ ಮಹರ್ಷಿ ಜಯಂತಿಯನ್ನು ಇದೇ ಜನವರಿ 25 ರಂದು ವಿಜೃಂಭಣೆಯಿಂದ ಆಚರಿಸಲು ಜಿಲ್ಲಾಧಿಕಾರಿ ಕಛೇ-ರಿಯ ಸಹಾಯಕರಾದ ಶಿವಪ್ರಭು ಹಿರೇಮಠ್ ಅವರ ಅಧ್ಯಕ್ಷತೆಯಲ್ಲಿ ನಿರ್ಧರಿಸಲಾಯಿತು.

ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಜನವರಿ 25 ರಂದು ಮಧ್ಯಾಹ್ನ. 12 ಗಂಟೆಗೆ ಕಲಬುರಗಿ ನಗರದ ಡಾ. ಎಸ್ ಎಂ ಪಂಡಿತ ರಂಗಮಂದಿರದಲ್ಲಿ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಎಲ್ಲ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸರ್ಕಾರಿ ಕಚೇರಿಗಳಲ್ಲಿ ಶಾಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು ಕಲಬುರಗಿಯಲ್ಲಿರುವ ಹಾಸ್ಟೆಲ್ ವಿದ್ಯಾರ್ಥಿಗಳನ್ನು ಕರೆ ತರುವ ವ್ಯವಸ್ಥೆ ಮಾಡಬೇಕು. ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರು ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಡಾ.ನಾಗಪ್ಪ ಗೋಗಿ ಉಪನ್ಯಾಸ ಕೊಂಚುರು ಸವಿತಾ ಮಠದ ಶ್ರೀ.ಶ್ರೀ.ಪೂಜ್ಯ ಸವಿತಾನಂದನಾಥ ಸ್ವಾಮಿಜಿ ದಿವ್ಯಸಾನಿಧ್ಯವಹಿಸಲಿದ್ದಾರೆ. ಸಂಗೀತ ಕಾರ್ಯಕ್ರಮ ಮಾಹಂತೇಶ ಹಡಲಗಿ ನೇರವೇರಿಸುವರು. ಶಂಕರ ಎಸ್ ಕಾಳನೂರ ಅಧ್ಯಕ್ಷತೆ ವಹಿಸಲಿದ್ದಾರೆ.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಪ್ರೋಟೋಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾಗುವುದು. ನಾಡ ಗೀತೆ,ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದರು.

# ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ:**

• ಪ್ರಧಾನಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯಡಿ 2025-26ನೇ ಸಾಲಿನಲ್ಲಿ ಜಿಲ್ಲೆಯ ವಿವಿಧ ಬ್ಯಾಂಕುಗಳಿಂದ ಸಾಲಸೌಲಭ್ಯ ಪಡೆದು ನಗರ ಪ್ರದೇಶದಲ್ಲಿ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಹೊಸದಾಗಿ ಅತೀ ಸಣ್ಣ ಕೈಗಾರಿಕೆ ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಆಸಕ್ತಿಯುಳ್ಳ ಜಿಲ್ಲೆಯ ಯುವಕ-ಯುವತಿಯರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿಗಳು ತಿಳಿಸಿದ್ದಾರೆ. ಕೇಂದ್ರ ಸರ್ಕಾರವು ನಗರ ಪ್ರದೇಶದಲ್ಲಿ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಯುವಕ-ಯುವತಿಯರಿಗೆ ಉದ್ಯೋಗ ಕೈಗೊಳ್ಳಲು ಸೇವಾ ಉದ್ದಿಮೆಯಡಿ 20 ಲಕ್ಷ ರೂ. ಮತ್ತು ಉತ್ಪಾದನಾ ಕೇಂದ್ರಗಳಿಗೆ ಗರಿಷ್ಠ 50 ಲಕ್ಷ ರೂ. ಮೊತ್ತದವರೆಗೆ ಅತೀ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶದಿಂದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯನ್ನು ಸ್ಥಾಪಿಸಲಾಗಿದೆ. ಅರ್ಜಿ ಸಲ್ಲಿಸಲಿಚ್ಛಿಸುವ ಯುವಕ-ಯುವತಿಯರು ಕನಿಷ್ಠ 8ನೇ ತರಗತಿ ಉತ್ತೀರ್ಣರಾಗಿರಬೇಕು. ವಯಸ್ಸು ಕನಿಷ್ಠ 18 ವರ್ಷ ಆಗಿರಬೇಕು ಮತ್ತು ವಿಶೇಷ ವರ್ಗದವರಾದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗದವರು, ಅಲ್ಪಸಂಖ್ಯಾತರು, ಮಾಜಿ ಸೈನಿಕರು, ಮಹಿಳೆಯರು, ವರ್ಗದವರಿಗೆ ಬ್ಯಾಂಕ್ ಸಾಲ ಮಂಜೂರಾತಿ ಮೇಲೆ ನಗರ ಪ್ರದೇಶದ ಫಲಾನುಭವಿಗಳಿಗೆ ಶೇ. 25 ಮತ್ತು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ಶೇ. 35 ರಷ್ಟು ಸಹಾಯಧನ (ಅಂಚುಹಣ) ನೀಡಲಾಗುತ್ತದೆ. ಈ ಯೋಜನೆಯಡಿ ಸಣ್ಣ ಕೈಗಾರಿಕಾ ಘಟಕಗಳನ್ನು ಸ್ಥಾಪಿಸಲು ಯಾವುದೇ ಆದಾಯ ಮಿತಿ ಇರುವುದಿಲ್ಲ. ಸಾಲ ಪಡೆಯಲಿಚ್ಛಿಸುವ ಗ್ರಾಮೀಣ ಅಭ್ಯರ್ಥಿಗಳು www.pmegp.com ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.

ಈ ಯೋಜನೆಯಡಿ ಹೊಸದಾಗಿ ಸಾಲ ಮಂಜೂರಾತಿ ಪಡೆದು ಪ್ರಾರಂಭಿಸುವ ಹೊಸ ಘಟಕಗಳಿಗೆ ಮಾತ್ರ ಸಹಾಯಧನ ಲಭ್ಯವಿರುತ್ತದೆ. ವಿಸ್ತರಣೆ, ಆಧುನೀಕರಣ, ವೈವಿಧ್ಯೀಕರಣ ಘಟಕಗಳಿಗೆ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹತೆ ಇರುವುದಿಲ್ಲ. ಷರತ್ತು ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಜಿಲ್ಲಾ ಕಛೇರಿ, ನಂ. 10, ಸಾಗರ ಮಾರ್ಬಲ್ಸ್ ಎದುರುಗಡೆ, ನ್ಯೂ ಜೇವರ್ಗಿ ಕ್ರಾಸ್, ಕಲಬುರಗಿ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-220275, ಮೊಬೈಲ್ ಸಂ-ಖ್ಯೆ 9480825625/ 9591887776 ಗಳಿಗೆ ಸಂಪರ್ಕಿಸಲು ಕೋರಿದೆ.'

# ಪೂರ್ವಭಾವಿ ಸಭೆಗೆ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ತಿಂಥಣಿ ಗ್ರಾಮ ಶ್ರೀ ಮೌನೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರ ಅಧ್ಯಕ್ಷತೆಯಲ್ಲಿ 2026ರ ಜನವರಿ 19ರ ಸೋಮವಾರ ರಂದು ಬೆಳಿಗ್ಗೆ 11 ಗಂಟೆಗೆ ಪೂರ್ವಭಾವಿ ಸಭೆ ಸುರಪುರ ತಹಸೀಲ್ದಾರ ಕಛೇರಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ.

ಸುರಪುರ ತಾಲ್ಲೂಕಿನ ತಿಂಥಣಿ ಗ್ರಾಮದ ಶ್ರೀ ಮೌನೇಶ್ವರ ದೇವಸ್ಥಾನ, ಈ ದೇವಸ್ಥಾನವು 2025-26ನೇ ಸಾಲಿನಲ್ಲಿ 2026ರ ಜನವರಿ 28 ರಿಂದ ಫೆಬ್ರವರಿ 2ರ ವರೆಗೆ ಜಾತ್ರೆ ನಡೆಯಲಿದೆ. ಈ ಜಾತ್ರೆಯ ಮುಂಜಾಗ್ರತಾ ಕ್ರಮವಾಗಿ ಪೂರ್ವ ಸಿದ್ಧತೆ ಕಾರ್ಯಗಳ ಕುರಿತಂತೆ ಅಂ-ದು ಸಭೆಗೆ ಅಧಿಕಾರಿಗಳು ತಮ್ಮ ಪ್ರತಿನಿಧಿಯನ್ನು ಕಳುಹಿಸದೇ ತಾವೇ ಖುದ್ದಾಗಿ ತಪ್ಪದೇ ಹಾಜರಾಗುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಭ್ರಮದ ಭಗೀರಥ ಜಯಂತಿ ಆಚರಣೆ



• **ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಭಾಲ್ಕಿ ತಾಲ್ಲೂಕಿನ ಕಾಕನಾಳ ಗ್ರಾಮದಲ್ಲಿ ಉಪ್ಪಾರ ಸಮಾಜ ಸಂಘದ ವತಿಯಿಂದ ಭಗೀರಥ ಜಯಂತಿಯನ್ನು ಈಚೆಗೆ ಸಂಭ್ರಮದಿಂದ ಆಚರಿಸಲಾಯಿತು.

ಭಗೀರಥರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು ಎಂದು ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಉಪ್ಪಾರ ಸಮಾಜ ಸಂಘದ ಅಧ್ಯಕ್ಷ ಡಾ. ತಾನಾಜಿ ಸಗರ್ ಹೇಳಿದರು.

ಪ್ರಯತ್ನಕ್ಕೆ ಮತ್ತೊಂದು ಹೆಸರೇ ಭಗೀರಥರು. ಹೀಗಾಗಿ ಉಪ್ಪಾರ ಸಮಾಜದವರು ಶಿಕ್ಷಣದ ಮೂಲಕ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಅಭಿವೃದ್ಧಿಗೆ ಪ್ರಯತ್ನಿಸಬೇಕು ಎಂದು ಸಲಹೆ ಮಾಡಿದರು.

ಮುಖಂಡ ಕಿಶನರಾವ್ ಅಧ್ಯಕ್ಷತೆ ವಹಿಸಿದ್ದರು. ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಶಿವಾಜಿರಾವ್ ಸಗರ್, ಪ್ರಧಾನ ಕಾರ್ಯದರ್ಶಿ ಜಗನ್ನಾಥ ಅಲಗೋಳ್ ತಡಪಳ್ಳಿ, ಸಲಹೆಗಾರ ಮಾಣಿಕರಾವ್ ಮಂಠಾಳ,

ಹಿಂದುಳಿದ ವರ್ಗಗಳ ಒಕ್ಕೂಟದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಬಸವರಾಜ ಮಾಳಗೆ, ಅಧ್ಯಕ್ಷ ರಾಜಶೇಖರ ಸೇಡಂಕರ್, ಪ್ರಮುಖರಾದ ಬಸವರಾಜ ಬೆಳ್ಳೂರೆ, ಪ್ರಶಾಂತ ಸುರಶೆಟ್ಟಿ, ಕಲ್ಲಪ್ಪ ದುಬಳಗುಂಡಿ, ಅನಿಲಕುಮಾರ ಮುಸ್ತಾಪುರ, ಸಾಯಿಕುಮಾರ ಘೋಡ್ಕೆ, ರಾಜಕುಮಾರ ಟೆಳ್ಳೆಕರ್, ಮಾರುತಿ ಮತ್ತಿತರರು ಇದ್ದರು.

# ಮಹಾರಾಷ್ಟ್ರ ಬಿಜೆಪಿ ಗೆಲುವು ಕರ್ನಾಟಕ ಜಯಕ್ಕೆ ದಿಕ್ಸೂಚಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್:**



ಮುಂಬೈ ಮಹಾನಗರ ಪಾಲಿಕೆ ಸೇರಿದಂತೆ ಮಹಾರಾಷ್ಟ್ರದ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಜಯ ಗಳಿಸಿರುವುದು ಕರ್ನಾಟಕದಲ್ಲಿ ಬರುವ ದಿನಗಳಲ್ಲಿ ನಡೆಯಲಿರುವ ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆ ಗೆಲುವಿಗೆ ದಿಕ್ಸೂಚಿಯಾಗಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ, ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ.

ಕಳೆದ ವರ್ಷ ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ-ಶಿವಸೇನಾ ಮೈತ್ರಿ ಭರ್ಜರಿ ಜಯ ಗಳಿಸಿತ್ತು. ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ನೇತೃತ್ವದಲ್ಲಿ ಡಬಲ್ ಇಂಜಿನ್ ಸರ್ಕಾರ ಮಾಡುತ್ತಿರುವ ಜನಕಲ್ಯಾಣ ಕಾರ್ಯಕ್ರಮಕ್ಕೆ ಮತದಾರರು ಮನ್ನಣೆ ನೀಡಿ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಭಾರಿ ಗೆಲುವು ಕೊಟ್ಟಿದ್ದಾರೆ. ಬಿಜೆಪಿ ಮೇಲೆ ಜನರು ಇಟ್ಟಿರುವ ವಿಶ್ವಾಸಕ್ಕೆ ಈ ಫಲಿತಾಂಶ ಸಾಕ್ಷಿಯಾಗಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತದ ಎಲ್ಲ ರಂಗಗಳಲ್ಲಿ ವಿಫಲವಾಗಿದೆ. ಬರುವ ಏಪ್ರಿಲ್, ಮೇ ತಿಂಗಳಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇರಿದಂತೆ ರಾಜ್ಯದ ಸ್ಥಳೀಯ ಸಂಸ್ಥೆ ಹಾಗೂ ಜಿಪಂ, ತಾಪಂಗಳಿಗೆ ಚುನಾವಣೆ ನಡೆಯುವ ಸಾಧ್ಯತೆಗಳಿವೆ. ಮಹಾರಾಷ್ಟ್ರ ಮಾದರಿಯಲ್ಲಿಯೇ ಇಲ್ಲಿ ಸಹ ಬಿಜೆಪಿ ಭರ್ಜರಿ ಜಯ ಗಳಿಸಿ ಕಾಂಗ್ರೆಸ್ ಗೆ ಮಣ್ಣು ಮುಕ್ಕಿಸುವುದು ಗ್ಯಾರಂಟಿ ಎಂದು ಹೇಳಿದ್ದಾರೆ.

# ಬೃಹತ್ ಉಚಿತ ಆರೋಗ್ಯ ಮೇಳ

**ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ನಗರ ಶಿಕ್ಷಕರ ಭವನದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಹುಣಸೂರು ಜಿಲ್ಲಾ ವೈದ್ಯಾಧಿಕಾರಿಗಳ ತಂಡ ಲಯನ್ಸ್ ಕ್ಲಬ್ ಆಫ್ ಮೈಸೂರ್ ಗೋಲ್ಡನ್ ಸಿಟಿ ಮತ್ತು ಭಾರತೀಯ ಜನತಾ ಪಾರ್ಟಿ ಹುಣಸೂರು ಇವರ ಸಹಯೋಗದೊಂದಿಗೆ ಬೃಹತ್ ಉಚಿತ ಆರೋಗ್ಯ ಮೇಳ ಈ ಒಂದು ಆರೋಗ್ಯ ಶಿಬಿರದಲ್ಲಿ

ಎಲ್ಲಾ ತರಹದ ಅಂದರೆ ಜನರಲ್ ಚೆಕಪ್ ಸ್ಕಿನ್ ಸ್ಪೆಷಲಿಸ್ಟ್ ಐ ಸ್ಪೆಷಲಿಸ್ಟ್ ಡೆಂಟಲ್ ಮತ್ತು ಸ್ಪೀಚ್ ಅಂಡ್ ಈಯರ್ ಸಂಸ್ಥೆಯ ವೈದ್ಯಾಧಿಕಾರಿಗಳು



ಮೂಗು ಮತ್ತು ಕಿವಿ ಪರೀಕ್ಷೆಗಳನ್ನು ಮಾಡಲಾಯಿತು

ಈ ಕಾರ್ಯಕ್ರಮವನ್ನು ಸಂಸದರು 'ಕೃಷ್ಣದತ್ತ ಚಾಮರಾಜ ಒಡೆಯರ್ ಯದುವೀರ್ ಉದ್ಘಾಟಿಸಿ ನಂತರ ಮಾತನಾಡಿದ್ದ ಈ ಒಂದು ಶಿಬಿರದಲ್ಲಿ 900 ರಿಂದ 1000 ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಮತ್ತು ಹಿರಿಯ ನಾಗರಿಕರು ಒಂದು 100 ರಿಂದ 200 ಜನ ಸಂಖ್ಯೆಯಲ್ಲಿ ಪರೀಕ್ಷೆ ಮಾಡಿಸಲಾಯಿತು ಮತ್ತು ವಿಶೇಷವಾಗಿ ಕಾಲುಗಳನ್ನು ಕಳೆದುಕೊಂಡಿರುವ 8 ರಿಂದ 10 ರೋಗಿಗಳಿಗೆ ಕೃತಕ ಕಾಲು ಜೋಡಣೆಯ ಮಾಡಿಸಿಕೊಡುವುದಾಗಿ ಭರವಸೆ ನೀಡಲಾಯಿತು ಈ

ತಾಲ್ಲೂಕು ಅಧ್ಯಕ್ಷರು ಕಾಂತರಾಜು ನಗರಧ್ಯಕ್ಷರು ನಾರಾಯಣ ಜಿಲ್ಲಾ ಉಪಾಧ್ಯಕ್ಷರು ಗಣೇಶ್ ಕುಮಾರ್ಸ್ವಾಮಿ ಕಾರ್ಯದರ್ಶಿ ನಾಗಣ್ಣೇಗೌಡ್ರು ನಾಗರಾಜ್ ಮಲ್ಲಾಡಿ ಶಿವಕುಮಾರ್ ರಾಮಚಂದ್ರ ಸತೀಶ್ ಸುರೇಶ್ ಮುದ್ದು ರಾಮ್ ಅಶೋಕ್ ರವಿಶಂಕರ್ ನಗರಸಭಾ ಸದಸ್ಯರು ಸತೀಶ್ ಕುಮಾರ್ ವಿವೇಕ್ ಹರೀಶ್ ಲಯನ್ಸ್ ಕ್ಲಬ್ ನ ಅಧ್ಯಕ್ಷರು ಪ್ರಮೀಳಾ ಕಾರ್ಯದರ್ಶಿ ಸುರೇಶ್ ಅವರ ಸಹಪಾಠಿಗಳು ಉಪಸ್ಥಿತರಿದ್ದರು ಹಾಗೂ ತಾಲೂಕಿನ ವೈದ್ಯಾಧಿಕಾರಿಗಳಾದ ದರ್ಶನ ಸರ್ಕಾರಿ ಆಸ್ಪತ್ರೆ ವೈದ್ಯರು ಮತ್ತು ಸಿಬ್ಬಂದಿ ವರ್ಗದವರು ಆಶಾ ಕಾರ್ಯಕರ್ತರು ಹಾಗೂ ಇನ್ನಿತರ ಹಾಜರಿದ್ದರು

ತಾಲ್ಲೂಕ ಪಂಚಾಯತ ಬಸವಕಲ್ಯಾಣ

## ಗ್ರಾಮ ಪಂಚಾಯತ ಕಾರ್ಯಾಲಯ, ಚಿಕನಾಗಾಂವ ತಾ.ಬಸವಕಲ್ಯಾಣ

ಸಂಖ್ಯೆ:ಗ್ರಾಪಂ.ಚಿಕನ:ಉಖಾಯೋ:ದಪಪ್ರ:2025-26 ದಿನಾಂಕ : 23.12.2025

### ದರಪಟ್ಟಿಗಳ ಅಹ್ವಾನ

ವಿಷಯ :- ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರಪಟ್ಟಿ ಪ್ರಕಟಣೆ ಮಾಡುವ ಕುರಿತು.

ಉಲ್ಲೇಖ :-1) ಮಾನ್ಯ ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಬೆಂಗಳೂರು ಇವರ ಆದೇಶ ಸಂಖ್ಯೆ:RDC-EGS/988/2022(E-970872) ದಿನಾಂಕ : 23.12.2025.

2) ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಸಿ-ಇ.ಜಿ.ಎಸ್/988/2022 ಬೆಂಗಳೂರು ದಿನಾಂಕ : 22.12.2025

* * * *

ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರಪಟ್ಟಿ ಪ್ರಕಟಣೆ.

1) ದರಪಟ್ಟಿಗಳ ಆಹ್ವಾನ : ಗ್ರಾಮ ಪಂಚಾಯಿತಿ **ಚಿಕನಾಗಾಂವ** ವತಿಯಿಂದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಖಾತ್ರಿ ಯೋಜನೆಯ ಕ್ರೀಯಾ ಯೋಜನೆಗಳಡಿ ಅನುಮೋದನೆಯಾದ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರ ಪಟ್ಟಿ ಪ್ರಕಟಣೆ ಮಾಡಿ ಅರ್ಹ ದರಪಟ್ಟಿದಾರರಿಂದ (ಸರಬರಾಜುದಾರರು / ಏಜೆನ್ಸಿಯವರು / ಮಾರಾಟಗಾರರು / ಅರ್ಹ ಸಂಸ್ಥೆಯವರು ಇತ್ಯಾದಿ) ದರಪಟ್ಟಿಗಳನ್ನು ಪ್ರಕಟಣೆಯ ಅನುಬಂಧ-1 ರಲ್ಲಿ ದಾಖಲಿಸಲಾದ ಕಾಮಗಾರಿವಾರು ಸಾಮಗ್ರಿಗಳಿಗಾಗಿ ಮೊಹರು ಮಾಡಿದ ಲಕೋಟೆಗಳಲ್ಲಿ ಸ್ಪರ್ಧಾತ್ಮಕ ದರಪಟ್ಟಿಗಳನ್ನು ಆಹ್ವಾನಿಸಲಾಗಿರುತ್ತದೆ.

2) ದರಪಟ್ಟಿ ಪ್ರಕ್ರೀಯೆಯ ವೇಳಾಪಟ್ಟಿ :

| ಕ್ರ ಸಂ. | ವಿವರ | ನಿಗಧಿಪಡಿಸಿದ ದಿನಾಂಕ | ಷರಾ |
|---|---|---|---|
| 01 | ದರಪಟ್ಟಿ ಫಾರ್ಮ ಮತ್ತು ಡಾಕ್ಯೂಮೆಂಟ್ ವಿತರಿಸುವ ದಿನಾಂಕ ಮತ್ತು ಸಮಯ | 22.12.2025 ದಿನಾಂಕದಿಂದ 23.12.2025 ರ ವರೆಗೆ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಮತ್ತು ಕಛೇರಿ ವೇಳೆಯಲ್ಲಿ | |
| 02 | ದರಪಟ್ಟಿದಾರರ ಪೂರ್ವಭಾವಿ ಸಭೆ ದಿನಾಂಕ ಮತ್ತು ಸಮಯ | ದಿನಾಂಕ : 22.12.2025 ರಂದು ಸಮಯ : ಬೆಳಿಗೆ 11.00 ಗಂಟೆಗೆ, ಗ್ರಾಮ ಪಂಚಾಯಿತಿ ಕಛೇರಿಯಲ್ಲಿ | |
| 03 | ಮೊಹರು ಮಾಡಿದ ದರಪಟ್ಟಿ ಫಾರ್ಮ ಮತ್ತು ಇತರೆ ದಾಖಲೆಗಳನ್ನು ಸ್ವೀಕರಿಸುವ ದಿನಾಂಕ ಮತ್ತು ಸಮಯ | ದಿನಾಂಕ : 30.12.2025 ರಂದು ಸಮಯ : ಬೆಳಿಗ್ಗೆ 11.00 ಗಂಟೆಯಿಂದ ಅಪರಾಹ್ನ 2.00 ಗಂಟೆಯವರೆಗೆ ಗ್ರಾಮ ಪಂಚಾಯತಿ ಕಛೇರಿಯಲ್ಲಿ | |
| 04 | ಮೊಹರು ಮಾಡಿದ ದರಪಟ್ಟಿ ಲಕೋಟೆ ತೆರೆಯುವ ಸ್ಥಳ, ದಿನಾಂಕ ಮತ್ತು ಸಮಯ | ಹಾಜರಿರುವ ದರಪಟ್ಟಿದಾರರ ಸಮ್ಮುಖದಲ್ಲಿ ದಿನಾಂಕ : 30.12.2025 ರಂದು ಸಮಯ : ಅಪರಾಹ್ನ 3.00 ಗಂಟೆಗೆ, ಗ್ರಾಮ ಪಂಚಾಯಿತಿ ಕಛೇರಿಯಲ್ಲಿ | |

| ಕ್ರ ಸಂ. | ಕಾಮಗಾರಿಗಳ ವಿವರ | ಪ್ರಮಾಣ | ಸಾಮಗ್ರಿ ಮೊತ್ತ |
|---|---|---|---|
| 1 | Providing Culvert near Chandrakanth basavanappa land at Yalwantagi | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 123000 |
| | Providing Culvert near Govt Primary School at Yalwantagi | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 123000 |

ದರಪಟ್ಟಿಗೆ ಸಂಬಂಧಿಸಿದಂತೆ, ಯಾವುದೇ ಮಾಹಿತಿಯನ್ನು ಕಛೇರಿ ಕೆಲಸದ ವೇಳೆಯಲ್ಲಿ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಿ ಪಡೆಯಬಹುದಾಗಿರುತ್ತದೆ. ದರಪಟ್ಟಿಯನ್ನು ಸ್ವೀಕರಿಸುವ ಮತ್ತು ತಿರಸ್ಕರಿಸುವ ಅಧಿಕಾರಿ ಗ್ರಾಮ ಪಂಚಾಯಿತಿಯದ್ದಾಗಿರುತ್ತದೆ ಹಾಗೂ ಈ ದರಪಟ್ಟಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿಯ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ.

ಸಹಿ/-
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯತಿ, ಚಿಕನಾಗಾಂವ

# ನೀರಿನ ಸಮಸ್ಯೆ ಪರಿಹರಿಸುವವರೆಗೂ ಅನಿರ್ಧಿಷ್ಟಾವಧಿ ಧರಣಿ ಕರವೇ ಆಗ್ರಹ



ಲಿಂಗಸುಗೂರು :ತಾಲೂಕಿನ ಪೈದೊಡ್ಡಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದೆ. ಚಳಿಗಾಲದಲ್ಲಿಯೇ ಈ ಪರಿಯ ನೀರಿನ ಸಮಸ್ಯೆಯಾದರೆ, ಇನ್ನು ಮುಂಬರುವ ಬೇಸಿಗೆ ದಿನಗಳಲ್ಲಿ ಗ್ರಾಮದ ಜನತೆಯ ಪರಿಸ್ಥಿತಿ ನೆನದರೆ ಮೈ ಜುಮ್ ಎನ್ನುತ್ತದೆ. ಅಂತಹ ಬೀಕರ ಪರಿಸ್ಥಿತಿ ಪೈದೊಡ್ಡಿ ಗ್ರಾಮದಲ್ಲಿದೆ. ಈ ಬಗ್ಗೆ 9 ಜನವರಿ 2026ರಂದು ತಾಲೂಕು ಪಂಚಾಯತಿ ಸಾಮಾನ್ಯ ಸಭೆಯಲ್ಲಿ ನಮ್ಮ ಸಂಘಟನೆ ಮೌಖಿಕವಾಗಿ ತಮ್ಮ ಬಳಿ ಪೈದೊಡ್ಡಿ ಗ್ರಾಮದ ನೀರಿನ ಸಮಸ್ಯೆ ಪರಿಹರಿಸುವಂತೆ ಮನವಿ ಮಾಡಲಾಗಿತ್ತು. ಇನ್ನು 2 ದಿನಗಳಲ್ಲಿ ಗ್ರಾಮದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುತ್ತೇವೆಂದು ಮೌಖಿಕವಾಗಿ ಭರವಸೆ ನೀಡಿದ್ದೀರಿ. ಆದರೆ ವಾರ ಕಳೆದರು ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

ಕಳೆದ 1 ತಿಂಗಳಿಂದ ಗ್ರಾಮದ ಜನತೆ ಕುಡಿಯುವ ನೀರಿನ ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ. ಅಲ್ಲದೇ ಗ್ರಾಮ ಪಂಚಾಯತಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಈ ಬಗ್ಗೆ ತಲೆ ಕೆಡಿಸಿಕೊಳ್ಳದೇ ಮೌನಕ್ಕೆ ಶರಣಾಗಿದ್ದಾರೆ. ನೀರಿನ ಸಮಸ್ಯೆ ಬಗ್ಗೆ ಹಲವಾರಿ ಬಾರಿ ಮನವಿ ಮಾಡಿದರು ನಮ್ಮ ಮನವಿಗೆ ಸ್ಪಂದಿಸುತ್ತಿಲ್ಲ. ಕಾರಣ ಗ್ರಾಮದ ಜನತೆ, ಗ್ರಾಮ ಪಂಚಾಯತಿ ಸದಸ್ಯರು ಹಾಗೂ ನಮ್ಮ ಸಂಘಟನೆಯ ಪದಾಧಿಕಾರಿಗಳು ನೀರಿನ ಸಮಸ್ಯೆ ಪರಿಹರಿಸುವವರೆಗೂ ಅನಿರ್ಧಿಷ್ಟಾವಧಿ ಧರಣಿಯನ್ನು ಮಾಡಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಕಾರ್ಯನಿರ್ವಾಹಣಾಧಿಕಾರಿ ಅಧಿಕಾರಿಗೆ ಮನವಿ ಸಲ್ಲಿಸಿದರು

ಈ ಸಂದರ್ಭದಲ್ಲಿ ಸಂಘಟನೆಯ ಅಧ್ಯಕ್ಷ ಜಿಲಾನಿ ಪಾಷಾ, ರವಿಕುಮಾರ ಬರಗುಡಿ, ಅಜೀಜ್ ಪಾಷಾ, ಮೋಸಿನ್ ಖಾನ್, ಅಲ್ಲಾವುದ್ದೀನ್, ತಿಮ್ಮನಗೌಡ, ಮಲ್ಲಣ್ಣ ಮರೆಪ್ಪ, ಬಾಬು, ವಿರೇಶ ಹಿರೇಮಠ, ಪ್ರಭುಗೌಡ, ಪರಮಣ್ಣ, ಗ್ರಾಮಸ್ಥರು ಸೇರಿದಂತೆ ಉಪಸ್ಥಿತರಿದ್ದರು

## ಜಪಯಜ್ಞದಿಂದ ಆಯುಷ್ಯ ವೃದ್ಧಿ - ಹಾರಕೂಡ ಶ್ರೀ.



• **ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:**

ಗುರುವಿನ ಸಾನಿಧ್ಯದಲ್ಲಿ ಭಕ್ತಿಯಿಂದ ಸತ್ಸಂಗದಲ್ಲಿ ಪಾಲ್ಗೊಂಡು ಶ್ರದ್ದೆಯಿಂದ ಜಪಯಜ್ಞ ಮಾಡಿದರೆ ವೃದ್ಯಾಪ್ಯ ದೂರವಾಗಿ ಆಯುಷ್ಯ ವೃದ್ಧಿಯಾಗುತ್ತದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ಹುಲಸೂರ ತಾಲೂಕಿನ ಗೋರ್ಟಾ ಬಿ. ಗ್ರಾಮದಲ್ಲಿ ಇಷ್ಟಲಿಂಗ ಮಹಾಪೂಜೆ ಹಾಗೂ ಜಪಯಜ್ಞ ಕಾರ್ಯಕ್ರಮ ಅಂಗವಾಗಿ ಆಯೋಜಿಸಿದ ಧರ್ಮಸಭೆಯ ನೇತೃತ್ವ ವಹಿಸಿ ಮಾತನಾಡಿದ ಶ್ರೀಗಳು, ಜಪ ತಪ ಧ್ಯಾನಾದಿಗಳಿಂದ ಶಿವನಾಮ ಸ್ಮರಣೆ ಮಾಡಿದರೆ ಮನೋವಿಕಾರಗಳು ತೊಲಗಿ ಚಿತ್ತಶುದ್ಧಿಯಾಗಿ ನೆಮ್ಮದಿ ಲಭಿಸುತ್ತದೆ.

ಸಾಕ್ಷಾತ್ ಪರಮಾತ್ಮನ ಪ್ರತಿರೂಪವಾಗಿರುವ ಪೂಜ್ಯ ರಂಭಾಪುರಿ ಜಗದ್ಗುರು ಮಹಾಸನ್ನಿಧಿರವರ ದಿವ್ಯ ಕೃಪೆಯಿಂದ ನಡೆಯುವ ಪವಿತ್ರ ಜಪ ಯಜ್ಞ ಕಾರ್ಯಕ್ರಮದಲ್ಲಿ ಪಾಲ್ಗೊಂಡ ತ್ಯಾಗ ಭೂಮಿ ಗೋರ್ಟಾ ಗ್ರಾಮದ ಜನತೆ ನಿಜವಾಗಿಯೂ ಧನ್ಯರು.

ಬಸವಾದಿ ಶರಣರ ಶ್ರೇಷ್ಠ ವಚನಗಳ ಅಧ್ಯಯನ ಹಾಗೂ ಆದಿ ಜಗದ್ಗುರು ರೇಣುಕಾಚಾರ್ಯರ ಆದರ್ಶ ಪರಂಪರೆಯ ಶಿದ್ಧಾಂತ ಶಿಖಾಮಣಿ ಅಧ್ಯಯನ ಮಾಡಿದರೆ ಬಾಳು ಸುಭಕ್ಷಯಿಂದ ಕೂಡಿರುತ್ತದೆ.

ರಂಭಾಪುರಿ ಮಹಾ ಸನ್ನಿಧಿರವರ ಆಶೀರ್ವಾದದಿಂದ ಬರುವ ದಿನಗಳಲ್ಲಿ ಸರ್ವರಿಗೂ ಸರ್ವ ರೀತಿಯ ಸೌಖ್ಯ ಪ್ರಾಪ್ತವಾಗಲಿ ಎಂದು ಶುಭ ಹಾರೈಸಿದರು.

ಶ್ರೀಮದ್ ರಂಭಾಪುರಿ ಜಗದ್ಗುರುಗಳು ಸಾನಿಧ್ಯ ವಹಿಸಿದ್ದರು.

ಮೆಹಕರದ ಪೂಜ್ಯಶ್ರೀ ರಾಜೇಶ್ವರ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕೆಯುಐಡಿಸಿ ತಹಶೀಲ್ದಾರ್ ಸಾವಿತ್ರಿ ಶರಣು ಸಲಗರ ಮಾತನಾಡಿದರು. ಬರದಾಪುರ ಶ್ರೀಗಳು, ಶಿವಶರಣಪ್ಪ ಸೀರಿ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು. ರಮೇಶ ರಾಜೋಳೆ ನಿರೂಪಿಸಿದರು.

## ಅದ್ದೂರಿಯಾಗಿ ಮೆರವಣಿಗೆ.



**ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:**

ತಾಲೂಕಿನ ಸಸ್ತಾಪೂರ ಗ್ರಾಮದಲ್ಲಿ ಶ್ರೀ ಯಲ್ಲಾಲಿಂಗೇಶ್ವರ ಆನಾಂದಾಶ್ರಮದಿಂದ ಲಿಂ.ಪೂಜ್ಯಶ್ರೀ ಯಲ್ಲಾಲಿಂಗೇಶ್ವರ ಮೂರ್ತಿಯೊಂದಿಗೆ ಸಮ್ಮೇಳನಾಧ್ಯಕ್ಷರಾದ ಶಿಕ್ಷಕ ಕವಿ ಶಿವರಾಜ ಡಿ ಮೇತ್ರೆ ಮತ್ತು ಶಕುಂತಲಾ ಮೇತ್ರೆ ದಂಪತಿಗಳೊಂದಿಗೆ ಮೆರವಣಿಗೆಗೆ ಮಾಜಿ ಎ.ಪಿ.ಎಂ.ಸಿ ಅಧ್ಯಕ್ಷರಾದ ಸಿದ್ರಾಮಪ್ಪ ಗುದಗೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಗೌಡಪ್ಪ ಪಾಟೀಲ,ಸಾಹಿತಿ ಡಾ.ಜಯದೇವಿ ಗಾಯಕವಾಡ,ಡಾ.ಶೀಲಾದೇವಿ ಬಿರಾದಾರ,ಡಾ.ಗವಿಸಿದ್ಧಪ್ಪ ಪಾಟೀಲ,ಡಾ.ರಾಜಕುಮಾರ ಮಾಳಗೆ,ಆಕಾಶ ತೆಗನೂರು ಭಕ್ತಾದಿಗಳು ಬಾಜಾ ಭಜಂತ್ರಿಯೊಂದಿಗೆ ಮೆರವಣಿಗೆ ನೆರವೇರಿತು.




**ಬಸವಕಲ್ಯಾಣ :-ಹುಲಸೂರ ತಾಲೂಕಿನ ಗೋರ್ಟಾ ಬಿ. ಗ್ರಾಮದಲ್ಲಿ ಆಯೋಜಿಸಿದ ಧರ್ಮಸಭೆಯಲ್ಲಿ ಹಾರಕೂಡ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು 12 ತೊಲೆ ಚಿನ್ನದ ಜಗದ್ಗುರು ರೇಣುಕಚಾರ್ಯರ ಮೂರ್ತಿ ಮತ್ತು ತಡೋಳ ಶ್ರೀ ಮಠದ ಪೂಜ್ಯಶ್ರೀ ರಾಜೇಶ್ವರ ಶಿವಾಚಾರ್ಯರು 10 ತೊಲೆ ಚಿನ್ನದ ಶ್ರೀ ವೀರಭದ್ರೇಶ್ವರ ಮೂರ್ತಿಗಳನ್ನು ಶ್ರೀಮದ್ ರಂಭಾಪುರಿ ಸನ್ನಿಧಿಯವರಿಗೆ ಅರ್ಪಿಸಿದರು.ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).**

## ಮಹಾಯೋಗಿ ವೇಮನ ಜಯಂತಿಗೆ ಸಿದ್ಧತೆ ಮಾಡಿಕೊಳ್ಳಿ: ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ

**ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :**



ಜಿಲ್ಲಾಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಚರಿಸಲಾಗುವ ಮಹಾಯೋಗಿ ವೇಮನಜಯಂತ್ಯುತ್ಸವಕಾರ್ಯಕ್ರಮಕ್ಕೆ ಸೂಕ್ತ ಸಿದ್ಧತೆ ಮಾಡಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಾಯೋಗಿ ವೇಮನ ಜಯಂತಿ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಮಹಾಯೋಗಿವೇಮನಜಯಂತಿಯ ಅಂಗವಾಗಿ ಇದೇ ಜನವರಿ 19ರಂದು ಬೆಳಿಗ್ಗೆ 10.30 ಗಂಟೆಗೆ ಶ್ರೀ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ವೇದಿಕೆ ಕಾರ್ಯಕ್ರಮವನ್ನುಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ವೇಮನರ ಭಾವಚಿತ್ರಕ್ಕೆ ವಿಶೇಷಪೂಜೆ, ವಿಶೇಷ ಉಪನ್ಯಾಸ ಸೇರಿದಂತೆ ಮತ್ತಿತರ ಕಾರ್ಯಕ್ರಮಗಳ ನಡೆಯಲಿವೆ. ಜಯಂತಿಯನ್ನು ಅರ್ಥಪೂರ್ಣವಾಗಿ ಮತ್ತು ವ್ಯವಸ್ಥಿತವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಶಿಷ್ಠಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಎಲ್ಲ ಗಣ್ಯರಿಗೆ ಆಹ್ವಾನ ನೀಡಬೇಕು. ಜಯಂತಿ ಆಚರಣೆ ಕುರಿತಂತೆ ಆಯಾ ಇಲಾಖೆಗಳಿಗೆ ಕೆಲಸ ಹಂಚಿಕೆ ಮಾಡಿದಂತೆ ಸಂಬಂಧಿಸಿದ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಹಾಗೂ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ, ಶಾಲಾ ಕಾಲೇಜುಗಳಲ್ಲಿ ಜ.19 ರಂದು ಕಡ್ಡಾಯವಾಗಿ ಮಹಾಯೋಗಿ ವೇಮನ ಜಯಂತಿಯನ್ನು ಆಚರಿಸಬೇಕು. ಜಯಂತಿ ಕಾರ್ಯಕ್ರಮದಲ್ಲಿ ಎಲ್ಲಾ ಸಮಾಜಬಾಂಧವರು, ಸಾರ್ವಜನಿಕರು ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜ, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಪುಷ್ಪಲತಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ್, ಸಮಾಜದ ಮುಖಂಡರಾದ ಕಾಶೀನಾಥ್ ರಡ್ಡಿ, ಪ್ರಭು ಹೆಬ್ಬಾಳ, ಹನುಮರಡ್ಡಿ, ಚಂದ್ರಶೇಖರಗೌಡ ಪಾಟೀಲ, ಹೆಚ್.ಸುರೇಶ, ಎನ್.ಬಿ.ಪ್ರಭು, ವಿರುಪಣ್ಣನವೋದಯ ಸೇರಿದಂತೆ ಮತ್ತಿತರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು

## ರಾಜ್ಯದಲ್ಲಿ ಗಲಭೆಗಳು ತಡೆಗೆ: ಬಿಜೆಪಿ ಮಹಿಳಾ ಮೋರ್ಚಾ: ಜಿಲ್ಲಾಧಿಕಾರಿ ಮನವಿ

• **ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ.**

ಹುಬ್ಬಳ್ಳಿಯಲ್ಲಿ ಮಹಿಳೆಯನ್ನು ಪೊಲೀಸರು ವಿವಸ್ತ್ರಗೊಳಿಸಿ ಹಲ್ಲೆ ಮಾಡಿದ್ದನ್ನು ಖಂಡಿಸಿ ಪೊಲೀಸರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು ಹಾಗೂ ಒಬ್ಬ ಜೀವಂತ ಪ್ರತಿನಿಧಿಗೆ ಶ್ರದ್ಧಾಂಜಲಿ ಪೋಸ್ಟ್ ನ್ನು ಹಾಕಿರುವವನ ವಿರುದ್ಧ ಕ್ರಮ ಕೈಗೊಳ್ಳಲು ಬಿಜೆಪಿ ಮಹಿಳಾ ಮೋರ್ಚಾ ರಾಜ್ಯ ಕಾರ್ಯಕಾರಣಿ ಸದಸ್ಯೆ ವೀಣಾ ಮೋದಿ ಅವರ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಮನವಿ ಸಲ್ಲಿಸಲಾಯಿತು. ಹುಬ್ಬಳ್ಳಿ ನಗರದಲ್ಲಿ ದಿನಾಂಕ 05-01-2026ರ ಸೋಮವಾರದಂದು ಪೊಲೀಸರು ಬಿಜೆಪಿ ಕಾರ್ಯಕರ್ತೆ ಸುಜಾತ ಹಂಡಿ ಯವರನ್ನು ವಿವಸ್ತ್ರಗೊಳಿಸಿ ಹಲ್ಲೆ ಮಾಡಿರುವ ಘಟನೆ ನಾಗರೀಕ ಸಮಾಜವೇ ತಲೆತಗ್ಗಿಸುವಂತೆ , ಮಹಿಳೆಯರಿಗೆ ಪವಿತ್ರ ಸ್ಥಾನ ನೀಡುವ ಈ ಸಮಾಜದಲ್ಲಿ ರಾಜಕೀಯ ದ್ವೇಷಕ್ಕಾಗಿ ಒಬ್ಬ ಮಹಿಳೆ ಎಂದು ನೋಡದೆ, ಸಾರ್ವಜನಿಕವಾಗಿ ದೌರ್ಜನ್ಯ ಎಸಗಲು ಪೊಲೀಸರಿಗೆ ಕುಮ್ಮಕ್ಕು ನೀಡಿದ್ದು ನಾಚಿಕೆಗೇಡಿನ ಸಂಗತಿ, ಪೊಲೀಸ್ ಇಲಾಖೆಯ ಮೇಲೆ ಸರ್ಕಾರದ ನಿಯಂತ್ರಣ ಇಲ್ಲದಿರುವುದು ಇಂದಿನ ಈ ಘಟನೆಯೇ ಸಾಕ್ಷಿಯಾಗಿದೆ. ಇದನ್ನು ನಾವು ಖಂಡಿಸುತ್ತೇವೆ. ಕಾಂಗ್ರೆಸ್ ಕಾರ್ಪೊರೇಟರ್ ಸುವರ್ಣ ಅವರು ನೀಡಿದ ದೂರಿನ ಮೇರೆಗೆ ಬಿಜೆಪಿ ಕಾರ್ಯಕರ್ತೆ ಸುಜಾತ ಹಂಡಿ ಮೇಲೆ ಪೊಲೀಸರು ತಮ್ಮ ವರ್ಷವನ್ನು ಪ್ರದರ್ಶಿಸಿರುವುದು ರಾಜ್ಯದಲ್ಲಿ ಮಹಿಳೆಯರು ಅಸುರಕ್ಷಿತರು ಹಾಗೂ ದುರಾಡಳಿತಕ್ಕೆ ಹಿಡಿದ ಕೈಗನ್ನಡಿಯಾಗಿದೆ ಹಾಗೂ ಸುಳ್ಯದ ಶಾಸಕಿ ಭಾಗಿರತಿ ಮುರುಳ್ಯ ರವರನ್ನು ತೇಜೋವಧೆ ಮಾಡುವ ಪೋಸ್ಟ್ ನ್ನು ಹಾಕಿರುತ್ತಾನೆ. ಈ ರೀತಿಯ ಶ್ರದ್ಧಾಂಜಲಿ ಪೋಸ್ಟ್ ಹಾಕಿರುವುದನ್ನು ನೋಡಿದರೆ, ಈತನ ಮನಸ್ಥಿತಿ ಏನೂ ಎಂದು ಅರ್ಥ ಆಗುತ್ತದೆ , ದಲಿತ ಶಾಸಕಿಗೆ ಈ ಅಪಮಾನ ಮಾಡಿರುವುದು ತೀವ್ರ ಖಂಡನೀಯ, ಈತನ ಮೇಲೆ ಮೊಕದ್ದಮೆ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷೆ ಪ್ರಭಾವತಿ ಕಲಾಲ್, ಜಿಲ್ಲಾ ಕಾರ್ಯದರ್ಶಿ ವಿಜಯಲಕ್ಷ್ಮಿ ನಾಯಕ, ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸ್ನೇಹ ರಸಳಕರ್, ಮಹಿಳಾ ಮೋರ್ಚಾ ನಗರ ಮಂಡಲ ಅಧ್ಯಕ್ಷೆ ಭೀಮಬಾಯಿ ಶೆಂಡಿಗಿ, ಶಕುಂತಲಾ ಜಿ ಸೇರಿದಂತೆ ಇತರರು ಇದ್ದರು.

## ವಿಜೃಂಭಣೆಯಿಂದ ಗಣರಾಜ್ಯೋತ್ಸವ ಆಚರಣೆಗೆ ನಿರ್ಧಾರ: ಸಕಲ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಗೆ ಡಿ.ಸಿ. ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ:**



ಕಲಬುರಗಿಜಿಲ್ಲೆಯಾದ್ಯಂತ ಇದೇ ಜನವರಿ 26 ರಂದು 77ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿದ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಜನವರಿ 26 ರಂದು ಬೆಳಿಗ್ಗೆ 9 ಗಂಟೆಗೆ ಕಲಬುರಗಿ ನಗರದ ಡಿ.ಎ.ಆರ್. ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾಡಳಿತದಿಂದ ಜರುಗುವ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ರಾಷ್ಟ್ರಧ್ವಜಾರೋಹಣ ಮಾಡಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವರು. ಶಿಷ್ಠಾಚಾರದಂತೆ ಎಲ್ಲಾ ಚುನಾಯಿತ ಪ್ರತಿನಿಧಿಗಳನ್ನು ಆಹ್ವಾನಿಸಬೇಕು ಮತ್ತು ದಿನಾಚರಣೆಗೆ ಸಕಲ ಪೂರ್ವ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪೊಲೀಸ್ ಪರೇಡ್ ಮೈದಾನದಲ್ಲಿ ಶಾಲಾ ಮಕ್ಕಳು, ಸಾರ್ವಜನಿಕರು, ಅಧಿಕಾರಿ ಸಿಬ್ಬಂದಿಗಳು ಭಾಗವಹಿಸುವುದರಿಂದ ಎಲ್ಲೆಡೆ ಸ್ವಚ್ಚತೆ ಕಾಪಾಡಬೇಕು. ವಿದ್ಯುತ್ ವ್ಯತ್ಯಯವಾಗದಂತೆ ಎಚ್ಚರವಹಿಸಬೇಕು. ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ, ಮಕ್ಕಳಿಗೆ ಸಿಹಿ ಪೊಟ್ಟಣ ವಿತರಿಸಬೇಕು. ಗಣ್ಯರು ಆಗಮಿಸುವುದರಿಂದ ಅಗತ್ಯ ಪೊಲೀಸ್ ಭದ್ರತೆ ಕಲ್ಪಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಜಿಲ್ಲಾಧಿಕಾರಿಗಳು, ಗಣರಾಜ್ಯೋತ್ಸವ ಅಂಗವಾಗಿ ಕಲಬುರಗಿ ನಗರದ ಅಪ್ಪ ಕೆರೆ ಉದ್ಯಾನವನದಲ್ಲಿ ಮೂರು ದಿನಗಳ ಕಾಲ ಪುಷ್ಪ ಪ್ರದರ್ಶನ ಆಯೋಜಿಸುವಂತೆ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ ಇನಾಂದಾರ ಅವರಿಗೆ ಸೂಚನೆ ನೀಡಿದರು. ಎನ್.ಸಿ.ಸಿ., ಸ್ಕೌಟ್ ಮತ್ತು ಗೈಡ್ಸ್, ಭಾರತ ಸೇವಾದಳ ಸೇರಿದಂತೆ ಪೊಲೀಸ್ ಇಲಾಖೆಯ ವಿವಿಧ ತುಕಡಿಗಳಿಂದ ಆಕರ್ಷಕ ಪಥಸಂಚಲನ ಮತ್ತು ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಬೇಕು. ಇನ್ನು ವಿವಿಧ ಇಲಾಖೆಯ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ಸರ್ಕಾರಿ ಸೌಲಭ್ಯ ವಿತರಣೆ ಮಾಡುವುದಾದರೆ ಶನಿವಾರ ಸಂಜೆಯೊಳಗೆ ಇಲಾಖೆಗಳು ಜಿಲ್ಲಾಡಳಿತಕ್ಕೆ ಮಾಹಿತಿ ನೀಡಬೇಕೆಂದು ಸೂಚಿಸಲಾಯಿತು. ಸ್ತಬ್ದ ಚಿತ್ರ ಪ್ರದರ್ಶನ ಯೋಜಿಸಬೇಕು: ಕೃಷಿ, ತೋಟಗಾರಿಕೆ, ಆರೋಗ್ಯ, ಜೆಸ್ಕಾಂ, ಕೆ.ಕೆ.ಆರ್.ಟಿ.ಸಿ., ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ಜಿಲ್ಲಾ ಪಂಚಾಯತ್ ಕಚೇರಿಯಿಂದ ವಿವಿಧ ವಿಷಯಾಧಾರಿತ ಆಕರ್ಷಕ ಸ್ಥಬ್ದಚಿತ್ರಗಳನ್ನು ಆಯೋಜಿಸಬೇಕೆಂದು ಇದೇ ಸಂದರ್ಭದಲ್ಲಿ ಸಂಬಂಧಪಟ್ಟ ಇಲಾಖೆಯ ಮುಖ್ಯಸ್ಥರಿಗೆ ಡಿ.ಸಿ. ಸೂಚನೆ ನೀಡಿದರು. ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಮಾತನಾಡಿ, ಭವಿಷ್ಯದಲ್ಲಿನ ಕಲಬುರಗಿ ನಗರ ಬೆಳವಣಿಗೆ ಕುರಿತು ಶಾಲಾ ಮಕ್ಕಳಿಂದ ಚಿತ್ರಸ್ಪರ್ಧೆ ಆಯೋಜಿಸಬೇಕು. ಸ್ಪರ್ಧಾಳುಗಳ ಬಿಡಿಸದ ಚಿತ್ರಗಳನ್ನು ಪರೇಡ್ ಮೈದಾನದಲ್ಲಿ ಪ್ರದರ್ಶಿಸಿದಲ್ಲಿ ಮಕ್ಕಳಿಗೆ ಅದುವೇ ಸ್ಫೂರ್ತಿಯಾಗಲಿದೆ ಎಂದರು. ಸಭೆಯಲ್ಲಿ ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್, ಮಹಾನಗರ ಪಾಲಿಕೆ ಉಪ ಆಯುಕ್ತೆ (ಆಡಳಿತ) ಪ್ರಮೀಳಾ ಎಂ.ಕೆ. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.



ಚಿಟಗುಪ್ಪ: ತಾಲೂಕಿನ ವಡ್ಡನಕೇರಾ ಗ್ರಾಮದ ರಾಷ್ಟ್ರೀಯ ಹೆದ್ದಾರಿ 65ರ ಪಕ್ಕದಲ್ಲಿ ಖಾಜಾಪಾಷಾ ಶೇರಿಕಾರ್ ಮಾಲೀಕತ್ವದ ನೂತನ ನೂರಾನಿ ಜನರಲ್ ಸ್ಟೋರ್ ಅಂಗಡಿ ಪೂಜೆ ಕಾರ್ಯಕ್ರಮದಲ್ಲಿ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಭಾಗವಹಿಸಿ ಸನ್ಮಾನಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಶೈಲೇಂದ್ರ ಕಾವಡಿ, ಮಹಮ್ಮದ್ ಅಮಿರೋದ್ದೀನ್ ಶೇರಿಕಾರ್, ಶಾಮರಾವ ಭುತ್ತಾಳೆ, ರಾಜಕುಮಾರ ಆರ್. ಹಡಪದ, ಇಮ್ರಾನ್ ಶೇರಿಕಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

### ಯಂಪಾಡ ಸರ್ಕಾರಿ ಶಾಲೆಯಲ್ಲಿ ನಡೆದ ಘಟನೆ

## ವಿದ್ಯಾರ್ಥಿನಿಯರಿಂದ ಶಾಲಾ ಕೊಠಡಿ ಮತ್ತು ಆವರಣ ಸ್ವಚ್ಛಗೊಳಿಸುತ್ತಿರುವುದು



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**



ವಿದ್ಯಾರ್ಥಿನಿಯರಿಂದ ಶಾಲೆಯ ಕೊಠಡಿಗಳು ಮತ್ತು ಆವರಣವನ್ನು ಸ್ವಚ್ಛಗೊಳಿಸುತ್ತಿರುವುದು ಪೋಷಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.ಗುರುಮಿಟ್ಕಲ್ ತಾಲೂಕಿನ ಯಂಪಾಡ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರಿ ಮುಖ್ಯ ಗುರು ಮೈಲಾರಿ ರವರು ವಿದ್ಯಾರ್ಥಿನಿಯರಿಗೆ ಶಾಲಾ ಕೊಠಡಿ ಮತ್ತು ಆವರಣ ಸ್ವಚ್ಛಗೊಳಿಸುವಂತೆ ಕೆಲಸ ಮಾಡಿಸುತ್ತಿರುವುದು ಗ್ರಾಮದಲ್ಲಿ ಪೋಷಕರು ಆಕ್ರೋಶ ಹೊರಹಾಕಿದ್ದಾರೆ. ಮಕ್ಕಳನ್ನ ವಿದ್ಯಾವಂತರನ್ನಾಗಿ ಮಾಡಿ ದೇಶಕ್ಕೆ ಕೀರ್ತಿ ತರುವ ನಾಡಿನ ಉತ್ತಮ ಪ್ರಜೆಯಾಗಿ ನಿರ್ಮಾಣ ಮಾಡುವ ವಿದ್ಯಾ ಕೇಂದ್ರಗಳಾದ ಶಾಲೆಗಳಲ್ಲಿ ಅವ್ಯವಸ್ಥೆಯನ್ನು ನಡೆಯುತ್ತಿರುವುದು ಎಂಥ ದುರ್ಘಟನೆಯಾಗಿದೆ. ಮಕ್ಕಳಿಂದನೆ ಕೆಲಸ ಕಾರ್ಯಗಳನ್ನು ಮಾಡಿಕೊಂಡು ಮಕ್ಕಳನ್ನು ಶಿಕ್ಷಣದಿಂದ ವಂಚಿತರಾಗಿ ಮಾಡುವ ಮೂಲ ಉದ್ದೇಶ ಇವರ ಹೊಂದಿದ್ದಾರೆ ಎಂದು ಮೇಲ್ನೋಟಕ್ಕೆ ಎದ್ದು ಕಾಣುತ್ತದೆ. ಈ ಹಿಂದೆ ಇರುವ ಶಿಕ್ಷಕರು ಅತ್ಯುತ್ತಮವಾಗಿ ಪಾಠ ಬೋಧನೆ ಮೂಲಕ ಗ್ರಾಮಕ್ಕೆ ಉತ್ತಮವಾದ ಹೆಸರನ್ನು ನಾಡಿಗೆ ಪರಿಚಯ ಮಾಡಿಸಿಕೊಟ್ಟಿದ್ದಾರೆ, ನಮ್ಮ ಮಕ್ಕಳ ಪಾಲಿಗೆ ದುರ್ದೈವ ಇಂಥ ಶಿಕ್ಷಕರು ಬಂದಿರುವುದು. ಶೈಕ್ಷಣಿಕವಾಗಿ ಯಾವುದೇ ಕಾರ್ಯಗಳನ್ನು ಮಾಡದೆ, ಮಕ್ಕಳ ಕಾಳಜಿ ವಹಿಸದೆ ಪ್ರಭಾರಿ ಮುಖ್ಯ ಗುರು ಸ್ವತ: ತಾನೇ ಮುಂದೆ ನಿಂತು ಮಕ್ಕಳಿಗೆ ಶಾಲೆ ಕೊಠಡಿ ಮತ್ತು ಆವರಣವನ್ನು ಸ್ವಚ್ಛಗೊಳಿಸುವಂತೆ ಹೇಳಿ ಕೆಲಸ ಮಾಡಿಸುತ್ತಿದ್ದಾನೆ. ಶಿಕ್ಷಣವನ್ನು ಕಲಿಸುವ ಗುರುವೇ ದಾರಿ ತಪ್ಪಿಸುವ ಹಾದಿ ಹಿಡಿದಿದ್ದಾನೆ, ಅವ್ಯವಸ್ಥೆಯಾಗಿ ಊಟ ನೀಡುತ್ತಿರುವುದು. ಪ್ರತಿದಿನ ಬಾಳೆಹಣ್ಣು, ತತ್ತಿ, ಹಾಲಿನ ಪೌಡರ್ ಇತ್ಯಾದಿ ಸಾಮಗ್ರಿಗಳನ್ನು ಮಾರಾಟ ಮಾಡಿಕೊಳ್ಳುತ್ತಿದ್ದಾನೆ. ಮಕ್ಕಳ ಜೀವನದಲ್ಲಿ ಆಟ ಆಡುತ್ತಿರುವ ಮುಖ್ಯ ಶಿಕ್ಷಕ ಮೈಲಾರಿ ಯನ್ನ ಕೂಡಲೇ ಅಮಾನತುಗೊಳಿಸಬೇಕು ಮತ್ತು ಮಕ್ಕಳ ರಕ್ಷಣಾಧಿಕಾರಿಗಳು ಈ ಕೂಡಲೇ ಇವರು ವಿರುದ್ಧ ಕೇಸ್ ದಾಖಲೆಸಿಕೊಂಡು ಕಾನೂನಿನ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಹಾಗೂ ಪೋಷಕರು ಪತ್ರಿಕೆಗೆ ತಿಳಿಸಿದರು.

### ಅವ್ಯವಸ್ಥೆಯ ಬಿಸಿಯೂಟ

**ಪ್ರತಿ ದಿನ ಮಕ್ಕಳಿಗೆ ತಿಳಿಯಾದ ಸಾರು ಮತ್ತು ಅನ್ನ ಬಡಿಸುತ್ತಾರೆ. ಅನ್ನದಲ್ಲಿ ಹಲವು ಬಾರಿ ಸಣ್ಣ ಸಣ್ಣ ಹುಳಗಳು ಪತ್ತೆಯಾದವು ಹೇಳಿದರೆ ಅವು ಏನು ಮಾಡುತ್ತವೆ ಸುಮ್ಮನೆ ತಿನ್ನಿ ಎಂದು ಅಡುಗೆ ಸಿಬ್ಬಂದಿಯವರು ಹೇಳುತ್ತಾರೆ. ಸಾಂಬಾರಿಗೆ ಬಳಸುವ ಎರಡು ಪ್ಯಾಕೆಟ್ ಎಣ್ಣೆ ಮತ್ತು ತರಕಾರಿಗಳನ್ನು ನೀಡಿದ್ದಾರೆ ಅದರಲ್ಲಿ ಒಂದು ಪಾಕೆಟ್ ಎಣ್ಣೆ, ಅರ್ಧ ತರಕಾರಿ ಮಾತ್ರ ಬಳಸುತ್ತಾರೆ ಉಳಿದ ಅರ್ಧ ತರಕಾರಿ, ಒಂದು ಪಾಕೆಟ್ ಎಣ್ಣೆ ಮತ್ತು ಹಾಲಿನ ಪುಡಿ ಇಲ್ಲ ಮಾಯವಾಯಿತು.**

- **ಶಾಲೆಯ ಸಮಸ್ಯೆಗಳು.**
- **ಮಕ್ಕಳಿಂದ ಶಾಲಾ ಕೊಠಡಿ ಮತ್ತು ಆವರಣದಲ್ಲಿ ಕಸ ಸ್ವಚ್ಛಗೊಳಿಸುವಿಕೆ.**
- **ಶಾಲಾ ಕಚೇರಿ ಕೆಲಸಗಳನ್ನು ಮಕ್ಕಳಿಂದ ಮಾಡಿಸುತ್ತಿರುವುದು.**
- **ಸರಿಯಾದ ಬೋಧನೆ ಮಾಡದೆ, ಸಿಬ್ಬಂದಿಗಳೊಂದಿಗೆ ಪ್ರತಿದಿನವೂ ಸಂಘರ್ಷ ಮಾಡುತ್ತಿರುವುದು.**
- **ಹಾಜರಾತಿಯಲ್ಲಿ ಮಕ್ಕಳ ಸಂಖ್ಯೆ 365 ತೋರಿಸಿ, 200 ವಿದ್ಯಾರ್ಥಿಗಳು ಮಾತ್ರ ಶಾಲೆಯಲ್ಲಿ ಹಾಜರಾತಿ ಹೊಂದಿರುತ್ತಾರೆ.**
- **ವಿದ್ಯಾರ್ಥಿಗಳ ಹೆಸರಿನಲ್ಲಿ ಬರುವ ಬಾಳೆಹಣ್ಣು ತತ್ತಿ ಮತ್ತು ಹಾಲಿನ ಪೌಡರ್ ಅನ್ನು ತಾನೇ ಸ್ವತಃ ತೆಗೆದುಕೊಳ್ಳುತ್ತಿದ್ದಾನೆ.**
- **ಪಾಠ ಬೋಧನೆ ಮಾಡದೆ ಸಮಯ ವ್ಯರ್ಥ ಮಾಡುತ್ತಿರುವುದು.**
- **ಪ್ರತಿ ದಿನ ಸಿಬ್ಬಂದಿಗಳೊಂದಿಗೆ ಸಂಘರ್ಷ.**
- **ಪ್ರಶ್ನೆ ಕೇಳಿದ್ದಕ್ಕೆ ಎಸ್.ಡಿ.ಎಂ.ಸಿ. ಅಧ್ಯಕ್ಷನಿಗೆ ಅವಾಚ್ಯ ಶಬ್ದಗಳಿಂದ ಬೈದು ಮತ್ತು ಸಂಘರ್ಷ ಉಂಟು ಮಾಡುವುದು.**

## ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ

### ಜನವರಿ 21 ಮತ್ತು 22ಕ್ಕೆ ಸರ್ಕಾರಿ ನೌಕರರ ಕ್ರೀಡಾಕೂಟ ಆಯೋಜನೆಗೆ ನಿರ್ಧಾರ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಕಲಬುರಗಿ ಜಿಲ್ಲಾ ಘಟಕ ಸಂಯುಕ್ತಾಶ್ರಯದಲ್ಲಿ ಇದೇ ಜನವರಿ 21 ಮತ್ತು 22 ರಂದು ರಾಜ್ಯ ಸರ್ಕಾರಿ ನೌಕರರಿಗಾಗಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ವಾರ್ಷಿಕ ಕ್ರೀಡಾ-ಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು ಆಯೋಜನೆಗೆ ಶುಕ್ರವಾರ ಜರುಗಿದ ಸಭೆಯಲ್ಲಿ ನಿರ್ಧರಿಸಲಾಗಿದೆ.

ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕ್ರೀಡಾಕೂಟ ಸಂಬಂಧ ಜರುಗಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು, ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಮತ್ತು ಇದಕ್ಕಾಗಿ ಕೂಡಲೆ ಹೆಸರು ನೊಂದಣಿ ಮಾಡಿಕೊಳ್ಳಬೇಕೆಂದ ಅವರು, ಈ ಕುರಿತು ಎಲ್ಲಾ ಇಲಾಖೆಯ ಸೂಚನಾ ಫಲಕದಲ್ಲಿ ಕ್ರೀಡಾಕೂಟದ ಬಗ್ಗೆ ಪೋಸ್ಟರ್ ಅಂಟಿಸಿ ಪ್ರಚಾರ ಮಾಡಬೇಕು ಎಂದು ನೌಕರರ ಸಂಘದ ಪದಾಧಿಕಾರಿಗಳಿಗೆ ತಿಳಿಸಿದರು.

ಜನವರಿ 21 ರಂದು ಚಂದ್ರಶೇಖರ್ ಪಾಟೀಲ ಕ್ರೀಡಾಂಗಣದಲ್ಲಿ ಎಲ್ಲಾ ಮಾದರಿಯ ಕ್ರೀಡೆಗಳು ಜರುಗಲಿವೆ. ಅದೇ ರೀತಿ ಜನವರಿ 22 ರಂದು ನಗರದ ಕನ್ನಡ ಭವನದಲ್ಲಿ ಸಾಂಸ್ಕೃತಿಕ ಸ್ಪರ್ಧೆ ಆಯೋಜನೆ ಮಾಡಿದ್ದು, ನೌಕರರು ದೈನಂದಿದ ಕೆಲಸದ ಒತ್ತಡದಿಂದ ಹೊರಬರಲು ಇದೊಂದು ಉತ್ತಮ ಅವಕಾಶವಾಗಿದ್ದು, ಕ್ರೀಡೆ ಮತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸಬೇಕು. ಕ್ರೀಡಾಕೂಟದಲ್ಲಿ ಭಾಗವಹಿಸುವ ನೌಕರರಿಗೆ ಓ.ಓ.ಡಿ ಸೌಲಭ್ಯ ಕಲ್ಪಿಸಲಾಗುವುದು ಎಂದು ಡಿ.ಸಿ. ತಿಳಿಸಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸಂಗಮೇಶ ಅವರು ಕ್ರೀಡಾಕೂಟಕ್ಕೆ ಇದೂವರೆಗೆ ತೆಗೆದುಕೊಂಡ ಪೂರ್ವ ಸಿದ್ಧತೆ ಕ್ರಮಗಳು ಮತ್ತು ವಿವಿಧ ಸ್ಪರ್ಧೆಗಳ ಕುರಿತು ಸಭೆಗೆ ಮಾಹಿತಿ ನೀಡಿದರು. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳೂಂಡಗಿ ಮಾತನಾಡಿ, ಎರಡು ದಿನಗಳ ಕ್ರೀಡಾಕೂಟದಲ್ಲಿ ವಿಶೇಷಚೇನತರಿಗೂ ಅವಕಾಶ ಕಲ್ಪಿಸಿದೆ. ಕ್ರೀಡಾಕೂಟದಲ್ಲಿ ಭಾಗವಹಿಸುವ ನೌಕರರಿಗೆ ಓ.ಓ.ಡಿ ಸೌಲಭ್ಯ ಮಂಜೂರು ಮಾಡಬೇಕು ಮತ್ತು ಕ್ರೀಡಾಕೂಟ ಯಶಸ್ಸಿಗೆ ಜಿಲ್ಲಾಡಳಿತ ಅಗತ್ಯ ಸಹಕಾರ ನೀಡುವಂತೆ ಡಿ.ಸಿ. ಅವರಿಗೆ ಮನವಿ ಮಾಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್, ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ಮಹಾನಗರ ಪಾಲಿಕೆ ಉಪ ಆಯುಕ್ತೆ (ಆಡಳಿತ) ಪ್ರಮೀಳಾ ಎಂ.ಕೆ. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

**ನಂದಿನಗರ ಬೀದರ್ 585401**

**ಆಸ್ತಿ ಅಧಿಕಾರಿಗಳವರ ಕಛೇರಿ**

**ಕಛೇರಿ ದೂರವಾಣಿ : 08482-245445**
Email.cokvafm@gmail.com

**ಸಂಖ್ಯೆ: ಅ.ಅ/ಕ.ಪ.ಪ.ಮೀ.ವಿ.ವಿ/ಟ.ನಂ-2/2025-26** **ದಿನಾಂಕ: 02.01.2026**

**ಬಹಿರಂಗ ಹರಾಜು ಪ್ರಕಟಣೆ**

**(ಅಲ್ಪಾವಧಿ ಟೆಂಡರ)**

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ನಂದಿನಗರ ಬೀದರಗೆ ಸೇರಿದ ಅನುಪಯುಕ್ತ ವಸ್ತುಗಳನ್ನು ಅನುಪಯುಕ್ತ ಎಂದು ನಿರ್ಧರಿಸಲಾಗಿದ್ದು ಅವುಗಳನ್ನು ಹರಾಜು ಮಾಡಲು ವಿಶ್ವವಿದ್ಯಾಲಯದ ಅನುಮತಿ ದೊರಕಿರುವ ಹಿನ್ನೆಲೆಯಲ್ಲಿ ಈ ಬಹಿರಂಗ ಹರಾಜು ಪ್ರಕಟಣೆಯನ್ನು ಹೊರಡಿಸಲಾಗಿದೆ. ಆಸಕ್ತರು ರೂ. 5,000, (ರೂಪಾಯಿ ಐದು ಸಾವಿರ ಮಾತ್ರ) ಡಿಮಾಂಡ ಡ್ರಾಫ್ಟ್/ಬ್ಯಾಂಕರ್ಸ ಚೆಕ್ಕನ್ನು " The Comptroller, KVAFSU,Bidar" ಇವರ ಹೆಸರಿನಲ್ಲಿ ದಿನಾಂಕ 19.01.2026 ಮಧ್ಯಾಹ್ನ 05.00 ಗಂಟೆಯವರೆಗೆ ಈ ಕಚೇರಿಗೆ ಸಲ್ಲಿಸಲು ಮತ್ತು ಡಇ.ಡಿ. ಸಲ್ಲಿಸಿದ ವ್ಯಕ್ತಿ ಮಾತ್ರ ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.

1. ಬಹಿರಂಗ ಹರಾಜು ಡಿ.ಡಿ. ಸಲ್ಲಿಸುವ ದಿನಾಂಕ:19.01.2026 ಮಧ್ಯಾಹ್ನ 05.00 ಗಂಟೆಯವರೆಗೆ
2. ಬಹಿರಂಗ ಹರಾಜು ದಿನಾಂಕ:20.01.2026ಮಧ್ಯಾಹ್ನ 05.00 ಗಂಟೆಯವರೆಗೆ

ತಮ್ಮ ವಿಶ್ವಾಸಿ

# ಸಂಕ್ರಾಂತಿ ಹಬ್ಬದ ಪ್ರಯುಕ್ತ ಉಡಿ ತುಂಬವು ಕಾರ್ಯಕ್ರಮ



"ಮಕರ ಸಂಕ್ರಾಂತಿಯ ಹಿಂದೆ ಪೌರಾಣಿಕ ಕಥೆಗಳ ಮಹತ್ವವೂ ಇದೆ. ದಂತಕಥೆಗಳ ಪ್ರಕಾರ ಸಂಕ್ರಾಂತಿ ಎಂಬ ದೇವಿಯು ಶಂಕರಾಸುರ ಎಂಬ ರಾಕ್ಷಸನನ್ನು ಈ ದಿನ ಸಂಹರಿಸಿದಳು. ಅದರಿಂದಲೇ ಈ ಹಬ್ಬಕ್ಕೆ 'ಮಕರ ಸಂಕ್ರಾಂತಿ' ಎಂಬ ಹೆಸರು ಬಂದಿದೆ ಎಂದು ಹೇಳಲಾಗುತ್ತದೆ."

ಮಲ್ಲಮ್ಮ ಸಿದ್ರಾಮಪ್ಪ ಬಿರಾದಾರ,
ಡಿಗ್ಗಿ ಗ್ರಾಮದ ಹಿರಿಯರು.

- ಮಲ್ಲಮ್ಮ ನುಡಿ ವಾರ್ತೆ
ಕಮಲನಗರ:

ಸಂಕ್ರಾಂತಿ ಹಬ್ಬದ ಪ್ರಯುಕ್ತ ಸುಮಂಗಲೇಯರಿಗೆ ಉಡಿ ತುಂಬವು ಕಾರ್ಯಕ್ರಮ ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಸಂಭ್ರಮದಿಂದ ನಡೆಯಿತು.

ಮಕರ ಸಂಕ್ರಾಂತಿ ಹಬ್ಬ ಸೂರ್ಯನ ಹೊಸ ಕಿರಣ ದಿಂದ ಪ್ರಾರಂಭ ವಾಗುತ್ತದೆ.

ಸಂಕ್ರಾಂತಿ ಹಬ್ಬ ಸಮೃದ್ಧಿಯ ಸಂಕೇತ. ಸಂಕ್ರಾಂತಿಯನ್ನು ಧಾರ್ಮಿಕ ತತ್ವಗಳಿಂದ ಸ್ವತಂತ್ರವಾಗಿ ಆಚರಿಸಲಾಗುತ್ತದೆಯಾದರೂ ವೇದಾಂಗ ಜ್ಯೋತಿಷ್ಯ ಶಾಸ್ತ್ರದ ತಳಹದಿ ಹೊಂದಿರುವುದ ಈ ದಿನ ಕುಂಕುಮ ಮತ್ತು ಅರಶಿಣ ಹಚ್ಚಿ ಶುಭ ಕೋರಲಾಗುತ್ತದೆ ಎಂದು ಉಷಾ ಅನಿಲಕುಮಾರ ಬಿರಾದಾರ ಹೇಳಿದರು.ಈ ಸಂದರ್ಭದಲ್ಲಿ ಕಮಳಬಾಯಿ ತಪಸಾಳೆ,ಲಕ್ಷ್ಮಿಬಾಯಿ ರಾಂಪುರೆ, ಸೈಲಜಾ ಬಿರಾದಾರ, ನಿರ್ಮಲಾ ರಾಂಪುರೆ, ಉಷಾ ಬಿರಾದಾರ, ಸಾಕ್ಷಿ ಬಿರಾದಾರ, ಸೇರಿದಂತೆ ಅನೇಕರು ಇದ್ದರು.

# ವಚನಗಳಿಗೆ ಪಟ್ಟ ಕಟ್ಟಿದ ಗುರು ಪೂಜ್ಯ ಶ್ರೀ ಅಕ್ಕ ಅನ್ನಪೂರ್ಣತಾಯಿ: ಪ್ರಭುದೇವ ಸ್ವಾಮೀಜಿ

- ಮಲ್ಲಮ್ಮ ನುಡಿ ವಾರ್ತೆ
ಭಾಲ್ಕಿ :

ವಚನಗಳು ಶ್ರೇಷ್ಠ ಮಂತ್ರಗಳು ನೆಮ್ಮದಿಯ ಬದುಕಿನ ಸೂತ್ರಗಳು ಅಂತಹ ವಚನಗಳು ಜನಮಾನಸದಲ್ಲಿ ಬಿತ್ತಿ, ವಚನಗಳಿಗೆ ಪರಮೋಚ್ಚ ಸ್ಥಾನವನ್ನು ನೀಡಿ. ವಚನಗಳು ತಲೆ ಮೇಲೆ ಹೊತ್ತು ವಚನ ವಿಜಯೋತ್ಸವವನ್ನು ಆಚರಿಸಿ ವಚನಗಳಿಗೆ ಪಟ್ಟ ಕಟ್ಟಿದ ಕೀರ್ತಿ ಪೂಜ್ಯಶ್ರೀ ಲಿಂಗೈಕ್ಯ ಅಕ್ಕ ಅನ್ನಪೂರ್ಣತಾಯಿ ಅವರಿಗೆ ಸಲ್ಲುತ್ತದೆ ಎಂದು ಪ್ರಭುದೇವ ಮಹಾಸ್ವಾಮೀಜಿ ನುಡಿದರು.

ಸಿದ್ದಾಪುರವಾಡಿಯಲ್ಲಿ ನಡೆದ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತ್ಯುತ್ಸವ ಹಾಗೂ 17ನೇ ವಚನ ವಿಜಯೋತ್ಸವ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದರು.

ಪೂಜ್ಯರು ಅಕ್ಕ ಅನ್ನಪೂರ್ಣತಾಯಿ ಸರಳತೆಯ ಸಾಕಾರಮೂರ್ತಿ. ಬೀದರ ಜಿಲ್ಲೆಯ ಕೀರ್ತಿ ನಾಡಿನಾದ್ಯಂತ ಹಬ್ಬಿಸಿದವರು. ವಚನ ಪಠಣ ಅಭಿಯಾನ. ಶಿವಯೋಗ ಸಾಧಕರ ಕೂಟ, ಬಸವ ಭಾರತಿ ಸಂಸ್ಕಾರ ಶಿಬಿರ. ವಚನ ವಿಜಯೋತ್ಸವ ಕಾರ್ಯಕ್ರಮ ಮಾಡುತ್ತಾ ಶರಣ ತತ್ವ ಜನ ಮಾನಸದಲ್ಲಿ ಬಿತ್ತಿದವರು. ಅಕ್ಕನವರ ಸಂಕಲ್ಪದಂತೆ ಹಳ್ಳಿ ಹಳ್ಳಿಗಳಲ್ಲಿ ವಚನ ವಿಜಯೋತ್ಸವ ಆಚರಿಸುವ ಸಂಕಲ್ಪದೊಂದಿಗೆ 770 ಪ್ರವಚನಗಳು ಮಾಡುತ್ತ ಶರಣರ ತ್ಯಾಗ ಬಲಿದಾನದ ವೀರಗಾಥೆ ಸಾರುವ ಸಂಕಲ್ಪ ತೊಟ್ಟಿದ್ದೇವೆ ಎಂದು ತಿಳಿಸಿದರು.

ರಾಜಕುಮಾರ ಪಾಟೀಲ ಮಾತನಾಡಿ, ಶರಣರು ನಮಗಾಗಿ ಉಳಿಸಿ ಹೋದ ಅಮೂಲ್ಯ ಸಂಪತ್ತು ಎಂದರೆ ವಚನ ಸಾಹಿತ್ಯ. ಅಂತಹ ವಚನಗಳು ಇಂದು ಅರಿತು ಆಚರಣೆಯಲ್ಲಿ ತರಬೇಕಾಗಿದೆ. ಕಲ್ಯಾಣ ಕ್ರಾಂತಿಯ ನಂತರ ವಚನ ಸಾಹಿತ್ಯ ಭೂಗತವಾಗಿತ್ತು. ಆದರೆ ಫ. ಗು. ಹಳಕಟ್ಟೆಯವರ ಪರಿಶ್ರಮದಿಂದ ವಚನ ಸಾಹಿತ್ಯ ಮತ್ತೆ ನಮ್ಮ ಕೈ ಸೇರಿದೆ. ಅಂತಹ ಸಾಹಿತ್ಯವನ್ನು ಅಕ್ಕ ಅನ್ನಪೂರ್ಣ ತಾಯಿ ವಚನ ವಿಜಯೋತ್ಸವದ ಮೂಲಕ ನಾಡಿನಾದ್ಯಂತ ಪ್ರವಚನಗಳು ಮಾಡುತ್ತ. ವಚನ ಸಾಹಿತ್ಯ ಪ್ರಚಾರ ಪ್ರಸಾರಗೊಳಿಸಿದವರು. ಅಕ್ಕನವರ ಸಂಕಲ್ಪವನ್ನು ಇಂದು ಪ್ರಭುದೇವ ಮಹಾಸ್ವಾಮೀಜಿ ಮುಂದುವರಿಸುತ್ತಿದ್ದಾರೆ ಎಂದು ತಿಳಿಸಿದರು.

ಶರಣ ಸಾಹಿತಿ ರಮೇಶ ಮಠಪತಿ ಅವರು ವಚನ ವಿಜಯೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿ, ಶರಣರ ಇತಿಹಾಸ ನೆನೆದರೆ ಕಣ್ಣಿನಲ್ಲಿ ನೀರು ಬರದೆ ರಕ್ತ ಬರುತ್ತದೆ. ಕಲ್ಯಾಣ ಕ್ರಾಂತಿಯ ನಂತರ ಶರಣರು ವಚನ ಉಳಿಸಲು ಉಳುವಿಯ ದಟ್ಟ ಕಾಡಿಗೆ ಹೋದರು. ಮಳೆಗಾಲದ ಸಂದರ್ಭದಲ್ಲಿ ಜಿಗಣಿ ಹುಳುಗಳ ಕಾಟ ತಪ್ಪಿಸಿಕೊಳ್ಳಲು ಶರಣರು ಮರದ ಬೆಳಿಲನ್ನೆ ತೊಟ್ಟಿಲಿನಂತೆ ಕಟ್ಟಿ ಮರದ ಮೇಲೆ ಕುಳಿತು ಅನ್ನ ನೀರು ಇಲ್ಲದೆ ಎಷ್ಟೋ ರಾತ್ರಿಗಳು ಕಳೆದು ತಮ್ಮ ಪ್ರಾಣವನ್ನೇ ಕೊಟ್ಟು ವಚನ ಸಾಹಿತ್ಯ ನಮಗಾಗಿ ಉಳಿಸಿ ಕೊಟ್ಟಿದ್ದಾರೆ. ಎಂದು ನುಡಿದರು.




12ನೇ ಶತಮಾನದಲ್ಲಿ ಅಕ್ಕನಾಗಮ್ಮ ಉಳವಿಯಲ್ಲಿ ಮಹಾಮನೆಯನ್ನು ಕಟ್ಟಿ ವಚನ ಸಾಹಿತ್ಯ ಪ್ರಚಾರಗೊಳಿಸಿದವರು. ಅಕ್ಕನಾಗಮ್ಮನ ಕ್ರಾಂತಿಯಂತೆ ಅಕ್ಕ ಅನ್ನಪೂರ್ಣತಾಯಿಯವರು ವಚನಗಳು ನಮ್ಮ ಬದುಕಿಗೆ ಮಾರ್ಗದರ್ಶನ ಮಾಡುತ್ತವೆ ಅಂತಹ ವಚನಗಳಿಗೆ ಪರಮೋಚ್ಚ ಸ್ಥಾನ ನೀಡಿ ವಚನ ವಿಜಯೋತ್ಸವ ಆಚರಿಸಿ ಬೀದರ್ ಜಿಲ್ಲೆಯ ಕೀರ್ತಿಪತಾಕೆ ಬಾನೆತ್ತರಕ್ಕೆ ಹಾರಿಸಿದವರು ಅಕ್ಕನವರ ಮಾನಸ ಪುತ್ರರಾದ ಪ್ರಭುದೇವ ಮಹಾಸ್ವಾಮಿಜಿ ಹಳ್ಳಿ, ಹಳ್ಳಿಗಳಲ್ಲಿ ಪ್ರವಚನಗಳು ಮಾಡುತ್ತಾ, ವಚನ ವಿಜಯೋತ್ಸವ ಆಚರಿಸುವ ಕಾರ್ಯವನ್ನು ನೋಡಿದರೆ ಅಭಿಮಾನವೆನಿಸುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಕಾಶ ಮಠಪತಿ, ಅಣವೀರ ಕೋಡಂಬಲ್, ಸಿ.ಎಸ್ ಗಣಾಚಾರಿ, ಅಶೋಕ ಎಲಿ, ಆರ್.ಕೆ ಪಾಟೀಲ್, ಶಿವಕುಮಾರ್ ಪಾಟೀಲ, ಸಿದ್ದರಾಮಪ್ಪ ಕಪಲಾಪುರೆ, ಸಂಜು ಕುಮಾರ, ಸಿದ್ದರಾಮಪ್ಪ ಪಾಟೀಲ್, ಇದ್ದರು, ಮಾಣಿಕಪ್ಪ ಗೋರನಾಳೆ ಸ್ವಾಗತಿಸಿದರು. ಸಂಗಮೇಶ ಪಾಟೀಲ್ ನಿರೂಪಿಸಿದರು. ಸಂಗಮೇಶ್ ಭೂರೆ, ಲೋಕೇಶ್ ಭೂರೆ, ರವೀಂದ್ರ ಮೆಕ್ರೆ ಇನ್ನಿತರರು ಉಪಸ್ಥಿತರಿದ್ದರು.

# ಸಂಸ್ಕಾರಯುತ ಮಕ್ಕಳು ಸಮಾಜದ ಸಂಪತ್ತು

- ಮಲ್ಲಮ್ಮ ನುಡಿ ವಾರ್ತೆ
ತಾಳಿಕೋಟಿ:




ಇವತ್ತು ಶಿಕ್ಷಣ ಸಂಸ್ಥೆಗಳು ಮಕ್ಕಳಿಗೆ ಕೇವಲ ಗುಣಮಟ್ಟದ ಶಿಕ್ಷಣ ಕೊಟ್ಟರೆ ಸಾಲದು ಅವರಿಗೆ ಉತ್ತಮ ಸಂಸ್ಕಾರಗಳನ್ನೂ ಕೊಡುವ ಅಗತ್ಯವಿದೆ. ಬ್ರಿಲಿಯಂಟ್ ಸಂಸ್ಥೆ ಗುಣಮಟ್ಟದ ಶಿಕ್ಷಣದೊಂದಿಗೆ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಹಾಗೂ ಸಂಸ್ಕೃತಿಯನ್ನೂ ತಿಳಿಸಿಕೊಡುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಕೋಲಾರ–ಬೇಲೂರ ಪಟ್ಟದೇವರು ಹಿರೇಮಠದ ಪೂಜ್ಯಶ್ರೀ ಪ್ರಭುಕುಮಾರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು. ಶುಕ್ರವಾರ ಮೈಲೇಶ್ವರದ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆ ಆವರಣದಲ್ಲಿ ಹಮ್ಮಿಕೊಂಡ "ಬ್ರಿಲಿಯಂಟ್ ಕಲಾ ವೈಭವ" ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಮಕ್ಕಳು ಮೊಬೈಲ್ ದಾಸರಾಗದಂತೆ ನೋಡಿಕೊಳ್ಳಿ ಇದರಿಂದ ಹಲವಾರು ಸಮಸ್ಯೆಗಳು ಉದ್ಭವವಾಗುತ್ತಿವೆ, ಅವರ ಮೇಲೆ ನಿಗಾಹ ವಹಿಸಿ ಅವರ ಭೋಗದ ಜೀವನಕ್ಕೆ ಕಡಿವಾಣ ಹಾಕಿ ಎಂದ ಅವರು ಹೆತ್ತವರ ಪಾದಪೂಜೆ ಕಾರ್ಯಕ್ರಮ ಇಟ್ಟುಕೊಂಡಿರುವುದು ಸಂಸ್ಥೆಗೆ ಪರಂಪರೆ ಕುರಿತು ಇರುವ ಕಾಳಜಿಯನ್ನು ಎತ್ತಿ ತೋರಿಸುತ್ತದೆ.ಈ ಸಂಸ್ಥೆ ಭವಿಷ್ಯದಲ್ಲಿ ಇಡೀ ರಾಜ್ಯದಲ್ಲಿಯೇ ಒಂದು ಮಾದರಿ ಸಂಸ್ಥೆಯಾಗಿ ಬೆಳೆಯಲಿದೆ ಎಂದರು. ಸಮಾರಂಭ ಉದ್ಘಾಟಿಸಿ ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ ಅವರು ಮಾತನಾಡಿ ಶಿಕ್ಷಣದಿಂದಲೇ ಸಮಾಜದ ಸರ್ವಾಂಗೀಣ ಪ್ರಗತಿ ಸಾಧ್ಯ, ಮನುಷ್ಯನ ಸ್ವಾವಲಂಬಿ ಬದುಕಿಗೆ ಶಿಕ್ಷಣ ಅಗತ್ಯವಾಗಿದೆ, ಬ್ರಿಲಿಯಂಟ್ ಶಿಕ್ಷಣ ಸಂಸ್ಥೆ ಜಿಲ್ಲೆಯ ಮಾದರಿ ಸಂಸ್ಥೆಯಾಗಿದೆ ಇಲ್ಲಿಯ ಮಕ್ಕಳು ತಾಲೂಕಿನ ಕೀರ್ತಿಯನ್ನು ರಾಜ್ಯಮಟ್ಟದವರಿಗೆ ತೆಗೆದುಕೊಂಡು ಹೋಗಿದ್ದಾರೆ ನಾನು ಸಂಸ್ಥೆಯ ಅಧ್ಯಕ್ಷರಿಗೆ,ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗಕ್ಕೆ ಅಭಿನಂದಿಸುತ್ತೇನೆ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸ್ಥಳೀಯ ಸರ್ವಜ್ಞ ವಿದ್ಯಾ ಪೀಠದ ಅಧ್ಯಕ್ಷ ಸಿದ್ಧನಗೌಡ ಮಂಗಳೂರ ಮಾತನಾಡಿ ಈ ಕಾರ್ಯಕ್ರಮ ಶಿಕ್ಷಣ ಸಂಸ್ಥೆಗಳಿಗೆ ಒಂದು ಮಾದರಿಯಾಗಿದೆ.

ಇಲ್ಲಿಯ ಮಕ್ಕಳು ರಾಜ್ಯಮಟ್ಟದಲ್ಲಿ ಸಾಕಷ್ಟು ಹೆಸರನ್ನು ಮಾಡಿದ್ದಾರೆ, ಆದರೆ ಇವತ್ತು ಶಿಕ್ಷಣ ಸಂಸ್ಥೆಗಳನ್ನು ನಡೆಸುವುದು ಸುಲಭದ ಕೆಲಸವಲ್ಲ ಸಾಕಷ್ಟು ಸಮಸ್ಯೆಗಳು ಎದುರಿಸಬೇಕಾಗುತ್ತದೆ ಎಲ್ಲರ ಸಹಕಾರ ಇದ್ದಾಗ ಮಾತ್ರ ಶಿಕ್ಷಣ ಸಂಸ್ಥೆಗಳು ಬೆಳೆಯಲು ಸಾಧ್ಯ ಎಂದರು. ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ, ಸಿ ಆರ್ ಸಿ ರಾಜು ವಿಜಾಪುರ ಹಾಗೂ ನಿರ್ದೇಶಕ ಎಸ್.ಎಚ್. ಪಾಟೀಲ ಮಾತನಾಡಿದರು. ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ. ನಡುವಿನಮನಿ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ 2024–25 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳಾದ ಭೀಮನಗೌಡ ಸೂಗೂರು, ರಫೀಕ್ ಮೋರಟಗಿ, ಶ್ರವಣ ಕುಮಾರ ಪೂಜಾರಿ, ಅಶ್ವಿನಿ ಹಿರೇಮಠ ಹಾಗೂ ಸುಮಿತ್ ಸುಣದಳ್ಳಿ ಇವರನ್ನು ಸನ್ಮಾನಿಸಲಾಯಿತು. ಮು.ಗು. ಡಾ.ವಿನಾಯಕ್ ಪಟಗಾರ ವರದಿ ವಾಚಿಸಿದರು. ಶಿಕ್ಷಕ ಸಿದ್ದು ಕರಡಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕ ಎಸ್ ಎಸ್ ಹಿರೇಮಠ, ಸಿ ಆರ್ ಸಿ ರಾಜು ಮೂರಮಾನ, ಮು.ಗು.ಬಿ.ಜಿ.ಕರಕಳ್ಳಿ, ಎ.ಎಂ.ಕೋಳ್ಯಾಳ, ಆಡಳಿತ ಮಂಡಳಿ ಉಪಾಧ್ಯಕ್ಷ ಆರ್ ಬಿ ನಡುವಿನಮನಿ, ಕಾರ್ಯದರ್ಶಿ ಎಮ್ ಬಿ ಮಡಿವಾಳರ, ನಿರ್ದೇಶಕರಾದ ಎಸ್ ಎಚ್ ಪಾಟೀಲ, ಶಶಿಧರ್ ಎಂ ಬಿರಾದಾರ, ನಿರ್ದೇಶಕಿ ಎಂ ಬಿರಾದಾರ, ಎನ್.ಎಸ್.ಗಡಗಿ, ಮುಖ್ಯೋಪಾಧ್ಯಾಯರು, ಬೋಧಕ ಭೋದಿಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು. ವೇದಿಕೆ ಕಾರ್ಯಕ್ರಮದ ನಂತರ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಶಿಕ್ಷಣ ಸಂಸ್ಥೆಗಳನ್ನು ಕಟ್ಟಿ ಬೆಳೆಸುವುದು ಅತಿ ಕಷ್ಟದ ಕೆಲಸ ಇಂತಹದರಲ್ಲಿ ಬ್ರಿಲಿಯಂಟ್ ಶಿಕ್ಷಣ ಸಂಸ್ಥೆ ಇಡೀ ಜಿಲ್ಲೆಗೆ ಒಂದು ಮಾದರಿ ಸಂಸ್ಥೆಯಾಗಿ ಬೆಳೆದಿರುವುದು ಹೆಮ್ಮೆಪಡುವ ವಿಷಯ ಇದು ಇಲ್ಲಿಯ ಆಡಳಿತ ಮಂಡಳಿಯವರ ಪರಿಶ್ರಮ ಹಾಗೂ ಕಳಕಳಿಯನ್ನು ಎತ್ತಿ ತೋರಿಸುತ್ತದೆ.
ಪೂಜ್ಯ ಪ್ರಭುಕುಮಾರ ಶ್ರೀಗಳು ಕೋಲಾರ.

# ಮದ್ಯ ಮಾರಾಟ ನಿಷೇಧಿಸಿ ಡಿಸಿ ನಾಗೇಂದ್ರ ಪ್ರಸಾದ್ ಆದೇಶ

- ಮಲ್ಲಮ್ಮ ನುಡಿ ವಾರ್ತೆ
ಬಳ್ಳಾರಿ,:

ನಗರದಲ್ಲಿ ಜ.17 ರಂದು ಬೆಳಿಗ್ಗೆ 10.30 ಗಂಟೆಗೆ ಎಪಿಎಂಸಿ ಕೃಷಿ ಮಾರುಕಟ್ಟೆಯ ಆವರಣದಲ್ಲಿರುವ ಕವರ್ಡ್ ಆಕ್ಷನ್ ಪ್ಲಾಟ್‌ಫಾರಂ ನಲ್ಲಿ ಬಿ.ಜೆ.ಪಿ ಪಕ್ಷದ ವತಿಯಿಂದ ಹಮ್ಮಿಕೊಂಡಿರುವ ಪ್ರತಿಭಟನಾ ಸಭೆ ಹಿನ್ನಲೆಯಲ್ಲಿ ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜ.16 ರ ರಾತ್ರಿ 10 ಗಂಟೆಯಿಂದ ಜ.18 ರ ಬೆಳಿಗ್ಗೆ 06 ಗಂಟೆಯವರೆಗೆ ಮದ್ಯ ಮಾರಾಟ, ಮದ್ಯ ಸಾಗಾಣಿಕೆ ಮಾಡದಂತೆ, ಮದ್ಯದಂಗಡಿಗಳನ್ನು ಮತ್ತು ಬಾರ್ & ರೆಸ್ಟೋರೆಂಟ್‌ಗಳನ್ನು ತೆರೆಯದಂತೆ ಸಂಪೂರ್ಣವಾಗಿ ನಿಷೇಧಿಸಿ, ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21 ರನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿ ಜಿಲ್ಲಾ ದಂಡಾಧಿಕಾರಿಯಾದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಆದೇಶಿಸಿದ್ದಾರೆ. ಇತ್ತೀಚೆಗೆ ನಡೆದ ಗುಂಪು ಘರ್ಷಣೆ ಹಿನ್ನಲೆಯಲ್ಲಿ ಬಿಜೆಪಿ ವತಿಯಿಂದ ಜ.17 ರಂದು ಬೃಹತ್ ಪ್ರತಿಭಟನಾ ಸಭೆ ಆಯೋಜಿಸಿದ್ದು, ಈ ಪ್ರತಿಭಟನಾ ಸಭೆಯು ಶಾಂತ ರೀತಿಯಿಂದ ನಡೆಯುವ ಸಲುವಾಗಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಿಕೊಂಡಿದ್ದು, ಬಂದೋಬಸ್ತ್ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಮದ್ಯದಂಗಡಿ, ಬಾರ್, ರೆಸ್ಟೋರೆಂಟ್ ಮತ್ತು ಇತರೆ ಸ್ಥಳಗಳಲ್ಲಿ ಮದ್ಯ ಮಾರಾಟ ಹಾಗೂ ಸಾಗಾಣಿಕೆ ಮಾಡದಂತೆ ಮತ್ತು ಮದ್ಯದಂಗಡಿಗಳನ್ನು ಬಳ್ಳಾರಿ ನಗರದಾದ್ಯಂತ ಮುಚ್ಚುವಂತೆ ನಿಷೇಧಾಜ್ಞೆ ಹೊರಡಿಸುವಂತೆ ಪೊಲೀಸ್ ವರಿಷ್ಠಾಧಿಕಾರಿಯವರು ಕೋರಿರುತ್ತಾರೆ.ಈ ಹಿನ್ನೆಲೆಯಲ್ಲಿ ನಗರದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜ.16 ರ ರಾತ್ರಿ 10 ಗಂಟೆಯಿಂದ ಜ.18 ರ ಬೆಳಿಗ್ಗೆ 06 ಗಂಟೆಯವರೆಗೆ ಮದ್ಯದಂಗಡಿ, ಬಾರ್, ರೆಸ್ಟೋರೆಂಟ್ ಮತ್ತು ಇತರೆ ಸ್ಥಳಗಳಲ್ಲಿ ಮದ್ಯ ಮಾರಾಟ ಹಾಗೂ ಸಾಗಾಣಿಕೆ ಮಾಡದಂತೆ ಮತ್ತು ಮದ್ಯದಂಗಡಿಗಳನ್ನು ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

# ಅದ್ದೂರಿಯಾಗಿ ನಡೆದ ಬಸವೇಶ್ವರ ಸ್ವಾಮಿ ರಥೋತ್ಸವ, ಕಡಲೇಕಾಯಿ ಪರಿಷೆ

ಕೆಂಗೇರಿ:ಸೋಂಪುರ ಬಳಿಯ ವರಹಾಸಂದ್ರದಲ್ಲಿ ಇತಿಹಾಸ ಪ್ರಸಿದ್ಧ ಬಸವೇಶ್ವರ ಸ್ವಾಮಿಯ ರಥೋತ್ಸವ, ದೇವರ ಉತ್ಸವ, ಕಡಲೇಕಾಯಿ ಪರಿಷೆ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಸಡಗರ ಸಂಭ್ರಮದಿಂದ ಅದ್ದೂರಿಯಾಗಿ ನಡೆಯಿತು.

ರಥೋತ್ಸವ ಮತ್ತು ಜಾತ್ರಾಮಹೋತ್ಸವದಲ್ಲಿ ಪಾಲ್ಗೊಂಡಿದ್ದ ಸಹಸ್ರಾರು ಭಕ್ತರು ದೇವರ ದರ್ಶನ ಪಡೆದು ಕಣ್ತುಂಬಿಕೊಂಡರು. ಭಕ್ತಸಾಗರ ಹರಿದು ಬಂದಿತು. ಎಲ್ಲಿ ನೋಡಿದರೂ ಜನಜಂಗುಣಿ ಕಂಡು ಬಂದಿತು. ರಥೋತ್ಸವಕ್ಕೆ ಮರಳೆಗವಿಮಠದ ಮುಮ್ಮನಿರ್ವಾಣ ಶ್ರೀಗಳು, ಶ್ರೀ ಕೃಷ್ಣಯಾದವನಂದ ಸ್ವಾಮೀಜಿ, ಬೇಬಿಮಠದ ಶ್ರೀ ಮಹಂತಶಿವಯೋಗಿ ಸ್ವಾಮೀಜಿ ಪೂಜೆ ಸಲ್ಲಿಸುವ ಮೂಲಕ ಉಚಿತ ಕಡಲೇಕಾಯಿ,




ಕಬ್ಬು ವಿತರಣೆ ಮಾಡುವ ಮೂಲಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು. ಇದಕ್ಕೂ ಮುನ್ನ ಕಾರ್ಯಕ್ರಮದ ರೂವಾರಿ, ಬಿಜೆಪಿ ನಾಯಕ ಎಂ.ರುದ್ರೇಶ್ ದಂಪತಿಗಳು ವಿವಿಧ ಪೂಜೆಪುರಸ್ಕಾರ ನಡೆಸುವ ಮೂಲಕ ಎಲ್ಲ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಸಾಂಸ್ಕೃತಿಕ, ಧಾರ್ಮಿಕ ಕಾರ್ಯಕ್ರಮ ಮತ್ತು ಅರ್ಚಕ ದಂಪತಿಗಳಿಗೆ ಹಮ್ಮಿಕೊಂಡಿದ್ದ ಗೌರವ ಸಮರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಮಾತನಾಡಿ ಧರ್ಮ ಎಂದರೆ ಸಂಘರ್ಷವಲ್ಲ, ಅದೊಂದು ಬದುಕಿನ ದಾರಿ, ಸಮಾಜದಲ್ಲಿ ಶಾಂತಿ, ಸೌಹಾರ್ದತೆ, ಏಕತೆ ಮೂಡಿಸುವುದೇ ನಿಜವಾದ ಧರ್ಮ ಎಂದು ಪ್ರತಿಪಾದಿಸಿದರು.

ಶ್ರೀರಂಗಪಟ್ಟಣ ಬೇಬಿಮಠದ ಮಹಂತಶಿವಯೋಗಿ ಶ್ರೀಗಳು ಮಾತನಾಡಿ ಭಾವನಾತ್ಮಕವಾಗಿ ಎಲ್ಲರೂ ಒಗ್ಗೂಡಿ ನ್ಯಾಯ, ನಿಷ್ಠೆ, ಪ್ರಾಮಾಣಿಕ ದಾರಿಯಲ್ಲಿ ಸಾಗಬೇಕು ಆಗ ಸತ್ಯ, ಧರ್ಮ ಎಂದಿಗೂ ಸಾಯುವುದಿಲ್ಲ ಎಂದ ಅವರು ಪೂರ್ವಿಕರ ಕಾಲದಿಂದಲೂ ಗುಡಿ, ಗೋಪುರಗಳನ್ನು ಭೋವಿ ಜನಾಂಗದವರು ನಿಷ್ಠೆ, ಭಕ್ತಿ, ಶ್ರದ್ಧೆಯಿಂದ ನಿರ್ಮಾಣ ಮಾಡುತ್ತಾ ಧರ್ಮ ಉಳಿವಿಗಾಗಿ ಸಮಾಜ ಸೇವೆ ಮಾಡುತ್ತಿದ್ದರು. ಇಂದು ಹಳೆಯ ದೇವಾಲಯಗಳ ಜೀರ್ಣೋದ್ಧಾರಕ್ಕೆ ಎಂ.ರುದ್ರೇಶ್ ಕಂಕಣ ಬದ್ದರಾಗಿ ಧರ್ಮ ಉಳಿವಿಗಾಗಿ ಮುಂದಾಗಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಚಿತ್ರದುರ್ಗ ಯಾದವ ಮಹಾಸಂಸ್ಥಾನ ಮಠದ ಶ್ರೀ ಕೃಷ್ಣಯಾದವನಂದ ಸ್ವಾಮೀಜಿ ಮಾತನಾಡಿ ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ ಸಣ್ಣ ಸಮುದಾಯದ ಮಠಗಳು, ದೇವಸ್ಥಾನ ಹುಡುಕಿ ಅನುದಾನ ನೀಡುವ ಮೂಲಕ ಏಳಿಗೆ, ಅಭಿವೃದ್ಧಿಗೆ ಮುಂದಾಗಿ ಧರ್ಮ ಉಳಿಸಿದ್ದಾರೆ ಎಂದರು.

ವಿಶ್ವ ಒಕ್ಕಲಿಗ ಸಂಸ್ಥಾನ ಮಠದ ಶ್ರೀ ನಿಶ್ಚಲಾನಂದ ಸ್ವಾಮೀಜಿ ಮಾತನಾಡಿ ಬುದ್ಧಿಜೀವಿಗಳು, ಪ್ರಗತಿಪರರು ಎನ್ನುವ ಕೆಲವರು ಧರ್ಮದ ಬಗ್ಗೆ ಅಪಪ್ರಚಾರದಲ್ಲಿ ತೊಡಗಿದ್ದಾರೆ ಅವರು ಧರ್ಮದ ಪರವಾಗಿ ನಿಲ್ಲಬೇಕು, ಆಗ ಸನಾತನ ಧರ್ಮ ಉಳಿಯುತ್ತದೆ ಎಂದರು

ಮುಮ್ಮಡಿ ಶಿವರುದ್ರಸ್ವಾಮೀಜಿ, ಕೆಆರ್‌ಐಡಿಎಲ್ ಮಾಜಿ ಅಧ್ಯಕ್ಷ ಎಂ.ರುದ್ರೇಶ್, ಮಾಜಿ ವಿಧಾನ ಪರಿಷತ್ ಮಾಜಿ ಸದಸ್ಯ ಗೋಪಾಲಸ್ವಾಮಿ, ಮಾಜಿ ಶಾಸಕ ಎಂ.ಡಿ.ಲಕ್ಷ್ಮಿನಾರಾಯಣ, ಜಿ.ಪಂ.ಮಾಜಿ ಸದಸ್ಯ ಎ.ಶಿವಕುಮಾರ್ ಪಾಲಿಕೆ ಮಾಜಿ ಸದಸ್ಯರಾದ ರ.ಆಂಜನಪ್ಪ, ಮೈಲಸಂದ್ರ ಮುನಿರಾಜು, ಮುಖಂಡ ಪರಮಶಿವಯ್ಯ, ವಕೀಲರ ಸಂಘದ ಮಾಜಿ ಅಧ್ಯಕ್ಷ ಎ.ಪಿ.ರಂಗನಾಥ್, ರಾಜ್ಯ ಒಕ್ಕಲಿಗರ ಸಂಘದ ಮಾಜಿ ಅಧ್ಯಕ್ಷ ಡಿ.ಹನುಮಂತಯ್ಯ, ಎಸ್.ಆರ್.ಮೋಹರ್‌ಕುಮಾರ್, ವಿಜಯಸೇನೆ ರಾಜ್ಯ ಘಟಕದ ಅಧ್ಯಕ್ಷ ಎಚ್.ಎಸ್.ದೀಪಕ್, ವಾಜರಹಳ್ಳಿ ಶಶಿಕುಮಾರ್, ಆರ್.ಮುನಿಸ್ವಾಮಿ, ಚಿತ್ರ ನಟ ದುನಿಯವಿಜಯ್ ಸೇರಿದಂತೆ ಹಲವು ಮುಖಂಡರು ಇದ್ದರು.

# ತದಡಿ ವ್ಯಾಪ್ತಿಯ ಅನಧಿಕೃತ ಬೋಟ್ ಸ್ಥಗಿತಕ್ಕೆ ಆದೇಶ : ಇಲಾಖೆ ಮೌನ..?




- ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ:

ತದಡಿ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಟೂರಿಸ್ಟ್ ಬೋಟ್‌ಗಳನ್ನು ಸ್ಥಗಿತಗೊಳಿಸುವಂತೆ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಗೋಕರ್ಣ ಪೊಲೀಸ್ ನಿರೀಕ್ಷಕರಿಗೆ ಹಾಗೂ ಕರಾವಳಿ ಕಾವಲುಪಡೆ ನಿರೀಕ್ಷಕರಿಗೆ ಜ.5 ರಂದು ಆದೇಶ ಹೊರಡಿಸಿದ್ದಾರೆ. ಆದರೆ ಇದುವರೆಗೂ ಸ್ಥಗಿತಗೊಳ್ಳದಿರುವುದಕ್ಕೆ ಕಾರಣ ತಿಳಿದುಬಂದಿಲ್ಲ.

ತದಡಿಯಲ್ಲಿ ಒಟ್ಟು 6 ಬೋಟ್‌ಗಳಿಗೆ ಅನುಮತಿಯಿದೆ. ಆದರೆ ಉಳಿದ ಬೋಟ್‌ನವರು ಕಾಗದ ಪತ್ರವನ್ನು ನಿಯಮಾನುಸಾರ ಮಾಡಿಸಿಕೊಳ್ಳದಿರುವುದರಿಂದ ಅಂತಹ ಬೋಟ್‌ಗಳ ಸಂಚಾರವನ್ನು ಸ್ಥಗಿತಗೊಳಿಸಬೇಕು. ಇನ್ನು ಜಿಲ್ಲಾಧಿಕಾರಿಗಳು ಅನುಮೋದಿಸಿದಂತೆ 6 ಬೋಟ್‌ಗಳಿಗೆ ಮಾತ್ರ ಅನುಮತಿ ನೀಡಲಾಗಿದೆ. ಇನ್ನು ಸುಮಾರು 10 ರಿಂದ 15 ಬೋಟ್‌ನವರು ಅನಧಿಕೃತವಾಗಿ ನಡೆಸುತ್ತಿದ್ದಾರೆ. ಒಂದುವೇಳೆ ಯಾವುದೇ ಅವಘಡ ನಡೆದರೆ ದೊಡ್ಡ ಅನಾಹುತವಾಗುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ತಕ್ಷಣ ಕ್ರಮ ಕೈಗೊಳ್ಳುವಂತೆ ಪ್ರವಾಸೋದ್ಯಮ ಇಲಾಖೆ ಲಿಖಿತವಾಗಿ ಆದೇಶಿಸಿದೆ.

ಇಲಾಖೆ ಆದೇಶ ಮಾಡಿದರೂ ಅದು ಕಾರ್ಯರೂಪಕ್ಕೆ ಬಾರದಿದ್ದರೆ ಇಲ್ಲಿ ಪೊಲೀಸ್ ಮತ್ತು ಕರಾವಳಿ ಕಾವಲುಪಡೆ ಕಾರಣವಾಗಲಿದೆ. ಹೀಗಾಗಿ ಅನುಮತಿ ಇದ್ದವರಿಗೆ ಮಾತ್ರ ಬೋಟ್ ನಡೆಸಲು ಅವಕಾಶ ನೀಡಿ ಉಳಿದವನ್ನು ಸ್ಥಗಿತಗೊಳಿಸಬೇಕು. ಹಾಗೇ ಒಂದು ಬೋಟ್‌ನಲ್ಲಿ ನಿಗದಿತ ಪ್ರಯಾಣಿಕರ ಸಂಖ್ಯೆ ಇರುತ್ತದೆ. ಆದರೆ ಕೆಲವು ಬೋಟ್‌ನವರು ಕಾನೂನು ಮೀರಿ 20 ಆಸನವಿದ್ದರೆ 40 ಜನರನ್ನು ಕರೆದುಕೊಂಡು ಹೋಗುವುದು ಮಾಡುತ್ತಿದ್ದಾರೆ. ಒಂದುವೇಳೆ ಆ ಬೋಟ್‌ನಲ್ಲಿ ಸ್ವಲ್ಪ ಹೆಚ್ಚುಕಡಿಮೆಯಾದರೂ ಬೋಟ್ ಮಗುಚುವ ಸಾಧ್ಯತೆಯಿರುತ್ತದೆ. ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಾರ್ಯನಿರತವಾಗಬೇಕಿದೆ.

# ಮೂರು ದಿನಗಳ ಕಾಲ ಅದ್ದೂರಿ 'ಹಂಪಿ ಉತ್ಸವ' ಆಚರಣೆಗೆ ವೇದಿಕೆ ಸ್ಥಳ ಪರಿಶೀಲನೆ ನಡೆಸಿದ ಸಚಿವ ಜಮೀರ್ ಅಹ್ಮದ್ ಖಾನ್



- ಮಲ್ಲಮ್ಮ ನುಡಿ ವಾರ್ತೆ
ವಿಜಯನಗರ:

ವಿಶ್ವವಿಖ್ಯಾತ ಹಂಪಿ ಉತ್ಸವವನ್ನು ಈ ಬಾರಿ ಫೆಬ್ರವರಿ 13, 14 ಮತ್ತು 15 ರಂದು ಅತ್ಯಂತ ವೈಭವದಿಂದ ಆಚರಿಸಲು ನಿರ್ಧರಿಸಲಾಗಿದ್ದು ಮುಖ್ಯ ವೇದಿಕೆ ಸೇರಿದಂತೆ ಐದು ವೇದಿಕೆಗಳಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತರ ಇಲಾಖೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ತಿಳಿಸಿದರು.

ಅವರು ಗುರುವಾರ ಹಂಪಿಗೆ ಭೇಟಿ ನೀಡಿ ಹಂಪಿ ಉತ್ಸವ ನಡೆಯುವ ಮುಖ್ಯ ವೇದಿಕೆ ಸ್ಥಳ ಪರಿಶೀಲನೆ ನಡೆಸಿ ವಾಹನಗಳ ನಿಲುಗಡೆ ಸ್ಥಳ ಪರಿಶೀಲನೆ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು. ಉತ್ಸವದ ದಿನಾಂಕಗಳನ್ನು ಅಧಿಕಾರಿಗಳೊಂದಿಗೆ ಚರ್ಚಿಸಿದ ನಂತರ ದಿನಾಂಕಗಳನ್ನು ಅಂತಿಮಗೊಳಿಸಲಾಗಿದೆ. ಫೆಬ್ರವರಿ 13 ರಂದು ಮುಖ್ಯಮಂತ್ರಿಗಳು ಹಂಪಿ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ.

ಈ ಬಾರಿ ಕೇವಲ ಮುಖ್ಯ ವೇದಿಕೆಗೆ ಸೀಮಿತವಾಗದೆ, ಒಟ್ಟು ಐದು ವಿವಿಧ ವೇದಿಕೆಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಕಾರ್ಯಕ್ರಮಗಳ ಬಗ್ಗೆ ಜನರಿಗೆ ಮಾಹಿತಿ ನೀಡಲು ವ್ಯಾಪಕ ಪ್ರಚಾರ ಕೈಗೊಳ್ಳಲು ಸೂಚಿಸಲಾಗಿದೆ.

ಕಲಾವಿದರ ಆಯ್ಕೆ: ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕಲಾವಿದರನ್ನು ಆಹ್ವಾನಿಸುವ ಕುರಿತು ಪ್ರಸ್ತಾವನೆಗಳನ್ನು ಸಲ್ಲಿಲಾಗಿದ್ದು, ಶೀಘ್ರದಲ್ಲೇ ಅಂತಿಮ ಪಟ್ಟಿ ಬಿಡುಗಡೆಯಾಗಲಿದೆ. ಅಶ್ವಿನಿ ಪುನೀತ್ ರಾಜ್‌ಕುಮಾರ್, ಧ್ರುವಸರ್ಜ ಸೇರಿದಂತೆ ಹಲವು ಗಣ್ಯರನ್ನು ಆಹ್ವಾನಿಸುವ ಕುರಿತು ಚರ್ಚಿಸಲಾಗಿದೆ. ಸ್ಥಳೀಯ ಕಲಾವಿದರಿಗೆ ಆದ್ಯತೆ: ಕಳೆದ ಬಾರಿಯಂತೆ ಈ ಬಾರಿಯೂ ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗುವುದು.

ಹೊಸ ವಿನ್ಯಾಸ: ಕಳೆದ ಎರಡು ವರ್ಷಗಳಿಗಿಂತ ಈ ಬಾರಿ ವೇದಿಕೆಯ ವಿನ್ಯಾಸ ಮತ್ತು ಸ್ಮಾರಕಗಳ ಮಾದರಿಗಳು ವಿಭಿನ್ನವಾಗಿ ಮತ್ತು ಆಕರ್ಷಕವಾಗಿರಲಿವೆ.

ಸೌಕರ್ಯ ಮತ್ತು ಸುಧಾರಣೆಗಳು,

ಪಾರ್ಕಿಂಗ್ ವ್ಯವಸ್ಥೆ: ಕಳೆದ ವರ್ಷದಂತೆ ಈ ಬಾರಿ ರೈತರೊಂದಿಗೆ ಚರ್ಚಿಸಿ ಹೆಚ್ಚಿನ ಪಾರ್ಕಿಂಗ್ ಸ್ಥಳಾವಕಾಶಕ್ಕೆ ಒಪ್ಪಿಗೆ ಪಡೆಯಲಾಗುತ್ತದೆ. ರೈತರ ಬೆಳೆ ನಷ್ಟವಾದಲ್ಲಿ ಅದಕ್ಕೆ ಪರಿಹಾರವನ್ನು ನೀಡಿ ಉತ್ಸವಕ್ಕೆ ಪಾರ್ಕಿಂಗ್ ಗೆ ಬಳಕೆ ಮಾಡಿಕೊಂಡು ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಲಾಗುತ್ತದೆ ಎಂದರು.

ರಸ್ತೆ ದುರಸ್ತಿ: ಹಗರಿಬೊಮ್ಮನಹಳ್ಳಿಯಿಂದ ಶಿವಮೊಗ್ಗ ರಸ್ತೆ ಸೇರಿದಂತೆ ಉತ್ಸವಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹದಗೆಟ್ಟಿರುವ ಬಗ್ಗೆ ದೂರುಗಳು ಬಂದಿದ್ದು, ಅವುಗಳನ್ನು ಕೂಡಲೇ ದುರಸ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ನಾಡಹಬ್ಬವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡುತ್ತೇನೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ, ಜಿ.ಪಂ.ಸಿಇಓ ನೊಂಗ್ಜಾಯ್ ಮಹ್ಮದ್ ಅಕ್ರಂ ಅಲಿ ಷಾ, ಪೊಲೀಸ್ ಅಧೀಕ್ಷಕಿ ಎಸ್.ಜಹ್ನಾವಿ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಛಾಯಾಚಿತ್ರ ವಸ್ತು ಪ್ರದರ್ಶನಕ್ಕೆ ಗೌಸಿಯಾ ಬೇಗಂ ಅವರಿಂದ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡದವರಿಗಾಗಿ ರಾಜ್ಯಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತು ಆಯೋಜಿಸಲಾಗಿದ್ದ "ಛಾಯಾಚಿತ್ರ ವಸ್ತು ಪ್ರದರ್ಶನ" ಕಾರ್ಯಕ್ರಮಕ್ಕೆ ಸಿರುಗುಪ್ಪ ತಹಶೀಲ್ದಾರರಾದ ಗೌಸಿಯಾ ಬೇಗಂ ಅವರು ಚಾಲನೆ ನೀಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ನಿರ್ಮಿಸಲಾಗಿದ್ದ ಎಸ್.ಸಿ.ಎಸ್.ಪಿ, ಟಿ.ಎಸ್.ಪಿ ಯೋಜನೆಗಳು ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಅರಿವು ಮತ್ತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸಿರುಗುಪ್ಪ ಕೆ.ಕೆ.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಶುಕ್ರವಾರ ವಿಶೇಷ ಛಾಯಾಚಿತ್ರ ವಸ್ತು ಪ್ರದರ್ಶನಕ್ಕೆ ಗಣ್ಯರು ಚಾಲನೆ ನೀಡಿದರು.

ಈ ವೇಳೆ ಸಿರುಗುಪ್ಪ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಮಾರುತಿ ವರಪ್ರಸಾದ ರೆಡ್ಡಿ, ಸಿರುಗುಪ್ಪ ನಗರಸಭೆ ಪೌರಾಯುಕ್ತ ಗಂಗಾಧರ, ಕೆಕೆಆರ್‌ಟಿಸಿ ಸಿರುಗುಪ್ಪ ವಿಭಾಗದ ಕೆ.ಎ.ಶೇಕ್ಷಾವಲಿ ಸೇರಿದಂತೆ ಮುಖಂಡರು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

ಸಿರುಗುಪ್ಪ ಕೆಕೆಆರ್.ಟಿಸಿ ಬಸ್ ನಿಲ್ದಾಣದಲ್ಲಿ ಸರ್ಕಾರದ ವಿವಿಧ ಯೋಜನೆಗಳ ಕುರಿತು ಛಾಯಾಚಿತ್ರಗಳ ಸಮೇತ ಮಾಹಿತಿ ಇರುವ ಪ್ರದರ್ಶನ ಕಂಡು ಕಣ್ತುಂಬಿಕೊಳ್ಳಬಹುದಾಗಿದೆ.

ಕಾಂಗ್ರೆಸ್ ಮುಖಂಡ ಬಿ.ಎಂ.ಸತೀಶ್ ಅವರು ಮಾತನಾಡಿ, ರಾಜ್ಯ ಸರ್ಕಾರ ಸಾರ್ವಜನಿಕರ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ರೂಪಿಸಿದೆ. ಸರ್ಕಾರಿ ಯೋಜನೆಗಳ ಕುರಿತಾಗಿ ಸಾರ್ವಜನಿಕರಿಗೆ ವಸ್ತು ಪ್ರದರ್ಶನದ ಮೂಲಕ ಅರಿವು ಮೂಡಿಸುತ್ತಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಹಾಗೂ ಇತರೆ ಅಭಿವೃದ್ಧಿ ಯೋಜನೆಗಳಿಂದ ಸಾರ್ವಜನಿಕರಿಗೆ ಅನುಕೂಲವಾಗುತ್ತಿದೆ ಎಂದರು. ಜನರ ಗಮನಸೆಳೆದ ಛಾಯಾಚಿತ್ರಗಳು:

ಸಿರುಗುಪ್ಪ ಕೆ.ಕೆ.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿದ್ದ ವಿಶೇಷ ಛಾಯಾಚಿತ್ರ ವಸ್ತು ಪ್ರದರ್ಶನ ಸಾರ್ವಜನಿಕ ಗಮನ ಸೆಳೆಯಿತು.

ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಪ್ರತಿಮೆಯ ಎದುರು ಹಾಗೂ ವಿವಿಧ ಛಾಯಾಚಿತ್ರಗಳು ಮುಂದೆ ನಿಂತು ಸಾರ್ವಜನಿಕರು ಸೆಲ್ಫಿ ಕ್ಲಿಕ್ಕಿಸಿದರು. ಜ.16 ರಿಂದ 18 ರ ವರೆಗೆ ಸಿರುಗುಪ್ಪ ಪಟ್ಟಣದ ಕೇಂದ್ರ ಬಸ್ ನಿಲ್ದಾಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತ ಏರ್ಪಡಿಸಿರುವ ಛಾಯಾಚಿತ್ರ ವಸ್ತು ಪ್ರದರ್ಶನದಲ್ಲಿ ವಿವಿಧ ಯೋಜನೆಗಳ ಮಾಹಿತಿಯನ್ನು ಸಾರ್ವಜನಿಕರು ಸದುಪಯೋಗಪಡೆದುಕೊಳ್ಳಬಹುದಾಗಿದೆ.

# ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸದಾ ಸಿದ್ಧ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

**ಬಳ್ಳಾರಿ ನಗರದಲ್ಲಿ ರಾತ್ರಿ ಗಸ್ತು ಭದ್ರತಾ ವ್ಯವಸ್ಥೆ ಪರಿಶೀಲನೆ ನಡೆಸಿ ಐಜಿಪಿ ಡಾ.ಪಿ.ಎಸ್ ಹರ್ಷ ಹೇಳಿಕೆ**

ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಹಿತದೃಷ್ಟಿಯಿಂದ ಬಳ್ಳಾರಿ ವಲಯ ಪೊಲೀಸ್ ಉಪ ಮಹಾನಿರೀಕ್ಷಕ ಡಾ.ಪಿ.ಎಸ್ ಹರ್ಷ ಅವರು ಬುಧವಾರ ರಾತ್ರಿ ಗಸ್ತು ನಡೆಸಿ ಭದ್ರತಾ ವ್ಯವಸ್ಥೆ ಪರಿಶೀಲಿಸಿದರು. ಸೂಕ್ಷ್ಮ ಪ್ರದೇಶಗಳಲ್ಲಿ ಸಂಚರಿಸಿದ ಬಳಿಕ ಮಾತನಾಡಿದ ಅವರು, ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ. ಜಿಲ್ಲೆಯಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಎಲ್ಲ ರೀತಿಯ ಸಿದ್ದತೆ ಮಾಡಿಕೊಂಡಿದೆ. ಶಾಂತಿ ಭಂಗ ಉಂಟುಮಾಡುವವರ ವಿರುದ್ಧ ನಿಗಾ ವಹಿಸುವಂತೆ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸದಾ ಸಿದ್ಧವಾಗಿದೆ ಎಂದು ಹೇಳಿದರು.

ಜಿಲ್ಲೆಯ ಗಡಿಭಾಗಗಳಲ್ಲಿ ವಿಶೇಷ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದ್ದು, ಅಂತರ್ ರಾಜ್ಯ ಮತ್ತು ಅಂತರ್ ಜಿಲ್ಲೆಗಳಿಂದ ಆಗಮಿಸುವ ಅನುಮಾನಾಸ್ಪದ ವ್ಯಕ್ತಿಗಳು ಹಾಗೂ ವಾಹನಗಳ ಮೇಲೆ ನಿಗಾ ಇಡಲು ನಿರಂತರ ತಪಾಸಣಾ ಕಾರ್ಯ ಕೈಗೊಳ್ಳಲಾಗುತ್ತಿದೆ. ಅದೇರೀತಿಯಾಗಿ ನಗರದ ಲಾಡ್ಜ್‌ಗಳು ಹಾಗೂ ವಸತಿ ನಿಲಯಗಳಲ್ಲಿ ಸಂಪೂರ್ಣ ತಪಾಸಣೆ ನಡೆಸಲಾಗುತ್ತಿದೆ ಎಂದರು.

ಬಳ್ಳಾರಿ ವಲಯದ ರಾಯಚೂರು, ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಅಗತ್ಯ ಸಿಬ್ಬಂದಿಗಳನ್ನು ನೇಮಿಸಿಕೊಂಡು ನಿಗಾವಹಿಸಲಾಗಿದೆ. ವಿಶೇಷವಾಗಿ ಬಳ್ಳಾರಿ ನಗರದಲ್ಲಿ ವಲಯವಾರು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನೇಮಿಸಿದ್ದು,

ಪಾಳಿಯಂತೆ ಕರ್ತವ್ಯ ನಿರ್ವಹಿಸಲಿದ್ದು, ಯಾವುದೇ ಅಕ್ರಮ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆ ನೀಡಲಾಗಿದೆ. ಕಾನೂನು ನಿಯಮ ಉಲ್ಲಂಘಿಸುವವರ ಅಥವಾ ಸಮಾಜದ ಶಾಂತಿ ಕದಡುವವರ ವಿರುದ್ಧ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು. ಈ ವೇಳೆ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.

# ಗ್ರಾ. ಪಂ. ಪ್ರಶಸ್ತಿ: ಪ್ರಸ್ತಾವನೆಗಳಿಗೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಚೇರಿ ವತಿಯಿಂದ 2024– 25 ನೇ ಸಾಲಿನ ಬಾಲ್ಯವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯಿತಿಗಳಿಗೆ (ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯಿತಿ) ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದ್ದು, ಅರ್ಹ ಗ್ರಾಪಂ ಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಾಲ್ಯವಿವಾಹ ನಿಷೇಧಕ್ಕೆ ಸಂಬಂಧಿಸಿದಂತೆ ಶೂನ್ಯ ಸಹಿಷ್ಣುತೆ ಹೊಂದಿರುವ ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯಿತಿಗಳನ್ನು ಗುರುತಿಸಿ ಬಳ್ಳಾರಿ ಜಿಲ್ಲೆಯಲ್ಲಿ ಒಂದು ಗ್ರಾಮ ಪಂಚಾಯಿತಿಗೆ ರೂ.25,000 ಗಳಂತೆ ಪ್ರಶಸ್ತಿ ನೀಡಲು ಆದೇಶವಿದ್ದು, ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಪ್ರಸ್ತಾವನೆಗಳನ್ನು ಸಲ್ಲಿಸಲು ಜ.31 ರಂದು ಕೊನೆಯ ದಿನ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ನಗರದ ಕಂಟೋನ್ ಮೆಂಟ್ ಪ್ರದೇಶದ ಶಾಂತಿಧಾಮ ಆವರಣದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಚೇರಿ ಅಥವಾ ದೂ.08392–241373 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹವಾಮಾನ ಇಲಾಖೆ 151 ನೇ ವರ್ಷಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಕಾರವಾರ:

ಭಾರತೀಯ ಹವಾಮಾನ ಇಲಾಖೆಯ ಆರಂಭಗೊಂಡ 151ನೇ ವರ್ಷಾಚರಣೆಯ ಕಾರ್ಯಕ್ರಮವು ಕಾರವಾರದ ವಾರ್ತಾ ಭವನದಲ್ಲಿನ ಹವಾಮಾನ ಇಲಾಖೆಯ ಜಿಲ್ಲಾ ಕಚೇರಿಯಲ್ಲಿ ಗುರುವಾರ ನಡೆಯಿತು.

ಕಾರವಾರದ ಹವಾಮಾನ ಇಲಾಖೆ ಕಚೇರಿಯ ಅಧಿಕಾರಿ ಹೃಷಿಕೇಶ್ ತಿವಾರಿ ಮಾತನಾಡಿ, 1875ರಲ್ಲಿ ಸ್ಥಾಪನೆಯಾದ ಭಾರತೀಯ ಹವಾಮಾನ ಇಲಾಖೆ ಇಂದಿಗೆ 151ನೇ ವರ್ಷಾಚರಣೆ ಆಚರಿಸಲಾಗುತ್ತಿದ್ದು, ವಾತಾವರಣದಲ್ಲಿ ಪ್ರತಿದಿನ ಕಂಡುಬರುವ ಬದಲಾವಣೆಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿ, ಅದನ್ನು ವೈಜ್ಞಾನಿಕವಾಗಿ ಅಧ್ಯಯನ ಮಾಡಿ, ಕೈಗೊಳ್ಳಬೇಕಾದ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾಹಿತಿ ನೀಡಲಾಗುತ್ತಿದೆ.

ಸಮುದ್ರದಲ್ಲಿ ಸಂಭವಿಸುವ ಬದಲಾವಣೆಗಳ ಕುರಿತಂತೆ ಮೀನುಗಾರರಿಗೆ ಮುನ್ನೆಚ್ಚರಿಕೆ ಮುನ್ಸೂಚನೆಗಳನ್ನು ನೀಡುತ್ತಿದ್ದು, ವಿಶೇಷವಾಗಿ ಕಾರವಾರದಂತಹ ಕರಾವಳಿ ಪ್ರದೇಶದಲ್ಲಿ ಜೀವ ಮತ್ತು ಆಸ್ತಿ ರಕ್ಷಿಸುವಲ್ಲಿ ನಿಖರವಾದ ಹವಾಮಾನ ಮುನ್ಸೂಚನೆಗಳ ಬಗ್ಗೆ ಜನರಿಗೆ ಅರಿವು ಮೂಡಿಸಲಾಗುತ್ತಿದೆ. ಹಾಗೂ ಪ್ರತಿ 3 ಗಂಟೆಗೊಮ್ಮೆ ಹವಾಮಾನದ ವೀಕ್ಷಣೆ ಮಾಡಿ ಹವಮಾನದಲ್ಲಿ ಮುಂದೆ ಆಗಬಹುದಾದ ಬದಲಾವಣೆಗಳ ಕುರಿತು ಜನರಿಗೆ ಮಾಹಿತಿ ಒದಗಿಸಲಾಗುತ್ತಿದೆ ಎಂದರು.

ನಂತರದಲ್ಲಿ ಹವಾಮಾನ ವೀಕ್ಷಣಾಲಯಕ್ಕೆ ಭೇಟಿ ನೀಡಿ ತಾಪಮಾನ, ಮಳೆ, ಗಾಳಿ, ಮತ್ತು ವಾತಾವರಣದ ಒತ್ತಡ ಅಳೆಯಲು ಬಳಸುವ ಉಪಕರಣಗಳ ಕಾರ್ಯನಿರ್ವಹಣೆ ಮತ್ತು ಅದರ ಮಹತ್ವ ಬಗ್ಗೆ ಮಾಹಿತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ವಾರ್ತಾ ಇಲಾಖೆಯ ಸಿಬ್ಬಂದಿಗಳಾದ ರಾಜು ಭೋವಿ, ಮನೋಹರ ವಿ, ಹವಾಮಾನ ಇಲಾಖೆಯ ಸಿಬ್ಬಂದಿಗಳಾದ ಅರುಣ, ಗುರುದಾಸ, ನಿವೃತ್ತ ಸಿಬ್ಬಂದಿ ಸೋಮನಾಥ ಲಕ್ಷ್ಮೇಶ್ವರ್ ಮತ್ತಿತರರು ಇದ್ದರು.

# ಬಿಜೆಪಿ ಗೆಲುವು: ಕರ್ನಾಟಕ ಜಯಕ್ಕೆ ದಿಕ್ಸೂಚಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್:

ಮುಂಬೈ ಮಹಾನಗರ ಪಾಲಿಕೆ ಸೇರಿದಂತೆ ಮಹಾರಾಷ್ಟ್ರದ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಜಯ ಗಳಿಸಿರುವುದು ಕರ್ನಾಟಕದಲ್ಲಿ ಬರುವ ದಿನಗಳಲ್ಲಿ ನಡೆಯಲಿರುವ ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆ ಗೆಲುವಿಗೆ ದಿಕ್ಸೂಚಿಯಾಗಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ, ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ.

ಕಳೆದ ವರ್ಷ ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ–ಶಿವಸೇನಾ ಮೈತ್ರಿ ಭರ್ಜರಿ ಜಯ ಗಳಿಸಿತ್ತು.

ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ನೇತ್ರತ್ವದಲ್ಲಿ ಡಬಲ್ ಇಂಜಿನ್ ಸರ್ಕಾರ ಮಾಡುತ್ತಿರುವ ಜನಕಲ್ಯಾಣ ಕಾರ್ಯಕ್ರಮಕ್ಕೆ ಮತದಾರರು ಮನ್ನಣೆ ನೀಡಿ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಭಾರಿ ಗೆಲುವು ಕೊಟ್ಟಿದ್ದಾರೆ. ಬಿಜೆಪಿ ಮೇಲೆ ಜನರು ಇಟ್ಟಿರುವ ವಿಶ್ವಾಸಕ್ಕೆ ಈ ಫಲಿತಾಂಶ ಸಾಕ್ಷಿಯಾಗಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತದ ಎಲ್ಲ ರಂಗಗಳಲ್ಲಿ ವಿಫಲವಾಗಿದೆ. ಬರುವ ಏಪ್ರಿಲ್, ಮೇ ತಿಂಗಳಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇರಿದಂತೆ ರಾಜ್ಯದ ಸ್ಥಳೀಯ ಸಂಸ್ಥೆ ಹಾಗೂ ಜಿಪಂ,

ತಾಪಂಗಳಿಗೆ ಚುನಾವಣೆ ನಡೆಯುವ ಸಾಧ್ಯತೆಗಳಿವೆ. ಮಹಾರಾಷ್ಟ್ರ ಮಾದರಿಯಲ್ಲಿಯೇ ಇಲ್ಲಿ ಸಹ ಬಿಜೆಪಿ ಭರ್ಜರಿ ಜಯ ಗಳಿಸಿ ಕಾಂಗ್ರೆಸ್ ಗೆ ಮಣ್ಣು ಮುಕ್ಕಿಸುವುದು ಗ್ಯಾರಂಟಿ ಎಂದು ಹೇಳಿದ್ದಾರೆ.

# ಜ.17 ರಂದು ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿ ನಗರದ ಜೆಸ್ಕಾಂ ಉಪ ವಿಭಾಗದ ವಿದ್ಯುತ್ ಗ್ರಾಹಕರ ಕೊಂದುಕೊರತೆಗಳ ಸಭೆಯನ್ನು ಜ.17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಉಪ ವಿಭಾಗದ ಕಚೇರಿಯಲ್ಲಿ ಏರ್ಪಡಿಸಲಾಗಿದೆ.

ಕುಂದು ಕೊರತೆಗಳಿರುವ ವಿದ್ಯುತ್ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ತಮ್ಮ ದೂರುಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಸ್ತಾವನೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಚೇರಿ ವತಿಯಿಂದ 2024– 25 ನೇ ಸಾಲಿನ ಬಾಲ್ಯವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯಿತಿಗಳಿಗೆ (ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯಿತಿ) ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದ್ದು, ಅರ್ಹ ಗ್ರಾಪಂ ಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಾಲ್ಯವಿವಾಹ ನಿಷೇಧಕ್ಕೆ ಸಂಬಂಧಿಸಿದಂತೆ ಶೂನ್ಯ ಸಹಿಷ್ಣುತೆ ಹೊಂದಿರುವ ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯಿತಿಗಳನ್ನು ಗುರುತಿಸಿ ಬಳ್ಳಾರಿ ಜಿಲ್ಲೆಯಲ್ಲಿ ಒಂದು ಗ್ರಾಮ ಪಂಚಾಯಿತಿಗೆ ರೂ.25,000 ಗಳಂತೆ ಪ್ರಶಸ್ತಿ ನೀಡಲು ಆದೇಶವಿದ್ದು, ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

# ಜ.17 ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿ ಗ್ರಾಮೀಣ ಜೆಸ್ಕಾಂ ಉಪ–ವಿಭಾಗ ವ್ಯಾಪ್ತಿಯ ಎಲ್ಲಾ ವಿದ್ಯುತ್ ಗ್ರಾಹಕರ ಸಮಸ್ಯೆಗಳನ್ನು ಆಲಿಸಿ ಇತ್ಯರ್ಥಗೊಳಿಸಲು ಜ.17 ರಂದು ಬೆಳಿಗ್ಗೆ 11 ಗಂಟೆಗೆ ಬಳ್ಳಾರಿ ಜೆಸ್ಕಾಂ ಗ್ರಾಮೀಣ ಉಪ–ವಿಭಾಗ ಕಚೇರಿಯಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದ್ದು, ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂ ನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಮೋಹನಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೆಡ್ಡಿ, ಎಂಎಲ್‌ಸಿ ರವಿ ಕುಮಾರ್ ಜಂಟಿ ಸುದ್ದಿಗೋಷ್ಠಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:



ಇತ್ತೀಚೆಗೆ ನಗರದಲ್ಲಿ ಮಹರ್ಷಿ ವಾಲ್ಮೀಕಿ ಪುತ್ತಳಿ ಅನಾವರಣ ವಿಷಯವಾಗಿ ನಡೆದ ಬ್ಯಾನರ್ ಗಲಾಟೆ ಪ್ರಕರಣ ಹಾಗೂ ಜನವರಿ 17ರಂದು ನಡೆಯಲಿರುವ ಬಿಜೆಪಿ ಬೃಹತ್ ಪ್ರತಿಭಟನೆ ಮತ್ತು ಸಮಾವೇಶ ಕುರಿತು ಮಾಜಿ ಸಚಿವ ಜನಾರ್ಧನ್ ರೆಡ್ಡಿ ಹಾಗೂ ವಿಧಾನ ಪರಿಷತ್ ಸದಸ್ಯ (ಎಂಎಲ್‌ಸಿ) ರವಿ ಕುಮಾರ್ ಅವರು ಜಂಟಿಯಾಗಿ ಸುದ್ದಿಗೋಷ್ಠಿ ನಡೆಸಿ ಮಾಹಿತಿಯನ್ನು ಹಂಚಿಕೊಂಡರು.

ಪತಿಕಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ,, ಎಂಎಲ್‌ಸಿ ರವಿ ಕುಮಾರ್, "ಜನವರಿ 1ರಂದು ಮಾಜಿ ಸಚಿವ ಜನಾರ್ಧನ್ ರೆಡ್ಡಿ ಅವರ ಮನೆ ಮೇಲೆ ದಾಳಿ ನಡೆದಿದೆ. ವಾಲ್ಮೀಕಿ ಪುತ್ಥಳಿ ಅನಾವರಣ ಕಾರ್ಯಕ್ರಮವನ್ನು ಅದ್ದೂರಿಯಾಗಿ ನಡೆಸಬೇಕಿತ್ತು. ಆದರೆ ಬ್ಯಾನರ್ ಗಲಾಟೆ ಎಂಬ ನೆಪದಲ್ಲಿ ಉದ್ದೇಶಪೂರ್ವಕವಾಗಿ ಗಲಾಟೆ ಮಾಡಲಾಗಿದೆ" ಎಂದು ಆರೋಪಿಸಿದರು.

"ಶಾಸಕ ಭರತ್ ರೆಡ್ಡಿ ಅವರು ದುರುದ್ದೇಶದಿಂದಲೇ ಗಲಾಟೆ ನಡೆಸಿದ್ದಾರೆ. ಜನಾರ್ಧನ್ ರೆಡ್ಡಿ ಅವರ ಮನೆ ಮೇಲೆ ಫೈರಿಂಗ್ ಮಾಡಲಾಗಿದೆ. ಮಾರಕಾಸ್ತ್ರಗಳನ್ನು ಹಿಡಿದು ದಾಳಿ ನಡೆದಿದೆ. ಗನ್ ಮ್ಯಾನ್‌ಗಳ ಅನುಮತಿ ಇಲ್ಲದೇ ಯಾರೂ ಫೈರಿಂಗ್ ಮಾಡುವುದಿಲ್ಲ. ಮುಂಚಿತವಾಗಿ ಸೂಚನೆ ನೀಡಿಯೇ ಫೈರಿಂಗ್ ಮಾಡಿಸಲಾಗಿದೆ" ಎಂದು ಗಂಭೀರ ಆರೋಪ ಮಾಡಿದರು.

"ಬ್ಯಾನರ್ ಗಲಾಟೆ ಎಂಬುದು ಕೇವಲ ನೆಪ ಮಾತ್ರ. ಜನಾರ್ಧನ್ ರೆಡ್ಡಿ ಅವರನ್ನು ಅಪಮಾನ ಮಾಡುವ ಉದ್ದೇಶದಿಂದಲೇ ಬ್ಯಾನರ್ ಅನ್ನು ಅವರ ಮನೆ ಕಡೆ ಮುಖಮಾಡಿ ಕಟ್ಟಲಾಗಿದೆ. ಶ್ರೀರಾಮುಲು ಹಾಗೂ ಜನಾರ್ಧನ್ ರೆಡ್ಡಿಯನ್ನು ಟಾರ್ಗೆಟ್ ಮಾಡಿಕೊಂಡು ಗಲಾಟೆ ನಡೆಸಲಾಗಿದೆ" ಎಂದು ಹೇಳಿದರು. "ಪ್ರಜಾಪ್ರಭುತ್ವದ ಬಗ್ಗೆ ಮಾತನಾಡುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಲ್ಲಿ ಗಲಾಟೆ ನಡೆಯುವಾಗ ಸಂವಿಧಾನ ಎಲ್ಲಿಗೆ ಹೋಯಿತು? ಭರತ್ ರೆಡ್ಡಿ ಅವರು ಓಪನ್ ಆಗಿ 'ಜನಾರ್ಧನ್ ರೆಡ್ಡಿ ಮನೆ ಸುಟ್ಟು ಹಾಕ್ತೀನಿ, ಬಳ್ಳಾರಿ ಸುಟ್ಟು ಹಾಕ್ತೀನಿ' ಎಂದು ಹೇಳಿಕೆ ನೀಡಿದ್ದಾರೆ. ಇದೇ ಮಾತನ್ನು ಬಿಜೆಪಿ ಶಾಸಕ ಹೇಳಿದ್ದರೆ ಕೂಡಲೇ ಎಫ್‌ಐಆರ್ ಮಾಡಿ ಬಂಧಿಸುತ್ತಿದ್ದರು" ಎಂದು ರವಿ ಕುಮಾರ್ ಆಕ್ರೋಶ ವ್ಯಕ್ತಪಡಿಸಿದರು. "ಸೋಷಿಯಲ್ ಮೀಡಿಯಾದಲ್ಲಿ ಕೆಟ್ಟ ಪದ ಬಳಕೆ ಮಾಡಿದ ಬಿಜೆಪಿ ಕಾರ್ಯಕರ್ತರನ್ನು ತಕ್ಷಣ ಬಂಧಿಸಲಾಗಿದೆ. ಆದರೆ ಕಾಂಗ್ರೆಸ್ ಶಾಸಕ ಇಷ್ಟೆಲ್ಲ ಮಾತನಾಡಿದರೂ ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ" ಎಂದು ಆರೋಪಿಸಿದರು.

ಜನವರಿ 17ರಂದು ಬಳ್ಳಾರಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ ಅವರು, "ವಿಜಯೇಂದ್ರ, ಅಶೋಕ್, ಚಲುವಾದಿ ನಾರಾಯಣಸ್ವಾಮಿ, ಬಸವರಾಜ್ ಬೊಮ್ಮಾಯಿ ಸೇರಿದಂತೆ ಅನೇಕ ನಾಯಕರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಶಾಸಕ ಭರತ್ ರೆಡ್ಡಿ ಅವರನ್ನು ಬಂಧಿಸಬೇಕು ಎಂಬುದು ನಮ್ಮ ಪ್ರಮುಖ ಬೇಡಿಕೆ" ಎಂದರು.

"ಡಿಕೆ ಶಿವಕುಮಾರ್ ಹಾಗೂ ಜಮೀರ್ ಅಹಮದ್ ಖಾನ್ ಅವರು ನಮ್ಮ ಕಡೆಯಿಂದ ತಪ್ಪಾಗಿದೆ ಎಂದು ಹೇಳಿದರೂ ಭರತ್ ರೆಡ್ಡಿ ಬಂಧನವಾಗಿಲ್ಲ. ಪಾದಯಾತ್ರೆ ಕುರಿತು ಇನ್ನೂ ಅಂತಿಮ ನಿರ್ಧಾರವಾಗಿಲ್ಲ. ಸಮಾವೇಶದ ಬಳಿಕ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು" ಎಂದು ಹೇಳಿದರು.

ಈ ವೇಳೆ ಮಾತನಾಡಿದ ಮಾಜಿ ಸಚಿವ ಜನಾರ್ಧನ್ ರೆಡ್ಡಿ, "ಜನವರಿ 17ರಂದು ಬಳ್ಳಾರಿ ಎಪಿಎಂಸಿ ಮಾರ್ಕೆಟ್ ಪ್ರದೇಶದಲ್ಲಿ ಬಿಜೆಪಿ ಸಮಾವೇಶ ನಡೆಯಲಿದೆ. ನಿನ್ನೆ ಜಿಲ್ಲಾಡಳಿತದ ಸಮ್ಮುಖದಲ್ಲಿ ಸ್ಥಳ ನಿಗದಿಪಡಿಸಲಾಗಿದೆ. ಮುನ್ಸಿಪಲ್ ಮೈದಾನದಲ್ಲಿ ಪಿಯುಸಿ ಪರೀಕ್ಷೆಗಳಿರುವ ಹಿನ್ನೆಲೆಯಲ್ಲಿ ಸ್ಥಳ ಬದಲಾವಣೆ ಮಾಡಲಾಗಿದೆ" ಎಂದು ತಿಳಿಸಿದರು.

"ಐವತ್ತು ಸಾವಿರಕ್ಕೂ ಹೆಚ್ಚು ಜನರು ಬರುವ ನಿರೀಕ್ಷೆಯಿದೆ. ಎಪಿಎಂಸಿಯಲ್ಲಿ ಮೂವತ್ತು ಸಾವಿರ ಜನರಿಗೆ ಮಾತ್ರ ಆಸನ ವ್ಯವಸ್ಥೆ ಇರುವುದರಿಂದ ಅಷ್ಟೇ ಸಂಖ್ಯೆಯಲ್ಲಿ ಜನರನ್ನು ಸೇರಿಸಲಾಗುವುದು. ರಾಷ್ಟ್ರೀಯ ನಾಯಕರ ಸಲಹೆಯಂತೆ ಹಂತ ಹಂತವಾಗಿ ಹೋರಾಟ ನಡೆಸಲಾಗುವುದು" ಎಂದರು.

# ಪ್ರತಾಪ್ ರೆಡ್ಡಿಯ ರೌಡಿಸಂಗೆ ಕಡಿವಾಣ ಹಾಕಬೇಕು : ಕರಿಯಪ್ಪ ಗುಡಿಮಣಿ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ಮುಖಂಡ ಕರಿಯಪ್ಪ ಗುಡಿಮಣಿ ಅವರು ಮಾತನಾಡಿದರು.

ಬಳ್ಳಾರಿ ನಗರಕ್ಕೆ ಹೊಂದಿಕೊಂಡಿರುವ ಹಾಲದಹಳ ಭೂಮಿಯ ಕೌಲ್‌ಬಜಾರ್ ವ್ಯಾಪ್ತಿಯ ದಾನಪ್ಪ ಬೀದಿ ಹಾಗೂ ಬಂಡಿಹಟ್ಟಿ ಪ್ರದೇಶಗಳಲ್ಲಿ ವಾಸವಿರುವ ಬಡ ಜನರಿಗೆ, 1970ರ ದಶಕದಲ್ಲಿ ಸರ್ವೆ ನಂ.715ಎ ವ್ಯಾಪ್ತಿಯ 1080 ಎಕರೆ ಇನಾಂ ಭೂಮಿಯಲ್ಲಿ 134 ಎಕರೆ ಭೂಮಿಯನ್ನು 17 ಕುಟುಂಬಗಳಿಗೆ ಆಗಿನ ಭೂ ನ್ಯಾಯ ಮಂಡಳಿ ಹಂಚಿಕೆ ಮಾಡಿತ್ತು. ಈ ಭೂಮಿ ಮೊದಲು ದಿವಂಗತ ರಾಜರಾಜೇಶ್ವರಿಶಾಸ್ತ್ರಿ ಹಾಗೂ ಅವರ ಪುತ್ರ ಬ್ರಹ್ಮಶಾಸ್ತ್ರಿಗೆ ಸೇರಿದ ಇನಾಂ ಭೂಮಿಯಾಗಿತ್ತು.

ಸರ್ಕಾರದ ಇನಾಂ ಭೂಮಿ ರದ್ದತಿ ಕಾಯ್ದೆ ಜಾರಿಯಾದ ನಂತರ, ಇದೇ ಭೂಮಿಯಲ್ಲಿ ಜೀತ ಮತ್ತು ಕೂಲಿ ಕೆಲಸ ಮಾಡಿ ಜೀವನ ಸಾಗಿಸುತ್ತಿದ್ದ ದಲಿತರು ಹಾಗೂ ಹಿಂದುಳಿದ ವರ್ಗದ ಜನರಿಗೆ ಭೂಮಿ ಮಂಜೂರಾಗಿತ್ತು. ಇದರಲ್ಲಿ 7 ಎಸ್.ಸಿ ಸಮುದಾಯದ ಕುಟುಂಬಗಳು, 4 ಕುರುಬ ಸಮುದಾಯದವರು, 5 ಮಡಿವಾಳ ಸಮುದಾಯದವರು ಹಾಗೂ 3 ಈಡಿಗ ಸಮುದಾಯದ ಕುಟುಂಬಗಳು ಸೇರಿದ್ದು, ಭೂ ನ್ಯಾಯ ಮಂಡಳಿಯಿಂದ ಫಾರಂ ನಂ.10 ನೀಡಲಾಗಿತ್ತು ಮತ್ತು ಹಕ್ಕುಗಳು ಫಲಾನುಭವಿಗಳ ಹೆಸರಿ ಗೆ ವರ್ಗಾವಣೆಗೊಂಡಿದ್ದವು. ಕಳೆದ ಹಲವು ದಶಕಗಳಿಂದ ಈ ಕುಟುಂಬಗಳು ಭೂಮಿಯನ್ನು ಕೃಷಿ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು.

ಆದರೆ 2003ರಿಂದ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎನ್.ಪ್ರತಾಪ್ ರೆಡ್ಡಿಯವರು ಈ ಭೂಮಿಯ ಮೇಲೆ ಕಣ್ಣಿಟ್ಟ ಬಳಿಕ, ಗೂಂಡಾಗಿರಿ, ಬೆದರಿಕೆ ಹಾಗೂ ದೌರ್ಜನ್ಯಗಳ ಮೂಲಕ ಬಡವರ ಬದುಕು ಅಸ್ತವ್ಯಸ್ತವಾಗುತ್ತಿದೆ. ಭೂ ಒಡೆಯರಾಗಿರುವ ಎಸ್.ಸಿ ಸಮುದಾಯದ ಹಲವರು ಬಳ್ಳಾರಿ ಮಹಾನಗರ ಪಾಲಿಕೆಯಲ್ಲಿ ಪೌರಕಾರ್ಮಿಕರಾಗಿ ಕೆಲಸ ಮಾಡಲು ಬಾಧ್ಯರಾಗಿದ್ದಾರೆ. ಕೆಲ ಮಡಿವಾಳ ಕುಟುಂಬಗಳು ಭಯದಿಂದ ಊರು ತೊರೆದಿದ್ದು, ಇನ್ನೂ ಕೆಲವರು ಜೀವ ಉಳಿಸಿಕೊಳ್ಳಲು ಭೂಮಿಯನ್ನೇ ತ್ಯಜಿಸುವ ಪರಿಸ್ಥಿತಿಗೆ ತಲುಪಿದ್ದಾರೆ.

ಈ ಅನ್ಯಾಯದ ವಿರುದ್ಧ ಕರ್ನಾಟಕ ಜನಶಕ್ತಿ ಹಾಗೂ ಕರ್ನಾಟಕ ಮಾದಿಗರ ರಕ್ಷಣಾ ವೇದಿಕೆಯ ನೇತೃತ್ವದಲ್ಲಿ ನಾವು ಹಲವು ಬಾರಿ ಹೋರಾಟ ನಡೆಸಿದ್ದೇವೆ ಎಂದು ಕರಿಯಪ್ಪ ಗುಡಿಮಣಿ ತಿಳಿಸಿದರು.

2015ರಲ್ಲಿ ಎನ್.ಪ್ರತಾಪ್ ರೆಡ್ಡಿಯವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬ್ರಿಟ್ ಪಿಟಿಷನ್ ಸಲ್ಲಿಸಿ, ಮೃತರ ವಿರುದ್ಧ ಇಂಟರಿಮ್ ಎಕ್ಸ್ ಪಾರ್ಟಿ ಆದೇಶ ಪಡೆದು, 10 ಜೆಸಿಬಿ ಯಂತ್ರಗಳ ಮೂಲಕ ಬೇಲಿಗಳು, ಮರಗಳು, ಬೋರ್‌ವೆಲ್ ಹಾಗೂ ಬಾವಿಗಳನ್ನು ನಾಶಪಡಿಸಿದ್ದಾರೆ. ಇದಕ್ಕೆ ಪ್ರತಿಯಾಗಿ ರೈತರು ಮತ್ತೊಂದು ಬ್ರಿಟ್ ಪಿಟಿಷನ್ ಸಲ್ಲಿಸಿ ಆದೇಶ ರದ್ದುಗೊಳಿಸಿ, ನಂತರ ಬ್ರಿಟ್ ಅಪೀಲ್ ಹಾಕಿದ್ದಾರೆ. ದ್ವಿ–ಸದಸ್ಯ ಪೀಠವು, ವಿವಾದವನ್ನು ಬಳ್ಳಾರಿಯ ಘನ ಸಿವಿಲ್ ನ್ಯಾಯಾಲಯದಲ್ಲಿ ಕೋರ್ಟ್ ಕಮೀಷನ್ ಮೂಲಕ ಸರ್ವೆ ನಡೆಸಿ ಪರಿಹರಿಸಿಕೊಳ್ಳುವಂತೆ ಆದೇಶ ನೀಡಿತ್ತು. ಈ ಆದೇಶದ ವಿರುದ್ಧ ಎನ್.ಪ್ರತಾಪ್ ರೆಡ್ಡಿ ಸಲ್ಲಿಸಿದ್ದ ರಿವ್ಯೂ ಪಿಟಿಷನ್ ವಜಾಗೊಂಡಿದೆ.

ಬಳ್ಳಾರಿ ಘನ ಸಿವಿಲ್ ನ್ಯಾಯಾಲಯವು ಓ.ಎಸ್. ನಂ.172/2013 ರಿಂದ 177/2013 ರವರೆಗೆ ಐದು ಪ್ರಕರಣಗಳಲ್ಲಿ ಕೋರ್ಟ್ ಕಮೀಷನ್ ಮೂಲಕ ಸರ್ವೆಗೆ ಆದೇಶ ನೀಡಿದೆ. ಆದರೆ ಕೆಲವು ಪ್ರಕರಣಗಳಲ್ಲಿ ಸ್ಟೇ ಇದ್ದರೂ ಸಹ, ಕೋರ್ಟ್ ಆದೇಶವಿಲ್ಲದೆ ತಾಲೂಕು ಸರ್ವೆಯರ್ ಹನುಮಂತಪ್ಪ ಅವರು ಎನ್.ಪ್ರತಾಪ್ ರೆಡ್ಡಿಯ ಪ್ರಭಾವಕ್ಕೆ ಒಳಗಾಗಿ ಜೆಸಿಬಿ, ಲಾರಿ ಹಾಗೂ ಟ್ರ್ಯಾಕ್ಟರ್‌ಗಳೊಂದಿಗೆ ದೌರ್ಜನ್ಯ ನಡೆಸಿ ರೈತರ ಭೂಮಿಗಳ ಗಡಿ ಗುರುತುಗಳನ್ನು ನಾಶಪಡಿಸಿದ್ದಾರೆ ಎಂದು ಆರೋಪಿಸಿದರು.

ಈ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಎನ್.ಪ್ರತಾಪ್ ರೆಡ್ಡಿ ಹಾಗೂ ಅವರ ಸಹಚರರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕೆಂದು ಕರ್ನಾಟಕ ಸರ್ಕಾರ ಮತ್ತು ಪೊಲೀಸ್ ಇಲಾಖೆಯನ್ನು ಅವರು ಆಗ್ರಹಿಸಿದರು. ಸಂಬಂಧಿತ ಫೋಟೋಗಳು ಹಾಗೂ ದಾಖಲೆಗಳನ್ನು ಈ ಕುರಿತು ಲಗತ್ತಿಸಲಾಗಿದೆ ಎಂದು ತಿಳಿಸಿದರು. ಉಳುವವನೇ ಭೂ ಒಡೆಯ ಎಂಬ ಕಾನೂನಿನಡಿ, ಬಂಡಿಹಟ್ಟಿ ದಾನಪ್ಪ ಬೀದಿ ಪ್ರದೇಶದ ಮಾದಿಗ, ಅಗಸ, ಕುರುಬ ಹಾಗೂ ಈಡಿಗ ಸಮುದಾಯದ ರೈತರಿಗೆ ಸರ್ವೆ ನಂ.715ರಲ್ಲಿ ಭೂಮಿ ಮಂಜೂರಾಗಿದ್ದು, ಅದರ ಎಲ್ಲಾ ಮೂಲ ದಾಖಲೆಗಳು ಇಂದಿಗೂ ಬಡವರ ಪರವಾಗಿಯೇ ಇವೆ. ಭೂಮಿ ಮಂಜೂರಾಗಿ 65 ವರ್ಷಗಳಾದ ಬಳಿಕ, "ಭೂಮಿ ನಮ್ಮದು, ನಾವು ಖರೀದಿಸಿದ್ದೇವೆ" ಎಂದು ಹೇಳುತ್ತಾ ಎನ್.ಪ್ರತಾಪ್ ರೆಡ್ಡಿಯವರು 2005ರಿಂದ ನಿರಂತರ ಕಿರುಕುಳ ಮತ್ತು ದೌರ್ಜನ್ಯ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಈ ದೌರ್ಜನ್ಯವನ್ನು ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ತೀವ್ರವಾಗಿ ಖಂಡಿಸುತ್ತದೆ. ಜಿಲ್ಲಾಧಿಕಾರಿ ಹಾಗೂ ಪೊಲೀಸ್ ಅಧಿಕಾರಿಗಳಿಗೆ ದೂರು ನೀಡಿದರೂ ಕ್ರಮ ಕೈಗೊಳ್ಳಲಾಗುತ್ತಿಲ್ಲ. ಕೆಲ ಕಂದಾಯ ಅಧಿಕಾರಿಗಳು ನಿಯಮಬಾಹಿರವಾಗಿ ವರ್ತಿಸುತ್ತಿದ್ದು, ಮೇಲಾಧಿಕಾರಿಗಳು ತಕ್ಷಣ ಗಮನಹರಿಸಬೇಕೆಂದು ಆಗ್ರಹಿಸಿದರು.

ಈ ಭೂಮಿ ವಿವಾದವು ಬಡವರ ವಿರುದ್ಧ ನಡೆದ ದೀರ್ಘಕಾಲದ ಸಂಚು ಆಗಿದ್ದು, ಸಂಪೂರ್ಣ ತನಿಖೆ ನಡೆಸಿ ನ್ಯಾಯ ಒದಗಿಸಬೇಕೆಂದು ಮನವಿ ಮಾಡಿದರು. ಎನ್.ಪ್ರತಾಪ್ ರೆಡ್ಡಿಯವರ ಭೂ ಹಗರಣಗಳ ಬಗ್ಗೆ ನ್ಯಾಯಾಂಗ ತನಿಖೆ ನಡೆಸಿ, ಬಡವರಿಗೆ ಸೂಕ್ತ ರಕ್ಷಣೆ ನೀಡಬೇಕೆಂದು ಸಮಿತಿ ಒತ್ತಾಯಿಸುತ್ತದೆ. ಈ ಸಂದರ್ಭದಲ್ಲಿ ಮಹೇಶ್, ಗೋಪಿ, ಕುಮಾರ್ ಸಮತಲ್, ಮೋಹನ್ ಧಾರಾಮಿಲ್ಲ, ವೀರೇಶ್, ಸಿದ್ದರಾಜು ಸೇರಿದಂತೆ ಭೂಮಿ ಮತ್ತು ವಸತಿ ಹಕ್ಕು ಹೋರಾಟ ಸಮಿತಿಯ ಮುಖಂಡರು ಉಪಸ್ಥಿತರಿದ್ದರು.

# ಅರ್ಥಪೂರ್ಣ ಗಣರಾಜ್ಯೋತ್ಸವ ಆಚರಣೆಗೆ ನಿರ್ಧಾರ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲಾಡಳಿತದ ವತಿಯಿಂದ ಜನವರಿ 26 ರಂದು ಜರುಗಲಿರುವ ಗಣರಾಜ್ಯೋತ್ಸವವನ್ನು ಅರ್ಥಪೂರ್ಣ, ವಿಶಿಷ್ಟ ಹಾಗೂ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗಣರಾಜ್ಯೋತ್ಸವ ಆಚರಣೆ ಕುರಿತು ಜರುಗಿದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜ.26 ಬೆಳಿಗ್ಗೆ 8 ಗಂಟೆಗೆ ಜಿಲ್ಲಾಡಳಿತ ಭವನದ ಕಟ್ಟಡದ ಮೇಲೆ ಜಿಲ್ಲಾಧಿಕಾರಿಗಳಿಂದ ಧ್ವಜಾರೋಹಣ, 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಉಸ್ತುವಾರಿ ಸಚಿವರಿಂದ ಧ್ವಜಾರೋಜಹಣ ಹಾಗೂ ಸಚಿವರಿಂದ ಗಣರಾಜ್ಯೋತ್ಸವದ ಸಂದೇಶದ ನಂತರ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಪಥಸಂಚಲನ ಕಾರ್ಯಕ್ರಮದಲ್ಲಿ ಪೋಲಿಸ್, ಗೃಹರಕ್ಷಕ ದಳ, ಸೇವಾದಳ, ಸ್ಕೌಟ್ ಆ್ಯಂಡ್ ಗೈಡ್ಸ್, ಎನ್.ಸಿ.ಸಿ. ಕೆಡೆಟ್‌ಗಳನ್ನು ಆಹ್ವಾನಿಸಲು ಸೂಚಿಸಲಾಯಿತು. ಧ್ವಜಾರೋಹಣ ವ್ಯವಸ್ಥೆ ಮಾಡಲು ಭಾರತ ಸೇವಾದಳ, ಪೋಲಿಸ್ ಇಲಾಖೆ, ತಹಶೀಲ್ದಾರ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿಗಳಿಗೆ ವಹಿಸಲಾಯಿತು. ಕಾರ್ಯಕ್ರಮಗಳ ಸಿದ್ದತೆಗೆ ಸಮಿತಿಗಳನ್ನು ರಚಿಸಲಾಗಿದ್ದು, ಪೂರ್ವ ತಯಾರಿಗಾಗಿ ಉಪ ಸಮಿತಿಗಳ ಸಭೆ ಕರೆದು ಬೇಕಾಗುವ ಎಲ್ಲ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲು ಸೂಚಿಸಿದರು.

ಕ್ರೀಡಾಂಗಣದಲ್ಲಿ ವೇದಿಕೆ ನಿರ್ಮಾಣ, ಗಣ್ಯರಿಗೆ ಶಾಸಕರಿಗೆ, ಸಂಸದರುಗಳಿಗೆ ಹಾಗೂ ಪತ್ರಕರ್ತರಿಗೆ ಸೂಕ್ತ ಆಸನಗಳ ವ್ಯವಸ್ಥೆ, ಧ್ವನಿವರ್ಧಕ ಹಾಗೂ ಜನರೇಟರ್ ವ್ಯವಸ್ಥೆಯನ್ನು ಕೈಗೊಳ್ಳಲು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿ ಸಿದರು.

ಜಿಲ್ಲಾಡಳಿತ ಭವನ ಹಾಗೂ ತಾಲೂಕಭವನಕ್ಕೆ ವಿದ್ಯುತ್ ಅಲಂಕಾರ ಮಾಡುವಂತೆ ತಿಳಿಸಲಾಯಿತು. ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿಗಳಿಗೆ ಸನ್ಮಾನಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಪೋಲಿಸ್ ಬಂದೋಬಸ್ತಿ ವ್ಯವಸ್ಥೆ ಮಾಡುವಂತೆ ಪೋಲಿಸ್ ಇಲಾಖೆಗೆ ಸೂಚಿಸಲಾಯಿತು. ರಾಷ್ಟ್ರೀಯ ಕಾರ್ಯಕ್ರಮವಾಗಿರುವದರಿಂದ ಜಿಲ್ಲೆಯ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಲು ಅಪರ ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಸಭೆಯಲ್ಲಿ ಆಹಾರ ಇಲಾಖೆಯ ಜಂಟಿನಿರ್ದೇಶಕ ಶ್ರೀಶೈಲ ಕಂಕಣವಾಡಿ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ರವೀಂದ್ರ ಹಕಾಟಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಪ್ರವಾಸೋದ್ಯಮ ಇಲಾ ಖೆಯ ಉಪನಿದೇಶಕ ಜಿ.ಎಸ್.ಹಿತ್ತಲಮನಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಚಾಲುಕ್ಯ ಉತ್ಸವದ ಸಿದ್ಧತೆ ಪರಿಶೀಲಿಸಿದ ಡಿಸಿ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಚಾಲುಕ್ಯರ ಗತಕಾಲದ ವೈಭವವನ್ನು ಸಾರುವ ಚಾಲುಕ್ಯ ಉತ್ಸ–2026 ಹಿನ್ನಲೆಯಲ್ಲಿ ಬಾದಾಮಿ, ಪಟ್ಟದಕಲ್ಲ ಹಾಗೂ ಐಹೊಳೆಗೆ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧ ಕುರೇರ ಹಾಗೂ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ ಗುರುವಾರ ಭೇಟಿ ನೀಡಿ ಸಿದ್ದತೆ ಪರಿಶೀಲಿಸಿದರು. ಜನವರಿ 19 ರಂದು ಬಾದಾಮಿ, 20 ರಂದು ಪಟ್ಟದಕಲ್ಲ ಹಾಗೂ 21 ರಂದು ಐಹೊಳೆಯಲ್ಲಿ ಉತ್ಸವ ಜರುಗಲಿದ್ದು,

ಮುಖ್ಯವೇದಿಕೆಯ ಸ್ಥಳ ಪರಿಶೀಲಿಸಿ, ಸಿದ್ದತೆಗಳ ಮಾಹಿತಿ ಪಡೆದು ಪರಿಶೀಲನೆ ನಡೆಸಿದರು. ಚಾಲುಕ್ಯ ಉತ್ಸವವನ್ನು ಅದ್ದೂರಿಯಾಗಿ ಆಚರಿಸಲು ಉತ್ಸವದ ಸಿದ್ದತೆ ಭರದಿಂದ ಸಾಗಿದ್ದು, ಬೃಹತ್ ವೇದಿಕೆ ಹಾಕಲಾಗುತ್ತಿದ್ದು, ಸಾರ್ವಜನಿಕರ ವೀಕ್ಷಣೆಗೆ ಆಸನಗಳ ವ್ಯವಸ್ಥೆ, ಪಾರ್ಕಿಂಗ್ ಹಾಗೂ ಶೌಚಾಲಯಗಳ ವ್ಯವಸ್ಥೆ ಮಾಡುವಂತೆ ವಿವಿಧ ಸಮೀತಿಗಳ ನೇತೃತ್ವ ವಹಿಸಿರುವ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಈ ಸಮಯದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಹುನಗುಂದ ತಹಶೀಲ್ದಾರ, ಪ್ರದೀಪಕುಮಾರ ಹಿರೇಮಠ, ಉಪ ತಹಶೀಲ್ದಾರ ಎಸ್.ಬಿ.ಬೊನ್ನವರ ಸೇರಿದಂತೆ ಇತರೆ ಅಧಿಕಾರಿಗಳು ವಿವಿಧ ಸಮಿತಿಯ ಸದಸ್ಯರು ಇದ್ದರು. ಜನೇವರಿ 17 ರಿಂದ 20ರವರೆಗೆ ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆವರೆಗೆ ಬಾದಾಮಿ ಪಟ್ಟಣದ ವೀರಪುಲಕೇಶಿ ಮಹಾವಿದ್ಯಾಲಯದ ಕ್ರೀಡಾ ಮೈದಾನದಲ್ಲಿ "Badami by Sky" ಹೆಲಿ ಪ್ರವಾಸೋದ್ಯಮ(ಜಾಯ್ ರೈಡ್) ಸೇವೆಯನ್ನು M/s Thumby Aviation Pvt.Ltd. ವತಿಯಿಂದ ಆಯೋಜಿಸಲಾಗುತ್ತಿದೆ. ಹೆಲಿಕಾಪ್ಟರ ಏರಿ ಆಕಾಶದಿಂದ ಚಾಲುಕ್ಯರ ವೈಭವ ಕಣ್ತುಂಬಿಕೊಳ್ಳಬಹುದಾಗಿದೆ.

ಬಾದಾಮಿ ಪಟ್ಟಣದ ಪ್ರಸಿದ್ದ ಮರಳು ಶಿಲೆಯ ಬೆಟ್ಟಗಳು, ವಿಶ್ವವಿಖ್ಯಾತ ಗುಹಾಂತರ ದೇವಾಲಯಗಳು, ಅಗಸ್ತ್ಯ ತೀರ್ಥ ಹೊಂಡ, ಚಾಲುಕ್ಯರ ಕಾಲದ ಕೋಟೆ, ಬನಶಂಕರಿ ದೇವಸ್ಥಾನ ಮತ್ತು ಹರಿದ್ರಾನಾಥ ಪುಷ್ಕರಣಿ, ಇತ್ಯಾದಿ ಪ್ರವಾಸಿ ಆಕರ್ಷಣೆಗಳ ಮನಮೋಹಕ ದೃಶ್ಯಗಳನ್ನು ವೈಮಾನಿಕವಾಗಿ ಕಣ್ತುಂಬಿಸಿಕೊಳ್ಳಬಹುದಾಗಿದೆ. ಬುಕಿಂಗ್ ಹಾಗೂ ಇತರ ಹೆಚ್ಚಿನ ಮಾಹಿತಿಗಾಗಿ ಬಾಹುಬಲಿ(ಮೊ:9740668512) ಗೋಪಾಲ ಹಿತ್ತಲಮನಿ (ಮೊ:7829538950) ಇವರನ್ನು ಸಂಪರ್ಕಿಸುವಂತೆ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹೆಲಿಕಾಪ್ಟರ ವ್ಯವಸ್ಥೆ**

ಚಾಲುಕ್ಯ ಉತ್ಸವ ಅಂಗವಾಗಿ ಬಾದಾಮಿ ಚಾಲುಕ್ಯರ ಪ್ರಮುಖ ಸ್ಥಳಗಳ ವೀಕ್ಷಣೆಗೆ ಹೆಲಿಕಾಪ್ಟರ ವ್ಯವಸ್ಥೆ ಮಾಡಲಾಗಿದೆ. ಹೆಲಿ ಟೂರಿಜಂ ಹೆಸರಿನಲ್ಲಿ ಸೌಲಭ್ಯ ಈ ಸೌಲಭ್ಯ ಕಲ್ಪಿಸಲಾಗಿದೆ.



# ಶಬರಿಮಲೆ ಸಂಪ್ರದಾಯದಂತೆ ಪಡಿಪೂಜೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ನಗರದ ರಾಘವೇಂದ್ರ ಕಾಲೋನಿ ಎರಡನೇ ಹಂತದಲ್ಲಿರುವ ಶ್ರೀ ಶಬರಿಮಲೆ ಸ್ವಾಮಿ ಅಯ್ಯಪ್ಪ ದೇವಸ್ಥಾನದಲ್ಲಿ ಜನವರಿ 14ರಂದು ಶಬರಿಮಲೆ ಸಂಪ್ರದಾಯದಂತೆ ವಿಶೇಷ 18 ಮೆಟ್ಟಿಲುಗಳ ಪಡಿಪೂಜೆ ಶ್ರದ್ಧಾ ಭಕ್ತಿ ಭಾವದಿಂದ ವೈಭವವಾಗಿ ಜರುಗಿತು.

ಕೇರಳ ಮೂಲದ ಪ್ರಸಿದ್ಧ ತಂತ್ರಿಗಳಾದ ಬ್ರಹ್ಮಶ್ರೀ ಶ್ರೀರಂಗಂ ಸರುಣ್ಮ ಮೋಹನ್ ತಂತ್ರಿ ಸ್ವಾಮಿಜಿಯವರ ನೇತೃತ್ವದಲ್ಲಿ, ದೇವಸ್ಥಾನದ ಟ್ರಸ್ಟ್ ಅಧ್ಯಕ್ಷರಾದ ಜಯಪ್ರಕಾಶ್ ಗುಪ್ತ ಅವರ ಸಮ್ಮುಖದಲ್ಲಿ ಪೂಜಾ ಕಾರ್ಯಕ್ರಮ ನಡೆಯಿತು.

ಶ್ರೀ ಶಬರಿ ಅಯ್ಯಪ್ಪ ಟ್ರಸ್ಟ್ ವತಿಯಿಂದ ಆಯೋಜಿಸಲಾದ ಈ ಕಾರ್ಯಕ್ರಮವು ಸಂಜೆ 7 ಗಂಟೆಯಿಂದ ಆರಂಭಗೊಂಡು, ಕೇರಳದ ಶಬರಿಮಲೆ ಕ್ಷೇತ್ರದಲ್ಲಿ ನಡೆಯುವಂತೆಯೇ ಸಂಪ್ರದಾಯಬದ್ಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಪಡಿಪೂಜೆ ನೆರವೇರಿಸಲಾಯಿತು. ಭಕ್ತಿಭಾವದಿಂದ ನಡೆದ ಈ ಪೂಜೆಯಲ್ಲಿ ಅನೇಕ ಭಕ್ತರು ಭಾಗವಹಿಸಿ ಪುಣ್ಯ ಸಂಪಾದಿಸಿದರು.

ಈ ಸಂದರ್ಭದಲ್ಲಿ ಅಯ್ಯಪ್ಪ ಮಾಲಾಧಾರಿಗಳು ಸೇರಿದಂತೆ ನಗರದ ಅನೇಕ ಭಕ್ತರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಸ್ವಾಮಿಯ ದರ್ಶನ ಪಡೆದು ಪ್ರಸಾದ ಸ್ವೀಕರಿಸಿ ಶ್ರೀ ಅಯ್ಯಪ್ಪ ಸ್ವಾಮಿಯ ಕೃಪೆಗೆ ಪಾತ್ರರಾದರು.

# ಸಿದ್ದರಾಮನಂದ ಮಹಾಸ್ವಾಮಿಗಳ ಲಿಂಗೈಕ್ಯ ಭಾವಪೂರ್ಣ ಶ್ರದ್ಧಾಂಜಲಿ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಪರಮಪೂಜ್ಯ ಶ್ರೀ ಕಾಗಿನೆಲೆ ಕನಕ ಗುರುಪೀಠ, ಗುಲ್ಬರ್ಗ ವಿಭಾಗದ ಮಹಾಸಂಸ್ಥಾನದ ಪೀಠಾಧಿಪತಿಗಳಾದ ಶ್ರೀ ಶ್ರೀ ಶ್ರೀ ಸಿದ್ದರಾಮನಂದ ಮಹಾಸ್ವಾಮಿಗಳು ಗುರುವಾರ ಬೆಳಿಗ್ಗೆ 4 ಗಂಟೆಗೆ ಲಿಂಗೈಕ್ಯರಾಗಿದ್ದಾರೆ. ಶ್ರೀಗಳ ನಿಧನದ ಸುದ್ದಿ ಹಾಲುಮತ ಸಮಾಜ ಸೇರಿದಂತೆ ಕುರುಬ ಸಮುದಾಯದ ಬಂಧುಗಳಲ್ಲಿ ತೀವ್ರ ಶೋಕವನ್ನುಂಟುಮಾಡಿದೆ.

ಸಮಾಜದ ಏಕತೆ, ಧಾರ್ಮಿಕ ಜಾಗೃತಿ ಹಾಗೂ ಸಾಮಾಜಿಕ ಸೇವೆಗಳಿಗೆ ಅಪಾರ ಕೊಡುಗೆ ನೀಡಿದ ಮಹಾನ್ ಸಂತರಾಗಿದ್ದ ಶ್ರೀ ಸಿದ್ದರಾಮನಂದ ಮಹಾಸ್ವಾಮಿಗಳ ಲಿಂಗೈಕ್ಯವು ಸಮಾಜಕ್ಕೆ ಭರಿಸಲಾಗದ ನಷ್ಟವಾಗಿದೆ ಎಂದು ಕುರುಬ ಸಮುದಾಯದ ಮುಖಂಡರು ಕಂಬನಿ ಮಿಡಿದರು.

ಶ್ರೀಗಳ ಆತ್ಮಕ್ಕೆ ಶಾಂತಿ ಸಿಗಲೆಂದು ಬಳ್ಳಾರಿ ಜಿಲ್ಲಾ ಕುರುಬರ ಸಂಘದ ವತಿಯಿಂದ ಇಂದು ಸಂಜೆ ದೇವಿನಗರದಲ್ಲಿರುವ ಸಂಘದ ಕಚೇರಿಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು, ನಿರ್ದೇಶಕರು, ಸದಸ್ಯರು ಹಾಗೂ ಹಾಲುಮತ ಸಮುದಾಯದ ಅನೇಕರು ಪಾಲ್ಗೊಂಡು ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಅಂತಿಮ ನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಮಾಜದ ಪ್ರಧಾನ ಕಾರ್ಯದರ್ಶಿ ಕೆ. ಮೋಹನ್, ಶ್ರೀ ಸಿದ್ದರಾಮನಂದ ಮಹಾಸ್ವಾಮಿಗಳ ಆದರ್ಶಗಳು, ಸಂದೇಶಗಳು ಹಾಗೂ ಸಮಾಜಮುಖಿ ಚಿಂತನೆಗಳು ಮುಂದಿನ ಪೀಳಿಗೆಗೆ ಸದಾ ಮಾರ್ಗದರ್ಶಕವಾಗಿವೆ ಎಂದರು.

ಈ ವೇಳೆ ಸಮುದಾಯದ ಮುಖಂಡರಾದ ಬಜಾರಪ್ಪ, ಸಂಗನಕಲ್ಲು ಲಿಂಗರಾಜು, ಗೋನಾಳ್ ಮಾನಯ್ಯ, ಓಪಿಡಿ ರಾಮಚಂದ್ರ, ಮಲ್ಲೇಶ್ವರಿ, ಪಿ. ಶೇಖಲಿಂಗ ಸಿರವಾರ, ಡಿ. ಗಾದಿಲಿಂಗಪ್ಪ, ಕೆ. ರಾಮಾಂಜಿನಿ, ಕೆ. ಸುರೇಶ್, ಗೋನಾಳ್ ಎಂ. ತಿಮಪ್ಪ, ದೇವರಾಜ್, ಗಾದಿಲಿಂಗ ಅಮರಪುರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವೇಮನರ ಸಂದೇಶಗಳು ನೆಮ್ಮದಿಯ ಬದುಕಿಗೆ ಮಾರ್ಗದರ್ಶಿ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಮಹಾಯೋಗಿ ವೇಮನರ ಸಾಹಿತ್ಯ ಓದಿ, ಅರ್ಥೈಸಿಕೊಂಡು, ಪಾಲಿಸಿ ನಡೆದವರ ಜೀವನಕ್ಕೆ ನೆಮ್ಮದಿ ಕೊಡುವುದರ ಜೊತೆಗೆ ಬದುಕನ್ನು ಸುಂದರಗೊಳಿಸುತ್ತದೆ ಎಂದು ಬೇಲೂರಿನ ಗುರುಬಸವೇಶ್ವರ ವಿರಕ್ತಮಠದ ಮಹಾಂತ ಬಸವಲಿಂಗ ಸ್ವಾಮೀಜಿ ಹೇಳಿದರು.ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಶುಕ್ರವಾರ ಹೇಮ ವೇಮನ ಸದ್ಬೋಧನ ಪೀಠ ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ವೇಮನರ ವಚನ ಕಂಠಪಾಠ ಹಾಗೂ ವಚನ ಗಾಯನ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಸ್ವಾಮೀಜಿ, ವೇಮನ ಸಾಹಿತ್ಯ ಅರ್ಥಪೂರ್ಣ ಬದುಕಿಗೆ ದಾರಿದೀಪವಾಗಿದೆ ಎಂದರು.

ವಿದ್ಯಾರ್ಥಿಗಳು ಸಾಧನೆಯ ಕನಸು ಕಾಣಬೇಕು. ಅದನ್ನು ನನಸು ಮಾಡಿಕೊಳ್ಳುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ, ನಿರಂತರ ಶ್ರಮ ವಹಿಸಬೇಕು. ಸಂಸ್ಕಾರವಂತರಾಗಿ ಬದುಕುವ ಪರಿಯನ್ನು ಕಲಿಯಬೇಕು ಎಂದ ಬಸವಲಿಂಗ ಸ್ವಾಮೀಜಿ, ನಮ್ಮನ್ನು ಹೆತ್ತವರು, ನಮಗೆ ಅಕ್ಷರ ಕಲಿಸಿ ಜ್ಞಾನಿಯನ್ನಾಗಿ ಮಾಡಿದ ಶಿಕ್ಷಕರು ಹಾಗೂ ನಮ್ಮ ಬದುಕಿಗೆ ಆಧ್ಯಾತ್ಮದ ಬೆಳಕನ್ನು ನೀಡಿರುವ ಮಹಾಯೋಗಿ ವೇಮನರಂತಹ ಜ್ಞಾನಿಗಳು, ಶರಣರು, ಮಹಾತ್ಮರು ನಮ್ಮ ನಮ್ಮ ಪಾಲಿನ ಹಿರೋಗಳು ಎಂಬುದನ್ನು ತಿಳಿಯಬೇಕು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ನಿವೃತ್ತ ಶಿಕ್ಷಣಾಧಿಕಾರಿ ಎಚ್.ಜಿ.ಮಿರ್ಜಿ ಮಾತನಾಡಿ, ಮಹಾಯೋಗಿ ವೇಮನರ ಉತ್ಕೃಷ್ಟ ವಚನಗಳನ್ನು ತಿಳಿದು ನಡೆದರೆ ಜೀವನದಲ್ಲಿ ಖಂಡಿತವಾಗಿಯೂ ಬದಲಾವಣೆಯಾಗುತ್ತದೆ. ಮನುಷ್ಯನ ಬದುಕಿನ ದಾರಿ ಹೇಗಿರಬೇಕು, ಹೇಗಿದ್ದರೆ ಬದುಕು ಸುಂದರ ಎಂಬುದನ್ನು ಅವರು ತಮ್ಮ ವಚನಗಳ ಮೂಲಕ ಮನುಕುಲಕ್ಕೆ ಸಂದೇಶ ನೀಡಿದ್ದಾರೆ ಎಂದರು.ಅತಿಥಿಗಳಾಗಿದ್ದ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಅಧ್ಯಕ್ಷ ಗದಿಗೆಪ್ಪ ಅರಕೇರಿ ಹಾಗೂ ನಿವೃತ್ತ ಶಿಕ್ಷಕ ಕೆ.ಪಿ.ಅರಿಷಿಣಗೋಡಿ ಮಾತನಾಡಿದರು. ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಪಂಡಿತ ಮಾಚಾ ಅಧ್ಯಕ್ಷತೆ ವಹಿಸಿದ್ದರು. ಹೇಮ ವೇಮನ ಸದ್ಬೋಧನ ಪೀಠದ ಕಾರ್ಯದರ್ಶಿ ಟಿ.ಎಚ್.ಸನ್ನಪ್ಪನವರ, ನಿವೃತ್ತ ಶಿಕ್ಷಕ ಜಿ.ಜಿ.ಚಿತ್ತರಗಿ, ನೀಲಪ್ಪ ಬಾಳಕ್ಕನವರ, ವಿಶ್ವಭಾರತಿ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಹನಮಂತ ಮಾದರ ಅತಿಥಿಗಳಾಗಿದ್ದರು.

ಕಾರ್ಯಕ್ರಮದಲ್ಲಿ ವೇಮನರ ವಚನ ಕಂಠಪಾಠ ಹಾಗೂ ವಚನ ಗಾಯನ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನೀಲಪ್ಪ ಬಾಳಕ್ಕನವರ, ವೆಂಕಟೇಶ ತಿಮ್ಮಾಪೂರ ಹಾಗೂ ಟಿ.ಎಚ್.ಸನ್ನಪ್ಪನವರ ನಗದು ಬಹುಮಾನ ನೀಡಿದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಎಚ್.ಬಿ.ಗೋಣಿ ಸ್ವಾಗತಿಸಿದರು. ಎನ್.ಬಿ.ಮದಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಎಂ.ಕಾಮಾ ನಿರೂಪಿಸಿದರು.

**ಸ್ಪರ್ಧಾ ವಿಜೇತರು:** ವಚನ ಕಂಠಪಾಠ ಸ್ಪರ್ಧೆಯಲ್ಲಿ 10 ನೇ ತರಗತಿಯಲ್ಲಿ ಸ್ನೇಹಾ ನಿಂಬಲಗುಂಡಿ ಪ್ರಥಮ, ಮಲ್ಲಮ್ಮ ನಿಂಬಲಗುಂದಿ ದ್ವಿತೀಯ, ದುರ್ಗಾ ಮಾದರ ತೃತೀಯ. 9 ನೇ ತರಗತಿಯಲ್ಲಿ ಭಾಗ್ಯಾ ಮೇಟಿ ಪ್ರಥಮ, ಸ್ಪಂದನಾ ಹಳದೂರ ದ್ವಿತೀಯ ಹಾಗೂ ಕೀರ್ತಿ ಚಲವಾದಿ ತೃತೀಯ. 8 ನೇ ತರಗತಿಯಲ್ಲಿ ಸಂಜನಾ ಮಲಘಾಣ ಪ್ರಥಮ, ಸುಪ್ರಿತಾ ಕಿಷ್ಟನ್ನವರ ದ್ವಿತೀಯ ಹಾಗೂ ಸವಿತಾ ಕಮದಾಳ ತೃತೀಯ ಸ್ಥಾನ ಗಳಿಸಿದ್ದಾರೆ.

ವಚನ ಗಾಯನ ಸ್ಪರ್ಧೆಯಲ್ಲಿ 10 ನೇ ತರಗತಿಯಲ್ಲಿ ರಂಜಿತಾ ಪಾತ್ರೋಟಿ ಪ್ರಥಮ, ಕೀರ್ತಿ ಮಾದರ ದ್ವಿತೀಯ, ನೀಲಮ್ಮ ಮಲಘಾಣ ತೃತೀಯ. 9 ನೇ ತರಗತಿಯಲ್ಲಿ ಶ್ರೇಯಾ ಹುಡೇದಮನಿ ಪ್ರಥಮ, ಯಮುನಾಬಿ ನದಾಫ ದ್ವಿತೀಯ ಹಾಗೂ ಸ್ಪಂದನಾ ತೃತೀಯ ಮತ್ತು 8 ನೇ ತರಗತಿಯಲ್ಲಿ ಸ್ನೇಹಾ ಮಾದರ ಪ್ರಥಮ, ಸವಿತಾ ಮಾದರ ದ್ವಿತೀಯ ಹಾಗೂ ವಿಜಯಲಕ್ಷ್ಮೀ ಪಾತ್ರೋಟ ತೃತೀಯ ಸ್ಥಾನ ಪಡೆದಿದ್ದಾರೆ.

# ಸಮಾಜದ ಏಳಿಗೆಗೆ ಅಧ್ಯಯನವೇ ಮುನ್ನುಡಿ: ಡಾ.ಶಿವಶಂಕರ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜ್ಞಾನ ವಿನಿಮಯ ಕೌಶಲ್ಯ ಅಭಿವೃದ್ಧಿಯಲ್ಲಿ ಸಂಶೋಧನೆಗಳು ಮುಖ್ಯವಾಗಿದ್ದು ಸಮಾಜದ ಏಳಿಗೆಗೆ ಅಧ್ಯಯನವೇ ಮುನ್ನಡಿಯಾಗಿದೆ ಎಂದು ಬೆಂಗಳೂರಿನ ಲಿವನ್ ಬಯೋಲಾಬ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಡಾ.ಶಿವಶಂಕರ ಎನ್.ಜಿ ಹೇಳಿದರು

ನಗರದ ಬಿ.ವಿ.ವಿ.ಸಂಘದ ಹಾನಗಲ್ ಶ್ರೀ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ಬೈಯೋಇನೋವೇಷನ ಸೆಂಟರ್, ಹಾಗೂ ಲೈವಾನ್ ಬಯೋಲ್ಯಾಬ್ಸ್ ಬೆಂಗಳೂರು ಮತ್ತು ಬಿ.ವಿ.ಜಿ. ಲೈಫ್ ಸೈನ್ಸ್ ಪುಣೆ ಇವರುಗಳ ಸಹಯೋಗದಲ್ಲಿ ಶುಕ್ರವಾರ ಸಂಘದ ನೂತನ ಸಭಾಭವನದಲ್ಲಿ "ದಿ ಆರ್ಕಿಟೆಕ್ಚರ್ ಆಫ್ ರಿಸರ್ಚ ಲೈಫಸೈಕಲ್" ವಿಷಯದ ಮೇಲೆ ನಡೆಯಲಿರುವ ಎರಡು ದಿನಗಳ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭವಿಷ್ಯದ ಸಂಶೋಧನಾ ಚಟುವಟಿಕೆಗೆ ಇದು ಒಂದು ವೇದಿಕೆ ಆಗಲಿ. ಸಂಶೊಧನೆಗೆ ಪರಿಶೋಧನೆ, ವಿಶ್ಲೇಷಣೆ, ವಿನ್ಯಾಸ, ಅಭಿವೃದ್ಧಿ, ಪರೀಕ್ಷೆ, ಅನುಷ್ಠಾನ ಮತ್ತು ನಿರ್ವಹಣೆ ಇವುಗಳು ಮುಖ್ಯವಾಗಿದ್ದು, ಸಂಶೋಧನಾ ಪ್ರಬಂಧಗಳು ಸಮಾಜಕ್ಕೆ ಮತ್ತು ಸಮಾಜದ ಸುಧಾರಣೆಗೆ ಅವಶ್ಯಕವಾಗಿವೆ. ಸಂಶೋಧನೆಯು ಅತ್ಯುನ್ನತ ಮೌಲ್ಯವನ್ನು ಹೊಂದಿರುತ್ತದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾವಿದ್ಯಾಲಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ಸಾಸನೂರ, ಪ್ರಬಂಧವನ್ನು ನಾವು ಹೇಗೆ ಪ್ರಸ್ತುತ ಪಡಿಸುತ್ತೇವೆ ಎಂಬುದು ಹೆಚ್ಚು ಮುಖ್ಯವಾಗುತ್ತದೆ. ಪ್ರಬಂಧ ಮತ್ತು ಪ್ರಬಂಧದ ಪ್ರಸ್ತುತಿ ಹೆಚ್ಚು ಮೌಲ್ಯಯುತವಾಗಿರಲಿ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಾ.ವಿ.ಎಮ್ ಚಂದ್ರಶೇಕರ, ಕಾರ್ಯಾಗಾರದಲ್ಲಿ 350ಕ್ಕೂ ಹೆಚ್ಚು ಸಂಶೋಧಕರು ಭಾಗವಹಿಸಿದ್ದು, ಈ ಅಧಿವೇಶನವು ಸಂಶೋಧನಾ ಐಡಿಯಾ ಸಾಹಿತ್ಯ ಹುಡುಕಾಟದಿಂದ ವೈಜ್ಞಾನಿಕ ಸರ್ಚ್ ಇಂಜಿನ್‌ಗಳನ್ನು ಬಳಸಿಕೊಂಡು ಸಂಶೋಧನಾ ನೀತಿ ಶಾಸ್ತ್ರದವರೆಗೆ ಸಂಪೂರ್ಣ ಸಂಶೋಧನಾ ಜೀವನ ಚಕ್ರವನ್ನು ಸಮಗ್ರವಾಗಿ ಒಳಗೊಂಡಿದ್ದು, ಕಾರ್ಯಾಗಾರವು ಜ್ಞಾನ ವಿನಿಮಯ ಕೌಶಲ್ಯ ಅಭಿವೃದ್ಧಿ ಮತ್ತು ಭಾಗವಹಿಸುವವರಲ್ಲಿ ಸಂಶೋಧನಾ ದೃಷ್ಟಿಕೋನಕ್ಕೆ ಬಲವಾದ ವೇದಿಕೆಯಾಗಿದೆ ಎಂದರು.

ಡಾ.ಜಿ.ಜಗದೀಶ ಯುಎಸ್‌ಎ, ಡಾ.ಬಾಲಾಕುಮಾರ ಪಿಚೈ ತಂಜಾವೂರ ತಮಿಳನಾಡು, ಡಾ.ಶುಭದಾ ನಗರಕರ ಪುಣೆ, ಡಾ.ರಾಜರಾಜಶೇಖರನ್ ಯು.ಎಸ್.ಎ., ಡಾ.ಮನೀಶ್ ಬರವಾಲಿಯಾ ಬೆಳಗಾವಿ ಕಾರ್ಯಾಗಾರದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಎಸ್.ನಿಜಲಿಂಗಪ್ಪ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿ ಕಾರ್ಯಾದ್ಯಕ್ಷ ಅಶೋಕ ಸಜ್ಜನ, ಪ್ರಾಚಾರ್ಯ ಡಾ. ವೈ.ಶ್ರೀನಿವಾಸ, ಸಂಘಟನಾ ಕಾರ್ಯದರ್ಶಿ ಡಾ. ಚಂದ್ರಶೇಖರ ವಿ.ಎಮ್, ವೇದಿಕೆಯಲ್ಲಿ ಉಪಸ್ಥರಿತರಿದ್ದರು. ಮಧು ಮತ್ತು ಸಂಗಡಿಗರು ಪ್ರಾರ್ಥಿಸಿದರು. ಡಾ.ಬಿ.ಎಸ್. ಕಿತ್ತೂರ, ಡಾ.ಅನಿತಾ ದೇಸಾಯಿ ಪರಿಚಯಿಸಿದರು. ಡಾ.ಲಕ್ಷ್ಮಣ ವಿಜಾಪುರ ವಂದಿಸಿದರು. ಸಂ–ಜಯ ಹಾವರಗಿ ಹಾಗೂ ಸುಷ್ಮಿತಾ ಮೂಡಲಗಿ ನಿರೂಪಿಸಿದರು.

# ಶ್ರೀ ಕುಮಾರೇಶ್ವರ ಜ್ಯೋತಿ ರಥಯಾತ್ರೆ: ಪ್ರಭಾತ ಪೇರಿ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೊಟೆ:**

ನಗರದ ಟೀಕಿನಮಠದ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ ನಿಮಿತ್ತ ಕಾರಣಿಕ ಯುಗ ಪುರುಷ ಕುಮಾರೇಶ್ವರ ಜ್ಯೋತಿ ರಥಯಾತ್ರೆ ಹಾಗೂ ಪ್ರಭಾತ ಪೇರಿ ಶೃಧ್ಧಾಭಕ್ತಿಯಿಂದ ಶುಕ್ರವಾರ ಜರುಗಿತು.

ಟೀಕಿನಮಠದಲ್ಲಿ ಕುಮಾರೇಶ್ವರ ಜ್ಯೋತಿ ರಥಯಾತ್ರೆಗೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಯಿತು. ಅಲ್ಲಿಂದ ಪ್ರಾರಂಭವಾದ ಜ್ಯೋತಿ ರಥಯಾತ್ರೆ ಹಾಗೂ ಪ್ರಭಾತಪೇರಿ ಪಶು ಆಸ್ಪತ್ರೆ ರಸ್ತೆ ಮೂಲಕ ಬಿವಿವಿ ಸಂಘದ ಆವರಣದಲ್ಲಿರುವ ಬೀಳೂರ ಅಜ್ಜನ ದೇವಸ್ಥಾನಕ್ಕೆ ಆಗಮಿಸಿತು.

ಸಂಘದ ಆವರಣದಲ್ಲಿರುವ ಸಂಘದ ಕಚೇರಿಯಲ್ಲಿ ಪೂಜೆ ನೆರವೇರಿದ ನಂತರ ಕಣವಿ ವೀರಭದ್ರೇಶ್ವರ ದೇವಸ್ಥಾನದ ಬಳಿ ಸಮಾರೋಪಗೊಂಡಿತು. ಟೀಕಿನಮಠದಿಂದ ಬಿ.ವಿ.ವಿ.ಸಂಘದವರೆಗೂ ಹಾಗೂ ಸಂಘದ ಆವರಣದಲ್ಲಿ ಬಣ್ಣ ಬಣ್ಣದ ರಂಗೋಲಿ ಹಾಕಿ ಪುಷ್ಪಮಳೆಯನ್ನುಗರೆದು ಮಹಿಳೆಯರು ಸ್ವಾಗತ ಕೋರಿದ್ದು ವಿಶೇಷವಾಗಿತ್ತು. ಪ್ರಭಾತ ಪೇರಿಯಲ್ಲಿ ಭಜನೆ ಹಾಗೂ ದೇವರ ನಾಮಸ್ಮರಣೆಯೊಂದಿಗೆ ಸಾವಿರಾರು ಜನ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಗುಳೆದಗುಡ್ಡದ ಒಪ್ಪತ್ತೇಶ್ವರ ಮಠದ ಅಭಿನವ ಒಪ್ಪತ್ತೇಶ್ವರ ಸ್ವಾಮಿಗಳು, ಪ್ರಭಾತಪೇರಿ ಮನಸ್ಸುಗಳನ್ನು ಒಂದುಗೂಡಿಸುವ ಧಾರ್ಮಿಕ ಆಚರಣೆ, ಹಬ್ಬದ ಸಂಭ್ರಮವಾಗಿದೆ. ಸಾಮಾಜಿಕ ಜಾಗೃತಿ ಅಥವಾ ದೇಶಭಕ್ತಿ, ಧಾರ್ಮಿಕತೆ ಸಂದೇಶವನ್ನು ಹರಡಲು ಬೆಳಿಗಿನ ಜಾವ ಬೇಗನೆ ಹೊರಡುವ ಒಂದು ಸಾಂಪ್ರಾದಾಯಿಕ ಮೆರವಣಿಯಾಗಿದ್ದು, ಇದರಲ್ಲಿ ಭಕ್ತಿಗೀತೆಗಳು, ಭಜನೆಗಳು ಮತ್ತು ವಾದ್ಯಗಳೊಂದಿಗೆ ಗ್ರಾಮದ ಬೀದಿಗಳಲ್ಲಿ ಪಾದಯಾತ್ರೆ ನಡೆಯುತ್ತರಿದ್ದು ಇದರಲ್ಲಿ ಸಮಸ್ತ ಭಕ್ತರು ಪಾಲ್ಗೊಳ್ಳಬೇಕು ಎಂದರು.

ಟೀಕಿನಮಠದ ಮಲ್ಲಿಕಾರ್ಜುನ ದೇಶಿಕರ, ಬೆಳಗಾವಿ ಕಾರಂಜಿಮಠದ ಶಿವಯೋಗಿದೇವರು, ಪ್ರಭಾತಪೇರಿ ಸಮಿತಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಪ್ರೊ.ರವಿ ಕೋಟೆನ್ನವರ, ವಿಜು ಅಂಗಡಿ, ಕುಮಾರ ಹಿರೇಮಠ, ಕುಮಾರ ಜಿಗಜಿನ್ನಿ, ಬಸವರಾಜ ಇಂಡಿ, ಬಸವರಾಜ ಮುಕ್ಕುಪಿ, ಚಂದ್ರಶೇಖರ ಶೆಟ್ಟರ, ಶರಣಪ್ಪ ಗುಳೆದ, ಬಿ.ಕೆ.ದೇಸಾಯಿ ಯಲ್ಲಪ್ಪ ಬೆಂಡಿಗೇರಿ, ಪ್ರಶಾಂತ ಉಗರಗೋಳ, ಯಮನಾಳ, ಸೂಲಿಗಾವಿ, ಸಂಗಣ್ಣ ಶಿರೂರ, ರುದ್ರಪ್ಪ ಕತ್ತಿ, ನಾನೇಗೌಡ ಪಾಟೀಲ,

ಮಲ್ಲಯ್ಯಸ್ವಾಮಿ ಕುಂದರಿಗಿಮಠ, ಶಾಂತಪ್ಪ ಬಾಡದ, ಪರಮೇಶ ಮಳ್ಳೂರ, ಗಂಗಯ್ಯ ಕೋಟೆ, ಶಂಕರ ತಾಳೊಕೋಟಿ, ವೀಜಯಲಕ್ಷ್ಮೀ ಭದ್ರಶೇಟ್ಟಿ, ಸರೋಜನಿ ಗಂಗಾವತಿ, ಸುಷ್ಮಾದೇವಿ ಒಡೆಯರ, ಸುರೇಖಾ ಸಬರದ, ಸುರೇಖಾ ದೇಶಪಾಂಡೆ, ರಾಜೇಶ್ವರಿ ತೆಗ್ಗಿ. ಜಯಶ್ರೀ ಹುಂಡೇಕಾರ, ಸುವರ್ಣ ಹೊರಗಿನಮಠ, ಸೇರಿದಂತೆ ವಿವಿಧ ಮಹಾವಿದ್ಯಾಲಯಗಳ ಪ್ರಾಚಾರ್ಯರು ಸಿಬ್ಬಂದಿ ಹಾಗು ವಿದ್ಯಾರ್ಥಿಗಳು ಸೇರಿದಂತೆ ಟೀಕಿನಮಠ ಎಲ್ಲ ಭಕ್ತಾಧಿಗಳು ಭಾಗವಹಿಸಿದ್ದರು

# ಜ.17 ರಂದು ವಿದ್ಯುತ್ ಕಡಿತ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯಲ್ಲಿ ವಿದ್ಯುತ್ ಲೈನುಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಜ.17 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಎಫ್–14 ರ ವ್ಯಾಪ್ತಿಯ ನಗರದ ಮಾರುತಿ ನಗರ, ಹುಸೇನ ನಗರ, ರಾಮಯ್ಯ ಕಾಲೋನಿ, ರಾಘವೇಂದ್ರ ಕಾಲೋನಿ 1ನೇ ಹಂತ, ಅನಂತಪುರ ರಸ್ತೆ, ಪಟೇಲ್ ನಗರ, ಎಸ್.ಎನ್.ಪೇಟೆ 1ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ, ದುರ್ಗಾ ಕಾಲೋನಿ, ವೆಂಕಟೇಶ್ವರ ನಗರ, ಎಚ್.ಎಲ್.ಸಿ. ಕಾಲೋನಿ, ಸತ್ಯ ಸಾಯಿ ಕಾಲೋನಿ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ಕಡಿತವಾಗಲಿದೆ.

ಹಾಗಾಗಿ ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗ ಕಚೇರಿಯಲ್ಲಿ ಜ.17 ರಂದು ಮಧ್ಯಾಹ್ನ 12 ಗಂಟೆಗೆ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆ ಆಯೋಜಿಸಲಾಗಿದ್ದು, ಕುಂದು ಕೊರತೆಗಳಿರುವ ವಿದ್ಯುತ್ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ತಮ್ಮ ದೂರುಗಳನ್ನು ಬಗೆಹರಿಸಿಕೊಳ್ಳಬಹುದು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

## ಕರುನಾಡಿನಲ್ಲಿ ನೆಮ್ಮದಿಯ

# ಗ್ಯಾರಂಟಿ

## ಯುವ ಸಬಲೀಕರಣದ ಸಂಕಲ್ಪ





- **ಯುವನಿಧಿ:** ಈ ಯೋಜನೆಯಡಿ ಪದವೀಧರರಿಗೆ ಪ್ರತಿ ತಿಂಗಳು **₹. 3,000,** ಡಿಪ್ಲೋಮಾ ಪದವೀಧರರಿಗೆ **₹. 1,500** ನಿರುದ್ಯೋಗ ಭತ್ಯೆ
- ಯುವ ಸಮೂಹಕ್ಕೆ ಉದ್ಯೋಗಾವಕಾಶ ಹೆಚ್ಚಿಸುವ ಹಾಗೂ ಸ್ಥಳೀಯವಾಗಿ ಕೌಶಲ್ಯ ಕಲಿಸಿ ಜಾಗತಿಕ ಮಟ್ಟದಲ್ಲಿ ಕೆಲಸ ಗಿಟ್ಟಿಸಲು ಸಜ್ಜಾಗಲು ತರಬೇತಿ ನೀಡುವ ಬಹುಕೌಶಲ್ಯ ಅಭಿವೃದ್ಧಿ ಕೇಂದ್ರ ಕಲಬುರಗಿಯಲ್ಲಿ ಆರಂಭ
- ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಯುವ ಕ್ರೀಡಾಪಟುಗಳಿಗಾಗಿ **2% ಹುದ್ದೆಗಳು** ಮೀಸಲು
- ಯುವಕರಿಗೆ ವಿದೇಶದಲ್ಲಿ ಉದ್ಯೋಗ ಕಲ್ಪಿಸುವ ಸಲುವಾಗಿ **ಅಂತಾರಾಷ್ಟ್ರೀಯ ವಲಸೆ ಕೇಂದ್ರ** ಸ್ಥಾಪನೆ
- ಯುವಜನರಿಗೆ ಉತ್ತಮ ಉದ್ಯೋಗ ಮತ್ತು ಉದ್ಯಮ ಅವಕಾಶಗಳನ್ನು ಒದಗಿಸಲು **ರಾಜ್ಯ ಕೌಶಲ್ಯ ನೀತಿ** ಜಾರಿ
- ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ **ಸ್ಕಿಲ್ ಅಕಾಡೆಮಿ** ಸ್ಥಾಪನೆ
- ಯುವ ಜನತೆಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ರಾಜ್ಯದ ಹಲವೆಡೆ **ಉದ್ಯೋಗ ಮೇಳಗಳ** ಆಯೋಜನೆ
- ವಿದೇಶದಲ್ಲಿ ವಿದ್ಯಾಭ್ಯಾಸ ಮಾಡಲು ಹೋಗುವ ವಿದ್ಯಾರ್ಥಿಗಳಿಗೆ ಐಎಂಸಿಕೆ ಮೂಲಕ ತರಬೇತಿ
- **ಯುವ ಸ್ಪಂದನ** - ಯುವಕರ ಮಾನಸಿಕ ಆರೋಗ್ಯದ ಬಗ್ಗೆ ಕಾಳಜಿ (ಈ ಯೋಜನೆ ದೇಶದಲ್ಲೇ ಮೊದಲು)

## ಕರ್ನಾಟಕ ನವ ನಿರ್ಮಾಣಕ್ಕೆ

# ಗ್ಯಾರಂಟಿ ಸರ್ಕಾರ...

**ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿ ಮಾಡುತ್ತಾ ನುಡಿದಂತೆ ನಡೆದು ಜನರ ವಿಶ್ವಾಸ ಗಳಿಸಿದ್ದೇವೆ.**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ